RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 107 ಪುಟ: 06 ಸೋಮವಾರ 24-03-2025

₹ 3 Mail:mussanje2010@gmail.com www.mussanjenews.com


# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

ಸುದ್ದಿ, ಜಾಹೀರಾತು ಹಾಗೂ ಪತ್ರಿಕೆಗೆ ಚಂದಾದಾರರಾಗಲು ಸಂಪರ್ಕಿಸಿ: 9448074878



ವೃತ್ತಿ ಬದುಕಲ್ಲಿ ಸಾಕಷ್ಟು ಏಳು-ಬೀಳು

ಹನಿಕಾನ್ಸರ್ಟ್‌ನಲ್ಲಿ ಯಶ್ ಭಾಗಿ

ಐಪಿಎಲ್‌ಗೆ ಡೇಂಜರಸ್ ಬೌಲರ್ ಪುಟ 6

Honourary Editor: Venkatesh

## ಸಂವಿಧಾನ ಬದಲಾವಣೆ ಹೇಳಿಕೆಗೆ ತೀವ್ರ ವಿರೋಧ; ಗದ್ದಲ-ಕೋಲಾಹಲ

# ರಾಜ್ಯಸಭೆಯಲ್ಲಿ ಪ್ರತಿಧ್ವನಿಸಿದ ಡಿಕೆ ಹೇಳಿಕೆ

**ನವದೆಹಲಿ:** ಮುಸ್ಲಿಂಮರಿಗೆ ರಾಜ್ಯದಲ್ಲಿ ನೀಡಲಾಗಿರುವ ಶೇ.4%ರಷ್ಟು ಮೀಸಲಾತಿಯನ್ನು ಜಾರಿಗೆ ತರಲು ಸಂವಿಧಾನ ಬದಲಿಸಲೂ ಸಿದ್ಧ ಎಂದು ಕರ್ನಾಟಕದ ಡಿಸಿಎಂ ನೀಡಿರುವ ಹೇಳಿಕೆ ಸೋಮವಾರ ರಾಜ್ಯಸಭೆಯಲ್ಲಿ ತೀವ್ರ ಗದ್ದಲಕ್ಕೆ ಕಾರಣವಾಯಿತು.

ಮುಸ್ಲಿಂ ಸಮುದಾಯಕ್ಕೆ ಮೀಸಲಾತಿ ನೀಡಿರುವುದು ಸತ್ಯ. ಅದನ್ನು ಜಾರಿಗೆತರಲು ಸಂವಿಧಾನವನ್ನೇ ಬದಲಿಸಲು ಸಿದ್ಧ ಎಂದು ಆತುರದ ಹೇಳಿಕೆ ನೀಡಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ಸೋಮವಾರ ಸದನದಲ್ಲಿ ಪ್ರತಿಧ್ವನಿಸಿತು.

ಈ ವಿಷಯವನ್ನು ಪ್ರಸ್ತಾಪಿಸಿದ ಕೇಂದ್ರ ಸಚಿವ ಜೆ.ಪಿ ನಡ್ಡಾ ಕರ್ನಾಟಕದಲ್ಲಿ ಡಿ.ಕೆಶಿವಕುಮಾರ್ ಅವರು ನೀಡಿರುವ ಹೇಳಿಕೆ ಅತಿರೇಕದ ಪರಮಾವಧಿ. ಅಂದು ಸಂವಿಧಾನಶಿಲ್ಪಿ ಬಾಬಾ ಸಾಹೇಬ ಅಂಬೇಡ್ಕರ್ ಅವರು ಚುನಾವಣೆಯಲ್ಲಿ ಸೋಲಿಸಿದ್ದ ಕಾಂಗ್ರೆಸ್ ಪಕ್ಷ ಇಂದು ಅವರು ರಚಿಸಿದ ಸಂವಿಧಾನವನ್ನೇ ಬದಲಾಯಿಸುವತ್ತಾ ಹೊರಟಿದೆ ಎಂದು ಪ್ರತಿಪಕ್ಷ ಕಾಂಗ್ರೆಸ್ ಅನ್ನು ತೀವ್ರವಾಗಿ ತರಟೆಗೆ ತೆಗೆದುಕೊಂಡರು.

ಈ ವಿಷಯದ ಬಗ್ಗೆ ರಾಜ್ಯದ ಸಂಸದರು ಲೋಕಸಭೆಯಲ್ಲಿ ಪ್ರಸ್ತಾಪ ಮಾಡಲು ತಯಾರಿ ನಡೆಸಿಕೊಂಡಿದ್ದರು. ಆದರೆ





ಅದಕ್ಕೂ ಮುನ್ನವೇ ರಾಜ್ಯ ಸಭೆಯಲ್ಲಿ ವಿಷಯವೆತ್ತಿದ ನಡ್ಡಾ ಅವರು, ಪ್ರತಿಪಕ್ಷದ ವಿರುದ್ಧ ಈ ವಿಷಯವಾಗಿ ಹರಿಹಾಯ್ದು, ಪಕ್ಷದ ನಾಯಕರುಗಳು ಕ್ಷಮೆ ಕೇಳಬೇಕು. ಹಾಗೂ ಡಿಕೆಶಿವಕುಮಾರ್ ಅವರಿಂದ ಹೇಳಿಕೆ ಹಿಂಪಡಿಸಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಧನಿಗೂಡಿಸಿದ ಸಚಿವ ರಿಜು ಅವರು, ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಸರ್ವಾಧಿಕಾರಿ ಧೋರಣೆ ಅನುಸರಿಸುತ್ತಿದೆ. ಅಧಿಕಾರ ಇದೆ ಎಂಬ ಮಾತ್ರಕ್ಕೆ ಎಲ್ಲವೂ ತನ್ನಿಂದ ಸಾಧ್ಯ ಅಂದುಕೊಳ್ಳಬಾರದು. ಸಂವಿಧಾನವನನು ಬದಲಾಯಿಸುವ ಹಕ್ಕು ಅವರಿಗಿಲ್ಲ. ಮೊದಲು ಹೇಳಿಕೆಯನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಈ ವೇಳೆ ಎದ್ದು ನಿಂತ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಸಂವಿಧಾನವನ್ನ ಯಾರೂ ಬದಲಿಸಲು ಸಾಧ್ಯವಿಲ್ಲ. ಅಂದು ಸಂವಿಧಾನ ಬದಲಿಸಲಾಗುವುದು ಪುಟ 2

## ನನ್ನ ಹೇಳಿಕೆ ತಿರುಚಲಾಗಿದೆ



**ಬೆಂಗಳೂರು:** "ಸಂವಿಧಾನ ಬದಲಾವಣೆ ಮಾಡುವುದಾಗಿ ನಾನು ಎಲ್ಲಿಯೂ ಹೇಳಿಲ್ಲ. ನನ್ನ ಹೇಳಿಕೆಯುನ್ನು ತಿರುಚಿ ಬಿಜೆಪಿ ಸುಖಾಸುಮ್ಮನೆ ಅಪಪ್ರಚಾರ ಮಾಡುತ್ತಿದೆ. ಇದರ ವಿರುದ್ಧ ಕಾನೂನು ಹೋರಾಟ ಮಾಡುವೆ " ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದ್ದಾರೆ.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಚಾನೆಲ್ ಒಂದಕ್ಕೆ ನೀಡಿರುವ ಸಂದರ್ಶನದಲ್ಲಿ ಮುಸ್ಲಿಮರಿಗೆ ಮೀಸಲು ನೀಡಲು ಸಂವಿಧಾನ ಬದಲಾವಣೆ ಮಾಡುವುದಾಗಿ ಹೇಳಿದ್ದೀರಿ ಎಂದು ಬಿಜೆಪಿಯವರು ಟ್ವಿಟರ್ ನಲ್ಲಿ ಹಾಗೂ ಸಂಸತ್ ನಲ್ಲಿ ಟೀಕೆ ಮಾಡುತ್ತಿರುವ ಬಗ್ಗೆ ಕೇಳಿದಾಗ, "ನಾನು ಹಾಗೆ ಹೇಳಿಯೇ ಇಲ್ಲ. ನನ್ನ ಹೇಳಿಕೆಯನ್ನು ಬಿಜೆಪಿ ತಿರುಚಿದೆ. ಕಳೆದ 36 ವರ್ಷಗಳಿಂದ ಶಾಸಕನಾಗಿ ವಿಧಾನಸಭೆಯಲ್ಲಿದ್ದೇನೆ.

ನನಗೂ ಸಾಮಾನ್ಯ ಜ್ಞಾನವಿದೆ. ಇಂತಹ ವಿಚಾರದಲ್ಲಿ ಜೆ.ಪಿ ನಡ್ಡಾ ಅವರಿಗಿಂತಲೂ ನಾನು ಉತ್ತಮ ಸೂಕ್ಷ್ಮತೆ ಇರುವ ರಾಜಕಾರಣಿ. ಆದರೆ ಬಿಜೆಪಿ ಜನಸಾಮಾನ್ಯರ ದಾರಿ ತಪ್ಪಿಸುತ್ತಿದೆ. ನಮ್ಮದು ರಾಷ್ಟ್ರೀಯ ಪಕ್ಷ. ಸುಳ್ಳು ಹೇಳಿಕೆ ಸೃಷ್ಟಿಸಿ, ನನ್ನ ಹೆಸರನ್ನು ಎಳೆದು ತರಲಾಗುತ್ತಿದೆ. ನಾನು ಈ ಬಗ್ಗೆ ಎಲ್ಲಿಯೂ ಹೇಳಿಕೆ ನೀಡಿಲ್ಲ" ಎಂದು ಹೇಳಿದರು.

"ನ್ಯಾಯಾಲಯಗಳ ತೀರ್ಪಿನ ಅನುಸಾರ ತಿದ್ದುಪಡಿ ತಂದಿರುವ ನಿದರ್ಶನವಿದೆ ಎಂದು ಹೇಳಿದ್ದೇನೆಯೇ ಹೊರತು, ಸಂವಿಧಾನವನ್ನು ಬದಲಾವಣೆ ಪುಟ 2



ಪರಿಶಿಷ್ಠ ಜಾತಿಗಳಲ್ಲಿ ಒಳಮೀಸಲಾತಿ ಕಲ್ಪಿಸುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಕಾವೇರಿ ನಿವಾಸದಲ್ಲಿ ಸೋಮವಾರ ಸಭೆ ನಡೆಸಲಾಯಿತು.ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್, ಸಚಿವರಾದ ಜಿ.ಪರಮೇಶ್ವರ್, ಹೆಚ್.ಸಿ.ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಆರ್.ಬಿ.ತಿಮ್ಮಾಪುರ್, ಪ್ರಿಯಾಂಕ್ ಖರ್ಗೆ, ಶಿವರಾಜ್ ತಂಗಡಗಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಸೇರಿ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೀಸಲು ಧರ್ಮಾಧಾರಿತ ಅಲ್ಲ; ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ನಿಲ್ಲಬೇಕು



**ನವದೆಹಲಿ/ಬೆಂಗಳೂರು:** ಮುಸ್ಲಿಮರಿಗೆ ಗುತ್ತಿಗೆ ಮೀಸಲಾತಿ ನಿಲುವು ಸ್ಪಷ್ಟಪಡಿಸಿರುವ ಜೆಡಿಎಸ್; ಜೆಡಿಎಸ್ – ಬಿಜೆಪಿ ಮೈತ್ರಿ ನಡುವೆ ಮೀಸಲಾತಿ ಬೆಂಕಿ ಹಚ್ಚಲು ಹೊರಟಿದ್ದವರಿಗೆ ಚೆಕ್ ಮೆಟ್ ಇಟ್ಟಿದೆ.

ಜೆಡಿಎಸ್ ರಾಜ್ಯಾಧ್ಯಕ್ಷರು ಹಾಗೂ ಕೇಂದ್ರದ ಬೃಹತ್ ಕೈಗಾರಿಕೆ, ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ಮೀಸಲು ಧರ್ಮಾಧಾರಿತ ಅಲ್ಲ. ಅದು ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ನಿಂತಿದೆ. ನಿಂತಿರಬೇಕು ಎನ್ನುವುದು ಜೆಡಿಎಸ್ ಅಚಲ ನಿಲುವು ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದ್ದಾರೆ.

ಮುಸ್ಲಿಮರಿಗೆ ಕಾಂಗ್ರೆಸ್ ಸರಕಾರ.ಶೇ.4ರಷ್ಟು ಗುತ್ತಿಗೆ ಮೀಸಲಾತಿ ನೀಡಿರುವುದರ ವಿರುದ್ಧದ ಹೋರಾಟದಲ್ಲಿ ಜೆಡಿಎಸ್ ಮತ್ತು ಬಿಜೆಪಿ ನಡುವೆ ಹೊಂದಾಣಿಕೆ ಇಲ್ಲ, ಗೊಂದಲವಿದೆ ಎನ್ನುವುದು ಸತ್ಯಕ್ಕೆ ದೂರ. ಕೆಲ ಪತ್ರಿಕೆ ಮತ್ತು ಸುದ್ದಿವಾಹಿನಿಗಳಲ್ಲಿ ವರದಿಯಾಗಿರುವ ವರದಿಗಳು ಸತ್ಯಕ್ಕೆ ದೂರ ಎಂದು ಕೇಂದ್ರ ಸಚಿವರು ಸ್ಪಷ್ಟಪಡಿಸಿದ್ದಾರೆ.

ವಿಧಾನಮಂಡಲ ಅಧಿವೇಶನ ಆರಂಭಕ್ಕೆ ಮೊದಲೇ ಬೆಂಗಳೂರಿನಲ್ಲಿ ಓಆಂ 'ಸಮನ್ವಯ ಸಮಿತಿ' ಸಭೆ ನಡೆದು ಎಲ್ಲಾ ವಿಚಾರಗಳನ್ನೂ ಸಮಗ್ರವಾಗಿ ಚರ್ಚಿಸಲಾಗಿದೆ. ಸರಕಾರದ ವಿರುದ್ಧ ಹೋರಾಟದ ರೂಪುರೇಷೆ ರೂಪಿಸಲಾಗಿತ್ತು. ಆ ಸಭೆಯಲ್ಲಿ ಸ್ವತಃ ನಾನೂ ಭಾಗವಹಿಸಿದ್ದೆ ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್ ಸರಕಾರವು ಕೇವಲ ಚುನಾವಣಾ ಸ್ವಾರ್ಥಕ್ಕೆ, ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ 'ಸಾಮಾಜಿಕ ನ್ಯಾಯದ ಆದರ್ಶ ಪುಟ 2

## ಇಂದಿನಿಂದ ದೆಹಲಿ ವಿಧಾನಸಭೆ ಅಧಿವೇಶನ



**ನವದೆಹಲಿ:** ದೆಹಲಿ ವಿಧಾನಸಭೆಯ ಬಜೆಟ್ ಅಧಿವೇಶನ ಸೋಮವಾರದಿಂದ (ಇಂದಿನಿಂದ) ಪ್ರಾರಂಭವಾಗಲಿದೆ. ಖೀರ್ ಸಮಾರಂಭದೊಂದಿಗೆ ಬಜೆಟ್ ಅಧಿವೇಶನ ಆರಂಭವಾಗಲಿದೆ.

27 ವರ್ಷಗಳ ಬಳಿಕ ಅಧಿಕಾರದ ಗದ್ದುಗೆ ಹಿಡಿದಿರುವ ಬಿಜೆಪಿ ಸರ್ಕಾರ ಮಂಗಳವಾರ ಮೊದಲ ಬಜೆಟ್ ಮಂಡಿಸಲಿದೆ. ಮಾರ್ಚ್ 25 ರಂದು ಪುಟ 2

## 1 ತಿಂಗಳು ನಂದಿ ಬೆಟ್ಟದ ರಸ್ತೆ ಬಂದ್

**ಚಿಕ್ಕಬಳ್ಳಾಪುರ:** ವಿಶ್ವವಿಖ್ಯಾತ ನಂದಿಗಿರಿಧಾಮದ ರಸ್ತೆ ನವೀಕರಣ ಕಾಮಗಾರಿ ಹಿನ್ನಲೆಯಲ್ಲಿ 1 ತಿಂಗಳು ನಂದಿಬೆಟ್ಟದ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಆದೇಶ ಹೊರಡಿಸಿದ್ದಾರೆ. ವಾರಾಂತ್ಯದ ದಿನಗಳಲ್ಲಿ ಶುಕ್ರವಾರ ಸಂಜೆ 6:30ರಿಂದ ಪುಟ 2


## ಪ್ರಚೋಧನಕಾರಿ ಭಾಷಣ: ಜಾಮೀನು ಅರ್ಜಿ ವಜಾ

**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲೆ ನಡೆದ ಕಲ್ಲು ತೂರಾಟ ನಡೆದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಚೋದನಕಾರಿ ಭಾಷಣ ಮಾಡಿ ಪೊಲೀಸರಿಂದ ಬಂಧಿತನಾಗಿರುವ ಮೌಲ್ವಿ ಸಲ್ಲಿಸಿದ್ದ ಜಾಮೀನು ಅರ್ಜಿ ವಜಾಗೊಳಿಸಿದ ನ್ಯಾಯಾಲಯ. ಉದಯಗಿರಿ ಗಲಭೆ ಪ್ರಕರಣ ಬಳಿಕ ಮೈಸೂರು ಸಿಸಿಬಿ ಪೊಲೀಸರು ಆರೋಪಿ ಮೌಲ್ವಿ ಮುಫ್ತಿ ಮುಸ್ತಾಕ್ ನನ್ನು ವಶಕ್ಕೆ ಪಡೆದು ಪುಟ 2

## ಲಾರಿ ಡಿಕ್ಕಿ: ತಂದೆ ಸ್ಥಳದಲ್ಲೇ ಸಾವು

**ವಿಜಯಪುರ:** ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಮಕ್ಕಳನ್ನು ಪರೀಕ್ಷಾ ಕೇಂದ್ರಕ್ಕೆ ಕರೆದುಕೊಂಡು ಹೋಗುವಾಗ ಲಾರಿ ಡಿಕ್ಕಿಯಾದ ಪರಿಣಾಮ ತಂದೆ ಸ್ಥಳದಲ್ಲಿಯೇ ಸಾವನ್ನಪ್ಪಿರುವ ದಾರುಣ ಘಟನೆ ಜಿಲ್ಲೆಯ ಕಗ್ಗೋಡ ಗ್ರಾಮದ ಬಳಿಯ 52ನೇ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ಮೃತ ಬೈಕ್ ಸವಾರನನ್ನು ವೆಂಕು ಚವ್ಹಾಣ (43) ಎಂದು ಗುರುತಿಸಲಾಗಿದ್ದು, ಪುತ್ರಿಯರಾದ ಐಶ್ವರ್ಯಾ, ಪ್ರೀತಿ ಹಾಗೂ ಪುಟ 2

## ಬಿಗ್ ಬಾಸ್ ಸ್ಪರ್ಧಿ ವಿನಯ್, ರಜತ್ ವಿರುದ್ಧ ಎಫ್‌ಐಆರ್



**ಬೆಂಗಳೂರು:** ಕೈಯಲ್ಲಿ ಲಾಂಗ್ ಹಿಡಿದುಕೊಂಡು ಪೋಸ್ ಕೊಟ್ಟು ಸಾಮಾಜಿಕ ಜಾಲತಾಣ ಇನ್ ಸ್ಟಾಗ್ರಾಮ್ ಖಾತೆಯಲ್ಲಿ ರೀಲ್ಸ್ ಅಪ್‌ಲೋಡ್ ಮಾಡಿದ ಬಿಗ್ ಬಾಸ್ ಕನ್ನಡ ಸೀಸನ್ 10 ಸ್ಪರ್ಧಿ ವಿನಯ್ ಗೌಡ ಹಾಗೂ ಬಿಗ್ ಬಾಸ್ ಕನ್ನಡ ಸೀಸನ್ 11 ಸ್ಪರ್ಧಿ ರಜತ್ ಕಿಶನ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಇಬ್ಬರು ವಿರುದ್ಧ ಶಸ್ತ್ರಾಸ್ತ್ರ ಕಾಯ್ದೆಯಡಿಯಲ್ಲಿ ಬಸವೇಶ್ವರ ನಗರ ಠಾಣೆಯಲ್ಲಿ ಪಿಎಸ್ ಐ ಭಾನು ಪ್ರಕಾಶ್ ನೀಡಿದ ದೂರಿನ ಅನ್ವಯ ಎಫ್‌ಐಆರ್ ದಾಖಲಾಗಿದೆ.

ಇವರಿಬ್ಬರು ರೀಲ್ಸ್ ಮಾಡುವಾಗ ಕೈಯಲ್ಲಿ ಲಾಂಗ್ ಹಿಡಿದುಕೊಂಡು ಪೋಸ್ ಕೊಟ್ಟಿದ್ದಾರೆ. ಬಿಗ್ ಬಾಸ್ ರಜತ್ ಅವರ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ರೀಲ್ಸ್ ಅಪ್‌ಲೋಡ್ ಆಗಿದೆ. ಲಾಂಗ್ ಹಿಡಿದುಕೊಂಡು ಭಯದ ವಾತಾವರಣ ಸೃಷ್ಟಿಯಾಗುವಂತೆ ಪುಟ 2

## ಎಫ್‌ಐಆರ್ ಆಗದೇ ತನಿಖೆಗೆ ಕೊಡಲು ಆಗಲ್ಲ

**ಬೆಂಗಳೂರು:** ಹನಿಟ್ರ್ಯಾಪ್ ಪ್ರಕರಣದಲ್ಲಿ ರಾಜಣ್ಣ ದೂರು ಕೊಡದೇ ನಾನೇನು ಮಾಡಲಿ? ಎಫ್‌ಐಆರ್ ಆಗದೇ ತನಿಖೆಗೆ ಕೊಡಲು ಆಗಲ್ಲ ಎಂದು ಗೃಹಸಚಿವ ಪರಮೇಶ್ವರ್ ಹೇಳಿದ್ದಾರೆ.


ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜಣ್ಣ ಏನು ಮಾಡುತ್ತಾರೋ ನೋಡೋಣ. ರಾಜಣ್ಣಗೆ ಬಹಳ ಜನ ಆಪ್ತರು ಇದ್ದಾರೆ. ನನ್ನ ಬಿಟ್ಟು ಬಹಳ ಜನ ಇದ್ದಾರೆ. ಅವರು ಯಾರ ಜೊತೆ ಏನು ಮಾತನಾಡುತ್ತಾರೋ ನನಗೇನು ಗೊತ್ತು ಎಂದರು. ಪುಟ 2

## ಸೂಕ್ತ ಸಮಯದಲ್ಲಿ ದೂರು

ತುಮಕೂರು: ಹನಿಟ್ರ್ಯಾಪ್ ಪ್ರಕರಣದ ಬಗ್ಗೆ ಸೂಕ್ತ ಸಮಯದಲ್ಲಿ ದೂರು ನೀಡಲಾಗುವುದು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿಳಿಸಿದ್ದಾರೆ.

ದೂರು ನೀಡಲು ಸಮಯ ನಿಗದಿ ಮಾಡಿಕೊಂಡಿಲ್ಲ. ನಾನು ಮಧ್ಯಾಹ್ನದ ನಂತರ ಬೆಂಗಳೂರಿಗೆ ಹೋಗುತ್ತೇನೆ, ಆ ನಂತರ ಈ ಕುರಿತು ಪಕ್ಷದ ವರಿಷ್ಠರೊಂದಿಗೆ ಚರ್ಚಿಸಿ ಕೊಡು ಕೊಡುತ್ತೇನೆ ಎಂದು ಅವರು ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು.


ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿರುವುದರಲ್ಲೇ ವಿಶೇಷತೆ ಏನಿದೆ,



ಅವರಿಬ್ಬರು ಪರಸ್ಪರ ಆರೋಗ್ಯ ವಿಚಾರಣೆ ಮಾಡಿದ್ದಾರೆ. ಇದಕ್ಕೆ ಏನೇನೋ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದರು.

ಪ್ರತಿಪಕ್ಷ ಬಿಜೆಪಿಯುವರು ಈ ಹನಿಟ್ರ್ಯಾಪ್ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸುತ್ತಿರುವ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಆಯ್ತು.. ಆಯ್ತು.. ಅವರವರ ಪುಟ 2

## ರಾಜೀನಾಮೆ ಕೊಡಬೇಕು ಅನ್ನೋ ನಿರ್ಧಾರ ಮಾಡಿದ್ದು ನಿಜ



ಹುಬ್ಬಳ್ಳಿ: ರಾಜೀನಾಮೆ ಕೊಡಬೇಕು ಎಂಬ ನಿರ್ಧಾರ ಮಾಡಿದ್ದು ನಿಜ. ಆದರೆ ಇದೀಗ ಬಹಳ ಜನ ನನಗೆ ಕಾಲ್ ಮಾಡಿ ಬೇಡ ಅನ್ನುತ್ತಿದ್ದಾರೆ ಎಂದು ರಾಜೀನಾಮೆ ವಿಚಾರವಾಗಿ ಸಭಾಪತಿ ಬಸವರಾಜ್ ಹೊರಟ್ಟಿ ಸ್ಪಷ್ಟನೆ ನೀಡಿದ್ದಾರೆ.

ಸಭಾಪತಿ ಬಸವರಾಜ್ ಹೊರಟ್ಟಿ ರಾಜೀನಾಮೆ ಪತ್ರ ವೈರಲ್ ಆಗುತ್ತಿರುವ ವಿಚಾರದ ಕುರಿತು ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಸಹಿ ಮಾಡಿದ ಪತ್ರ ಇನ್ನೂ ಲಾಕರ್‌ನಲ್ಲಿದೆ. ವೈರಲ್ ಆಗಿರುವುದು ಸಹಿ ಮಾಡದ ಪತ್ರ. ನನ್ನ ಪಿ.ಎ ಆ ಪತ್ರವನ್ನು ವೈರಲ್ ಮಾಡಿದ್ದಾರೆ. ದಿನಾಂಕ 21 ಎಂದು ಹಾಕಿದ್ದೆ. ಈ ಪತ್ರ ಬಹಳ ಜನರ ಹತ್ತಿರ ಹೋಗಿದೆ. ಸಚಿವರು, ಪರಿಷತ್ ಸದಸ್ಯರು ಕಾಲ್ ಮಾಡುತ್ತಿದ್ದಾರೆ. ದುಡುಕಿನ ನಿರ್ಧಾರ ಬೇಡ ಎನ್ನುತ್ತಿದ್ದಾರೆ. ಕೆಲವು ಸಲ ಹಿತೈಷಿಗಳ ಮಾತು ಕೇಳಬೇಕಾಗುತ್ತದೆ ಎಂದರು.

ರಾಜೀನಾಮೆ ಕುರಿತು ವಿಚಾರ ಮಾಡುತ್ತೇನೆ. ಮಾನಸಿಕವಾಗಿ ಬೇಸರವಾಗಿದ್ದು ನಿಜ. ಹೀಗಾಗಿ ನಾನು ರಾಜೀನಾಮೆ ಕೊಡುವ ನಿರ್ಧಾರ ಮಾಡಿದ್ದೆ. ಕೆಲವರ ನಡುವಳಿಕೆ ನನ್ನ ಮನಸಿಗೆ ಸಮಾಧಾನವಾಗಿಲ್ಲ. ಕಳೆದ ಮೂರು ವರ್ಷಗಳಿಂದ ಅಸಮಾಧಾನವಾಗಿದೆ. ರಾಜ್ಯದ ಎಲ್ಲಾ ಕಡೆಯಿಂದ ಕರೆ ಬಂದಿದೆ, ಮಾನಸಿಕ ನೆಮ್ಮದಿ ಹಾಳಗಿದೆ. ನಾಳೆ ಒಂದು ದಿನ ಕುಳಿತು ವಿಚಾರ ಮಾಡುತ್ತೇನೆ. ಆತ್ಮೀಯರ ಮಾತು ಕೇಳಿಕೊಂಡು ನಿರ್ಧಾರ ಮಾಡುತ್ತೇನೆ ಎಂದು ತಿಳಿಸಿದರು.

ಈ ಮೊದಲು ಮಾತನಾಡಿದ್ದ ಹೊರಟ್ಟಿ, ನಾನು ಸಭಾಪತಿ ಹುದ್ದೆಗೆ ಪುಟ 2

## ಹನಿಟ್ರ್ಯಾಪ್; ಪಾರದರ್ಶಕ ತನಿಖೆಗೆ ನಿಖಿಲ್ ಕುಮಾರಸ್ವಾಮಿ ಆಗ್ರಹ



**ಬೆಂಗಳೂರು:** ವಿಧಾನಸೌಧ ದೇವಾಲಯದಂತೆ. ಇಂತಹ ದೇವಾಲಯದಲ್ಲಿ ವಿಷಯಾಧಾರಿತ ಚರ್ಚೆ ನಡೆಯಬೇಕು. ಇತ್ತೀಚೆಗೆ ಸರ್ಕಾರದ ಪ್ರಭಾವಿ ಸಚಿವರ ಸದಸನದೊಳಗೆ ಹನಿಟ್ರ್ಯಾಪ್ ವಿಚಾರ ಪ್ರಸ್ತಾಪ ಮಾಡಿದ್ದಾರೆ. ಇದನ್ನ ನೋಡಿದ್ರೆ ಈ ಸರ್ಕಾರ ಎಲ್ಲಿಗೆ ಬಂದು ನಿಂತಿದೆ ಎಂದು ನಿಖಿಲ್ ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಪಕ್ಷದ ಕಚೇರಿ ಜೆಪಿ ಭವನದಲ್ಲಿ ಮಾತನಾಡಿದ ಅವರು ಹನಿಟ್ರ್ಯಾಪ್ ಪ್ರಕರಣ ಎಸ್ ಐಟಿ ತನಿಖೆ ನಡೆದ್ರೆ ಸಮಾಧಾನ ಆಗುವುದಿಲ್ಲ, ನಿವೃತ್ತ ನ್ಯಾಯಾಧೀಶರ ಮೂಲಕ ಪಾರದರ್ಶಕ ತನಿಖೆ ಬೇಕು ಅಂತ ಸದನದೊಳಗೆ ಸಚಿವರೇ ಹೇಳಿದ್ದಾರೆ. ನಮ್ಮ ಪಕ್ಷದ ಶಾಸಕರು, ಮಿತ್ರ ಪಕ್ಷದವರು ಈ ವಿಚಾರವನ್ನ ಸಿಬಿಐ ತನಿಖೆಗೆ ವಹಿಸಲು ಕೇಳಿದಾಗ ಸದಸನದಲ್ಲಿ ನಡೆದ ಘಟನೆ ಸರಿಯಲ್ಲ ಎಂದು ಕಿಡಿಕಾರಿದರು.

ಸಭಾಧ್ಯಕ್ಷರು ಆರು ತಿಂಗಳು ಶಾಸಕರನ್ನ ಅಮಾನತು ಮಾಡಿರೋದು ರಾಜ್ಯದ ಜನ ಒಪ್ಪೋದಿಲ್ಲ. ರಾಹುಲ್ ಗಾಂಧಿ ಪರಿಶಿಷ್ಟ ಜಾತಿ, ಪಂಗಡ ಪರ ಅಂತ ಯಾವಾಗಲೂ ಹೇಳ್ತಾರೆ ಅಖಂಡ ಶ್ರೀನಿವಾಸ ಮೂರ್ತಿ ಮನೆಗೆ ಬೆಂಕಿ ಬಿತ್ತು. ಕೊನೆಗೆ ಟಿಕೆಟ್ ಕೊಟ್ಟಿಲ್ಲ, ನಡು ಬೀದಿಯಲ್ಲಿ ಬಿಟ್ರ ಎಂದು ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದರು.

**ಹನಿಟ್ರ್ಯಾಪ್ ವ್ಯಕ್ತಿಗತವಾಗಿ ಟಾರ್ಗೆಟ್**


ಹನಿಟ್ರ್ಯಾಪ್ ಮಾಡಿ ವ್ಯಕ್ತಿಗತವಾಗಿ ಟಾರ್ಗೆಟ್ ಮಾಡಿ, ಪುಟ 2

## ನಾಗ್ಪುರ ಹಿಂಸಾಚಾರ: ಆರೋಪಿ ನಿವಾಸದ ಮೇಲೆ ಬುಲ್ಡೋಜರ್ ಕಾರ್ಯಾಚರಣೆ



ನಾಗ್ಪುರ (ಮಹಾರಾಷ್ಟ್ರ): ನಾಗ್ಪುರ ಹಿಂಸಾಚಾರ ಪ್ರಕರಣದ ಆರೋಪಿ ಫಾಹೀಮ್ ಖಾನ್ ವಿರುದ್ಧ ಬುಲ್ಡೋಜರ್ ಕಾರ್ಯಾಚರಣೆಗೆ ಪೊಲೀಸರು ಮುಂದಾಗಿದ್ದಾರೆ. ಆತನ ಮನೆ ನೆಲಸಮಕ್ಕೆ ಬುಲ್ಡೋಜರ್‌ಗಳನ್ನು ತಂದು ನಿಲ್ಲಿಸಿದ್ದಾರೆ. ಮಾರ್ಚ್ 17ರಂದು ನಾಗ್ಪುರಲ್ಲಿ ಔರಂಗಜೇಬನ ಸಮಾಧಿ ಕೆಡವುವಂತೆ ಒಂದು ಕೋಮಿಗೆ ಸೇರಿದ ಸಂಘಟನೆಯೊಂದು ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ, ಒಂದು ಸಮುದಾಯದ ಪುಟ 2

# ಭರತನಾಟ್ಯ ಪ್ರದರ್ಶನ



**ಬೆಂಗಳೂರು :** ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಮಾರ್ಚ್ 27, ಗುರುವಾರ ಸಂಜೆ 5–30ಕ್ಕೆ ವಿದುಷಿ ಶ್ರೀಮತಿ ಸುಮಾ ಐತಾಳ್ ಅವರ ನಿರ್ದೇಶನದಲ್ಲಿ ಕಲಾಸಂಕಲ್ಪ ನೃತ್ಯ ಶಾಲೆಯ ವಿದ್ಯಾರ್ಥಿಗಳಿಂದ "ಭರತನಾಟ್ಯ ಪ್ರದರ್ಶನ" ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು–41



ಕರ್ನಾಟಕ ರಾಜ್ಯ ಚುನಾವಣಾ ಆಯುಕ್ತ ಸಂಗ್ರೇಶಿ ಅವರು ಮೈಸೂರಿನ ಸುತ್ತೂರು ಮಠಕ್ಕೆ ಸೋಮವಾರ ಭೇಟಿ ನೀಡಿ, ಸುತ್ತೂರು ಶ್ರೀಗಳಿಂದ ಆಶೀರ್ವಾದ ಪಡೆದುಕೊಂಡರು.



ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ 16ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಜೀವಮಾನ ಸಾಧನೆ ಪ್ರಶಸ್ತಿಗೆ ಭಾಜನರಾಗಿರುವ ಹಿರಿಯ ಚಿತ್ರನಟಿ ಶಬಾನಾ ಆಜ್ಮಿ ಹಾಗೂ ಅವರ ಪತಿ, ಖ್ಯಾತ ಗೀತರಚನೆಕಾರ ಜಾವೇದ್ ಅಖ್ತರ್ ಅವರನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಸದಾಶಿವನಗರದ ತಮ್ಮ ನಿವಾಸದಲ್ಲಿ ಸೋಮವಾರ ಅಭಿನಂದಿಸಿದರು.

# ನನ್ನ ಹೇಳಿಕೆ ತಿರುಚಲಾಗಿದೆ

**ಮೊದಲ ಪುಟದಿಂದ**

ಮಾಡುತ್ತೇವೆ ಎಂದು ಎಲ್ಲಿಯೂ ಹೇಳಿಲ್ಲ. ನನ್ನ ಹೇಳಿಕೆಯನ್ನು ತಿರುಚಿರುವ ಬಗ್ಗೆ ಕಾನೂನು ಹೋರಾಟ ಮಾಡುತ್ತೇನೆ. ನಮ್ಮದು ರಾಷ್ಟ್ರೀಯ ಪಕ್ಷ, ಸಂವಿಧಾನವನ್ನು ಜಾರಿಗೆ ತಂದಿದ್ದೇ ನಮ್ಮ ಪಕ್ಷ. ಸಂವಿಧಾನದ ಮಹತ್ವ ಬೇರೆಲ್ಲರಿಗಿಂತ ನಮಗೆ ಚೆನ್ನಾಗಿ ಗೊತ್ತಿದೆ. ಕೇಂದ್ರ ಸರ್ಕಾರ ತನ್ನ ಬಜೆಟ್ ನಲ್ಲಿ ವಿಫಲವಾಗಿದೆ. ಬಜೆಟ್ ನಲ್ಲಿ ಏನೂ ಇಲ್ಲದೇ ಇರುವ ಕಾರಣಕ್ಕೆ ಬಿಜೆಪಿ ಈ ರೀತಿ ಇಲ್ಲಸಲ್ಲದ ವಿಚಾರವನ್ನು ಪ್ರಸ್ತಾವ ಮಾಡುತ್ತಿದೆ. ಇದೊಂದು ನನ್ನ ಹಾಗೂ ಕಾಂಗ್ರೆಸ್ ಪಕ್ಷದ ವಿರುದ್ಧ ಮುಂದುವರೆದಿರುವ ರಾಜಕೀಯ ಪಿತೂರಿ " ಎಂದು ಸ್ಪಷ್ಟಪಡಿಸಿದರು.

ಬಿಜೆಪಿಯ ಅಮಿತ್ ಮಾಳವಿಯಾ ಅವರ ಎಕ್ಸ್ (ಟ್ವೀಟ್) ಬಗ್ಗೆ ಕೇಳಿದಾಗ, "ರಾಜಕೀಯ ವ್ಯಕ್ತಿಯಾದ ಅವರು ಇಡೀ ದೇಶವನ್ನು ತಪ್ಪು ಹಾದಿಗೆ ಎಳೆಯುತ್ತಿದ್ದಾರೆ. ಬಿಜೆಪಿ ಯಾವಾಗಲೂ ದೇಶವನ್ನು ತಪ್ಪು ಹಾದಿಗೆ ಎಳೆಯುವ ಕೆಲಸ ಮಾಡುತ್ತಲೇ ಬಂದಿದೆ. ನಾನು ಎಲ್ಲಿ ಸಂವಿಧಾನ ಬದಲಾವಣೆ ಮಾಡುತ್ತೇನೆ ಎಂದು ಹೇಳಿದ್ದೇನೆ ಎಂದು ತೋರಿಸಲಿ. ಬಿಜೆಪಿಯವರು ಕೀಳು ಮಟ್ಟದ ರಾಜಕೀಯ ಮಾಡುತ್ತಿದ್ದಾರೆ. ಅವರಿಗೆ ನನ್ನ, ಸೋನಿಯಾ ಗಾಂಧಿ ಅವರ ಕುಟುಂಬದ ಹಾಗೂ ಕಾಂಗ್ರೆಸ್ ಪಕ್ಷದ ಹೆಸರು ತೆಗೆದುಕೊಳ್ಳದಿದ್ದರೆ ನಿದ್ದೆ ಬರುವುದಿಲ್ಲ" ಎಂದು ಖಾರವಾಗಿ ಪ್ರತಿಕ್ರಿಯಿಸಿದರು.

ಸುಳ್ಳು ಸುದ್ದಿಗಳನ್ನು ಪಸರಿಸಲಾಗುತ್ತಿದೆಯೇ ಎಂದು ಕೇಳಿದಾಗ, "ಅವರ (ಬಿಜೆಪಿ) ಕೆಲಸವೇ ನಕಲಿ ಹಾಗೂ ಸುಳ್ಳು ಸುದ್ದಿಗಳನ್ನು ಪಸರಿಸುವುದು. ಇದರಲ್ಲಿ ಅವರದು ಎತ್ತಿದ ಕೈ." ಎಂದರು.

ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯಸಭೆಯಲ್ಲಿ ಸಂವಿಧಾನ ಬದಲಾವಣೆಗೆ ನಾವು ಅವಕಾಶ ನೀಡುವುದಿಲ್ಲ ಎಂದಿದ್ದಾರಲ್ಲ ಎಂದು ಕೇಳಿದಾಗ, "ನಾವು ಈ ದೇಶಕ್ಕೆ ಸಂವಿಧಾನ ನೀಡಿದವರು. ಅದನ್ನು ಕಾಪಾಡುವುದು ನಮ್ಮ ಹಕ್ಕು. ಬಿಜೆಪಿಯು ತನ್ನ ಲೋಪಗಳನ್ನು ಮುಚ್ಚಿಕೊಳ್ಳಲು ಇಂತಹ ಸುಳ್ಳು ವಿಚಾರಗಳನ್ನು ವಿಚಾರ ಮುನ್ನೆಲೆಗೆ ತರುತ್ತಿದೆ" ಎಂದರು.

ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ಯಾವ ಆಧಾರದಲ್ಲಿ ನೀಡಲಾಗಿದೆ ಎಂಬುದನ್ನು ಸ್ಪಷ್ಟಪಡಿಸುವಂತೆ ಕೇಳಿದಾಗ, "ರಾಜ್ಯದ ಹಿಂದುಳಿದ ವರ್ಗಗಳ ವರದಿ ಆಧಾರದ ಮೇಲೆ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ನೀಡಲಾಗಿದೆ. ಮಹಾರಾಷ್ಟ್ರ ಹರಿಯಾಣ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಮೀಸಲಾತಿ ವಿಚಾರವಾಗಿ ನ್ಯಾಯಲಯಗಳ ಮೆಟ್ಟಿಲೇರಲಾಗಿದ್ದು, ಆ ನ್ಯಾಯಾಲಯಗಳ ತೀರ್ಪುಗಳ ಆಧಾರದ ಮೇಲೆ ಕೆಲವು ಬದಲಾವಣೆ ಮಾಡಿ ಅವಕಾಶ ನೀಡಲಾಗಿದೆ" ಎಂದರು.

ಬಿಜೆಪಿಯ ಸಂಬಿತ್ ಪಾತ್ರ ಅವರು ಇದು ನಿಜವಾದ ಕಾಂಗ್ರೆಸ್ ಚಿಂತನೆ, ಸೋನಿಯಾ ಗಾಂಧಿ ಕುಟುಂಬದ ಚಿಂತನೆ ಎಂದು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ಗಾಂಧಿ ಕುಟುಂಬದ ಹೆಸರನ್ನು ನೆನಪಿಸಿಕೊಳ್ಳದಿದ್ದರೆ ಅವರಿಗೆ ಪ್ರತಿದಿನ ನಿದ್ದೆ ಬರುವುದಿಲ್ಲ. ಇದೆಲ್ಲವೂ ಹುಚ್ಚುತನ, ಮೂರ್ಖತನ. ಇದು ಕಾಂಗ್ರೆಸ್ ಪಕ್ಷ ಹಾಗೂ ನನ್ನ ವಿರುದ್ದದ ರಾಜಕೀಯ ಪಿತೂರಿ" ಎಂದು ಕಿಡಿಯಾದರು."ಸಂಸತ್ ಒಳಗೆ ಈ ಹೇಳಿಕೆ ನೀಡಿದ್ದರೆ ಕಾನೂನು ಹೋರಾಟ ಕಷ್ಟ. ಹೊರಗೆ ನೀಡಿದ್ದರೆ ಹೋರಾಟದ ಬಗ್ಗೆ ವಿಚಾರ ಮಾಡುತ್ತೇನೆ" ಎಂದರು.

ಮಾಧ್ಯಮಗಳು ತಪ್ಪು ಮಾಹಿತಿ ನೀಡಿದ್ದಾವೆಯೇ ಎಂದಾಗ, "ಇಲ್ಲ, ಇದರಲ್ಲಿ ಮಾಧ್ಯಮಗಳ ತಪ್ಪಿಲ್ಲ. ಬಿಜೆಪಿ ನನ್ನ ಹೇಳಿಕೆಯನ್ನು ತಿರುಚಿದೆ. ವಿನಾಕಾರಣ ನನ್ನ ಹೆಸರನ್ನು ಎಳೆದು ತಂದಿದೆ" ಎಂದರು.

# ಅಗ್ನಿ ಅವಘಡ: ಓರ್ವ ಸಾವು

**ಮುಂಬೈ:** ನಗರದ ವಿದ್ಯಾವಿಹಾರ್ ಪ್ರದೇಶದಲ್ಲಿನ 13 ಅಂತಸ್ತಿನ ವಸತಿ ಕಟ್ಟಡದಲ್ಲಿ ಸೋಮವಾರ ಬೆಳಿಗ್ಗೆ ಬೆಂಕಿ ಕಾಣಿಸಿಕೊಂಡು ಭದ್ರತಾ ಸಿಬ್ಬಂದಿಯೊಬ್ಬರು ಸಾವನ್ನಪ್ಪಿದ್ದಾರೆ.

ವಿದ್ಯಾವಿಹಾರ್ ನಿಲ್ದಾಣದ ಎದುರಿನ ನಾಥನಿ ರಸ್ತೆಯಲ್ಲಿರುವ ತಕ್ಷಶಿಲಾ ಕೋ–ಆಪರೇಟಿವ್ ಹೌಸಿಂಗ್ ಸೊಸೈಟಿಯಲ್ಲಿ ಬೆಳಗಿನ ಜಾವ 4.35ಕ್ಕೆ ಬೆಂಕಿ ಕಾಣಿಸಿಕೊಂಡಿದೆ ಎಂದು ಅಗ್ನಿಶಾಮಕ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕಟ್ಟಡದ ಮೊದಲ ಮತ್ತು ಎರಡನೇ ಮಹಡಿಯಲ್ಲಿನ ಐದು ಫ್ಲಾಟ್ಗಳಲ್ಲಿ ವಿದ್ಯುತ್ ಅಳವಡಿಕೆಗಳು, ಗೃಹೋಪಯೋಗಿ ವಸ್ತುಗಳು, ಮರದ ಪೀಠೋಪಕರಣಗಳು, ಎಸಿ. ಮತ್ತು ಬಟ್ಟೆಗಳಿಗೆ ಬೆಂಕಿ ತಗುಲಿದೆ ಎಂದು ಅವರು ಹೇಳಿದರು.

15 ರಿಂದ 20 ಜನರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ ಮತ್ತು ಇಬ್ಬರು ಸೆಕ್ಯುರಿಟಿ ಗಾರ್ಡ್‌ಗಳು ಗಾಯಗೊಂಡಿದ್ದು, ಅವರನ್ನು ರಾಜವಾಡಿ ಆಸ್ಪತ್ರೆಗೆ ಕಳುಹಿಸಲಾಗಿದ್ದು, ಅವರಲ್ಲಿ ಒಬ್ಬರಾದ ಉದಯ್ ಗಂಗನ್ (43) ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸತತ ಪ್ರಯತ್ನದಿಮದ ಬೆಳಿಗ್ಗೆ 7.33 ರ ಹೊತ್ತಿಗೆ ನಿಯಂತ್ರಣಕ್ಕೆ ತರಲಾಯಿತು ಎಂದು ಅಧಿಕಾರಿ ಸೇರಿಸಲಾಗಿದೆ. ಬೆಂಕಿಗೆ ಕಾರಣ ಇನ್ನೂ ತಿಳಿದುಬಂದಿಲ್ಲ ತನಿಉಖೆ ಮುಂದುವರೆದಿದೆ ಎಂದು ಹೇಳಿದರು.

# ಕಳ್ಳತನ: ಹಲ್ಲೆ, 13 ವಿದ್ಯಾರ್ಥಿಗಳು ಸಸ್ಪೆಂಡ್

**ಚೆನ್ನೈ:** ಹಿರಿಯ ವಿದ್ಯಾರ್ಥಿಯ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ 13 ಪದವಿಪೂರ್ವ ವಿದ್ಯಾರ್ಥಿಗಳನ್ನು ಅಮಾನತುಗೊಳಿಸಿದ ಘಟನೆ ತಮಿಳುನಾಡಿನ ಕೊಯಮತ್ತೂರಿನ ಕಾಲೇಜೊಂದರಲ್ಲಿ ನಡೆದಿದೆ.

ಮಾರ್ಚ್ 20 ರಂದು ಕ್ಯಾಂಪಸ್‌ನಲ್ಲಿ ಕಳ್ಳತನ ಮಾಡಿದ ಆರೋಪದ ಮೇಲೆ ಜೂನಿಯರ್‌ಗಳು ಸೀನಿಯರ್ ಮೇಲೆ ಹಲ್ಲೆ ನಡೆಸಿದ್ದಾರೆ. ಸಂಸ್ಥೆಯ ಉಪಮುಖ್ಯ ವಾರ್ಡನ್ ಡಾ. ಮಹೇಶ್ವರನ್ ಘಟನೆಯನ್ನು ದೃಢಪಡಿಸಿದ್ದು, ಕಾಲೇಜು ಆಡಳಿತ ಮಂಡಳಿ ಈ ಕುರಿತು ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ.

ಘಟನೆ ಸಂಬಂಧ ಪ್ರತಿಕ್ರಿಯಿಸಿದ ಮಹೇಶ್ವರನ್, ಈ ವಿಷಯದ ಬಗ್ಗೆ ತನಿಖೆ ನಡೆಸಲು ಪ್ರಾಂಶುಪಾಲರು ಮತ್ತು ಮುಖ್ಯ ವಾರ್ಡನ್ ತನಿಖಾ ಸಮಿತಿಯನ್ನು ರಚಿಸಿದ್ದಾರೆ. ಘಟನೆಯಲ್ಲಿ ಭಾಗಿಯಾಗಿದ್ದ 13 ವಿದ್ಯಾರ್ಥಿಗಳನ್ನು ಗುರುತಿಸಿ ಸಸ್ಪೆಂಡ್ ಮಾಡಲಾಗಿದೆ. ಪೊಲೀಸರಿಗೆ ಸಹ ಈ ಕುರಿತು ಮಾಹಿತಿ ನೀಡಿದ್ದೇವೆ ಎಂದು ತಿಳಿಸಿದರು. ಇನ್ನು ಅಮಾನತುಗೊಂಡ ವಿದ್ಯಾರ್ಥಿಗಳು ಮತ್ತು ಅವರ ಪೋಷಕರನ್ನು ಮಾರ್ಚ್ 24ರಂದು ವಿಚಾರಣೆಗೆ ಹಾಜರಾಗುವಂತೆ ನಿರ್ದೇಶಿಸಲಾಗಿದೆ. ಕೊಯಮತ್ತೂರು ಜಿಲ್ಲಾ ಪೊಲೀಸರು ಕ್ರಿಮಿನಲ್ ಕ್ರಮವನ್ನು ಸಹ ಪ್ರಾರಂಭಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ನೇಣು ಬಿಗಿದ ಸ್ಥಿತಿಯಲ್ಲಿ ಶವ ಪತ್ತೆ

**ಬಲ್ಲಿಯಾ:** ಮರವೊಂದರಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ 20 ವರ್ಷದ ಹುಡುಗಿಯ ಶವ ಪತ್ತೆಯಾಗಿರುವ ಘಟನೆ ಸರಯನ್ ಗುಲಾಬ್ ರೈ ಗ್ರಾಮದಲ್ಲಿ ನಡೆದಿದೆ.

ಜಮೀನು ವಿವಾದದಿಂದಾಗಿ ತನ್ನ ಮಗಳನ್ನು ಕೊಲ್ಲಲಾಗಿದೆ ಎಂದು ತಂದೆ ಶಂಕಿಸಿದ್ದು, ಈ ಬಗ್ಗೆ ದೂರು ದಾಖಲಿಸಿಕೊಂಡಿರುವ ಪೊಲೀಸರು ಈ ಬಗ್ಗೆ ತನಿಖೆ ಆರಂಭಿಸಿದ್ದಾರೆ.

ತಡ ರಾತ್ರಿ ಜಮೀನಿನ ಬಳಿಯ ಮರದಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಶವ ಕಂಡುಬಂದ ನಂತರ ಗ್ರಾಮದ ಜನರು ಅಲ್ಲಿ ಸೇರಿ ಕಣ್ಣೀರು ಹಾಕಿದ್ದಾರೆ ಕೊಲೆ ಎಂದು ಆರೋಪಿಸಿ ದುರ್ಘಟನೆಯ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ.

ಕೊಲೆ ಮತ್ತು ಸಾಕ್ಷ್ಯ ನಾಶಕ್ಕೆ ಸಂಬಂಧಿಸಿದ ಬಿಎನ್‌ಎಸ್‌ನ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಓಂವೀರ್ ಸಿಂಗ್ ಹೇಳಿದ್ದಾರೆ. ಈ ಕುರಿತು ತನಿಖೆ ನಡೆಸುತ್ತಿದ್ದು, ಆರೋಪಿಗಳ ಬಂಧನಕ್ಕೆ ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

# ಮೊಬೈಲ್ ಶಾಪ್ ಮಾಲೀಕ ಸಾವು

**ಮಡಿಕೇರಿ/ಚಿಕ್ಕಮಗಳೂರು:** ಸ್ವಿಮ್ಮಿಂಗ್ ಪೂಲ್‌ಗೆ ಧುಮುಕಿದ ವೇಳೆ ಬೆನ್ನುಮೂಳೆಗೆ ಘಾಸಿಯುಂಟಾಗಿ, ಚಿಕಿತ್ಸೆ ಫಲಿಸದೇ ಮೊಬೈಲ್ ಶಾಪ್ ಮಾಲೀಕ ಮಂಗಳೂರಿನ ಎನಪೋಯ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ.

ಕುಶಾಲನಗರದ ಮೊಬೈಲ್ ಗ್ಯಾಲರಿ ಮಾಲೀಕ ನಿಶಾಂತ್ (35) ಮೃತ ದುರ್ದೈವಿ. ನಿಶಾಂತ್ ಕೊಡಗಿನ ಕುಶಾಲನಗರದಿಂದ ಚಿಕ್ಕಮಗಳೂರಿಗೆ 10 ಮಂದಿ ಸ್ನೇಹಿತರೊಂದಿಗೆ ಶನಿವಾರ ಪ್ರವಾಸಕ್ಕೆ ತೆರಳಿದ್ದರು. ಭಾನುವಾರ ಇಲ್ಲಿನ ಖಾಸಗಿ ರೆಸಾರ್ಟ್‌ನ ಸ್ವಿಮ್ಮಿಂಗ್ ಪೂಲ್‌ಗೆ ಧುಮುಕುವ ವೇಳೆ ಬೆನ್ನುಮೂಳೆಗೆ ಘಾಸಿಯಾಗಿದೆ.

## ಮೊದಲ ಪುಟದಿಂದ

# ಸ್ಥಳದಲ್ಲೇ ಸಾವು

ಪಕ್ಕದ ಮನೆ ನಿವಾಸಿ ಶ್ವೇತಾ ರಾಠೋಡ್ ಗಂಭೀರವಾಗಿ ಗಾಯಗೊಂಡಿದ್ದಾರೆ.ಇದನ್ನೂ ಓದಿ: ನೇಹಾ ಗೌಡ ಮಗಳ ಅದ್ಧೂರಿ ನಾಮಕರಣ– ಪುತ್ರಿಗೆ ಮುದ್ದಾದ ಹೆಸರಿಟ್ಟ ನಟಿ

ಕುಮಟಗಿ ತಾಂಡಾದಿಂದ ತಮ್ಮ ಇಬ್ಬರು ಮಕ್ಕಳು ಹಾಗೂ ಪಕ್ಕದ ಮನೆ ನಿವಾಸಿಯನ್ನು ಕಗ್ಗೋಡದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಕ್ಕೆ ಕರೆದುಕೊಂಡು ಹೋಗುತ್ತಿದ್ದರು. ಈ ವೇಳೆ ತೆಲಂಗಾಣ ಮೂಲದ ಲಾರಿ ಹಾಗೂ ಬೈಕ್ ಮಧ್ಯೆ ಅಪಘಾತ ಸಂಭವಿಸಿದೆ. ಸದ್ಯ ಗಾಯಾಳುಗಳನ್ನು ವಿಜಯಪುರ ನಗರದ ಬಿಎಲ್‌ಡಿಇ ಆಸ್ಪತ್ರೆಗೆ ರವಾನೆ ಮಾಡಲಾಗಿದೆ, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ವಿಜಯಪುರ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಜಾಮೀನು ಅರ್ಜಿ ವಜಾ

ನ್ಯಾಯಾಲಯದಲ್ಲಿ ಹಾಜರು ಪಡಿಸಿದ್ದರು. ಘಟನೆ ನಡೆದು 11 ದಿನಗಳ ಬಳಿಕ ಆರೋಪಿಯನ್ನು ಪೊಲೀಸರು ಬಂಧಿಸಿದ್ದರು. ಕೋರ್ಟ್ ಆರೋಪಿಗೆ ನ್ಯಾಯಾಂಗ ಬಂಧನ ವಿಧಿಸಿತ್ತು. ಬಳಿಕ ಆರೋಪಿ ಮೌಲ್ವಿ ಜಾಮೀನು ಅರ್ಜಿ ಸಲ್ಲಿಸಿದ್ದ. ಇದಕ್ಕೆ ಪೊಲೀಸರು ಆಕ್ಷೇಪ ವ್ಯಕ್ತಪಡಿಸಿದ್ದರು. ಜಾಮೀನು ಅರ್ಜಿ ವಿಚಾರಣೆ ನಡೆಸಿದ ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಆರೋಪಿ ಜಾಮೀನು ಅರ್ಜಿ ವಜಾಗೊಳಿಸಿದೆ.

# ಬೆಟ್ಟದ ರಸ್ತೆ ಬಂದ್

ಸೋಮವಾರ ಬೆಳಿಗ್ಗೆ 08 ಗಂಟೆ ವರೆಗೆ ಮಾತ್ರ ವಾಹನಗಳ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿದೆ. ಉಳಿದಂತೆ ವಾರದ ಐದೂ ದಿನಗಳು ವಾಹನಗಳ ಸಂಚಾರಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ. ಮಾರ್ಚ್ 24 ರಿಂದ ಏಪ್ರಿಲ್ 25ರ ವರೆಗೂ 1 ತಿಂಗಳು 4 ವಾರಗಳ ಕಾಲ ನಿರ್ಬಂಧ ಇರಲಿದೆ. ನಂದಿಬೆಟ್ಟದ ತಪ್ಪಲಿನಿಂದ ಬೆಟ್ಟದವರೆಗೂ 7.70 ಕಿಲೋಮೀಟರ್ ದೂರದ ರಸ್ತೆ ಕಾಮಗಾರಿ ನಡೆಯಲಿದೆ. ಅಂಕುಡೊಂಕಿನ ಕಿರಿದಾದ ರಸ್ತೆ ಕಾರಣ ರಸ್ತೆ ಕಾಮಗಾರಿಗೆ ಆಡಚಣೆ ಆಗಲಿದ್ದು, ಮುಂಜಾಗ್ರತಾ ಕ್ರಮವಾಗಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ.

# ಬುಲ್ಡೋಜರ್ ಕಾರ್ಯಾಚರಣೆ

ಪವಿತ್ರ ಗ್ರಂಥವನ್ನು ಸುಟ್ಟುಹಾಕಲಾಗಿದೆ ಎಂಬ ವದಂತಿ ಹಿಂಸಾಚಾರಕ್ಕೆ ಕಾರಣವಾಗಿತ್ತು. ಮಾರ್ಚ್ 22ರಂದು ಈ ಹಿಂಸಾಚಾರ ಪ್ರಕರಣ ಕುರಿತು ಮಾತನಾಡಿದ ಸಿಎಂ ದೇವೇಂದ್ರ ಫಡ್ನವೀಸ್ ಪ್ರಕರಣದ ಸಂಬಂಧ, ನಾಲ್ಕು ಎಫ್ ಐಆರ್ ಆಗಿದ್ದು, 92 ಜನರನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂಬಂಧ ಸಭೆ ನಡೆಸಿದ ಅವರು, "ಹಿಂಸಾಚಾರದ ಕುರಿತು ಪ್ರತಿಯೊಂದು ವಿವರವನ್ನು ಪರಿಶೀಲಿಸಿದೆ. ಹಿಂಸಾಚಾರದ ಸಮಯದಲ್ಲಿ ಉಂಟಾದ ಹಾನಿಯನ್ನು ಗಲಭೆಕೋರರಿಂದ ವಸೂಲಿ ಮಾಡಲಾಗುವುದು. ಯಾವುದೇ ಹಾನಿ ಸಂಭವಿಸಿದ್ದರೂ ಅದನ್ನು ಗಲಭೆಕೋರರಿಂದ ವಸೂಲಿ ಮಾಡಲಾಗುವುದು. ಅವರು ಹಣವನ್ನು ಪಾವತಿಸದಿದ್ದರೆ, ಅವರ ಆಸ್ತಿಯನ್ನು ಮಾರಾಟ ಮಾಡಲಾಗುತ್ತದೆ. ಅಗತ್ಯವಿರುವ ಕಡೆ ಬುಲ್ಡೋಜರ್‌ಗಳನ್ನು ಸಹ ಬಳಸಲಾಗುತ್ತದೆ" ತಿಳಿಸಿದ್ದರು. ಸಾಮಾಜಿಕ ಜಾಲತಾಣದಲ್ಲಿ ನಾಗ್ಪುರ ಹಿಂಸಾಚಾರ ಘಟನೆಯನ್ನು ಎಡಿಟ್ ಮಾಡಿದ್ದಲ್ಲದೆ ಅದನ್ನು ವೈಭವೀಕರಿಸಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವ ಮೂಲಕ ಹಿಂಸಾಚಾರಕ್ಕೆ ಆರೋಪಿ ಕಾರಣನಾಗಿದ್ದ ಎಂದು ಮಹಾರಾಷ್ಟ್ರ ಸೈಬರ್ ಘಟಕದ ಪೊಲೀಸರು ತಿಳಿಸಿದ್ದಾರೆ. ಆರೋಪಿ ಫಾಹೀಮ್ ಖಾನ್ ಪ್ರತಿಭಟನೆ ವಿಡಿಯೋ ಎಡಿಟ್ ಮಾಡುವ ಮೂಲಕ ಹಿಂಸಾಚಾರ ಭುಗಿಲೇಳಲು ಕಾರಣನಾಗಿದ್ದ ಎಂದು ಸೈಬರ್ ಘಟಕದ ಡಿಸಿಪಿ ಲೋಹಿತ್ ಮತಾನಿ ತಿಳಿಸಿದ್ದಾರೆ. ನಾಗ್ಪುರ ನಗರಸಭೆ ಫಾಹೀಮ್ ಖಾನ್ ಮನೆ ಮೇಲೆ ಬುಲ್ಡೋಜರ್ ಕಾರ್ಯಾಚರಣೆ ಮುಂದಾಗಿದೆ. ನಗರಸಭೆ ತಂಡ ಆತನ ನಿವಾಸಕ್ಕೆ ಆಗಮಿಸಿದೆ. ಈ ಕುರಿತು ಮಾತನಾಡಿರುವ ಅಧಿಕಾರಿಗಳು, ಖಾನ್ ಅವರ, ಮನೆ ನಿರ್ಮಾಣಕ್ಕೆ ಸರಿಯಾದ ಪ್ಲಾನ್ ಬಗ್ಗೆ ಅನುಮತಿ ಪಡೆದಿಲ್ಲ ಮತ್ತು ಅನೇಕ ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾರೆ. ಈ ಸಂಬಂಧ ಈ ಹಿಂದೆನೇ ಅನೇಕ ನೋಟಿಸ್ ಜಾರಿ ಮಾಡಲಾಗಿದ್ದರೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಇದೀಗ ಮನೆ ಕೆಡವಲು ಸಜ್ಜಾಗಿದ್ದೇವೆ ಎಂದರು. ಆರೋಪಿ ಫಾಹೀಮ್ ಖಾನ್‌ನನ್ನು ಮಾರ್ಚ್ 19ರಂದು ಪೊಲೀಸರು ವಶಕ್ಕೆ ಪಡೆದಿದ್ದು, ಈತ ಮೈನಾರಿಟಿಸ್ ಡೆಮಾಕ್ರಟಿಕ್ ಪಕ್ಷದ ನಾಯಕನಾಗಿದ್ದಾನೆ.

# ನಿಖಿಲ್ ಆಗ್ರಹ

ತೇಜೋವಧೆ ಮಾಡುವುದು ಸರಿಯಲ್ಲ, ವೈಯಕ್ತಿಕ ಟಾರ್ಗೆಟ್ ಮಾಡಬಾರದು. ಇದರ ಹಿಂದೆ ಯಾರು ಪ್ರಭಾವಿಗಳು ನಿಂತಿದ್ದಾರೆ. ಅವರು ಎಷ್ಟೇ ಪ್ರಭಾವಿಗಳದರೂ ಅವರ ವಿರುದ್ಧ ಕ್ರಮ ಜರುಗಿಸ ಬೇಕೆಂದು ಆಗ್ರಹಿಸಿದರು.

ಕೇತಗಾನಹಳ್ಳಿ ಜಮೀನಿನಲ್ಲಿ ಒಂದೇ ಒಂದು ಇಂಚು ಬೇರೆ ಅವರ ಜಾಗಕ್ಕೆ ನಾವು ಬೇಲಿ ಹಾಕಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಸ್ಪಷ್ಟಪಡಿಸಿದರು. ಕೇತಗಾನಹಳ್ಳಿ ಜಮೀನು ಒತ್ತುವರಿ ತೆರವು ವಿಚಾರಕ್ಕೆ ಪಮಾತನಾಡಿದ ಅವರು, ನಾನು ಎಲ್ಲಾ ದಾಖಲಾತಿಗಳನ್ನ ಕಲೆ ಹಾಕಿದ್ದೇನೆ. ಇದರ ಬಗ್ಗೆ ನಾನು ಸುದ್ದಿಗೋಷ್ಠಿ ಕರೆದು ಮಾತನಾಡುತ್ತೇನೆ. 46 ಎಕರೆ ಜಮೀನು ಕುಮಾರಸ್ವಾಮಿ ರೈತರಿಂದ ಖರೀದಿ ಮಾಡಿರೋ ಜಮೀನು. ಅದರಲ್ಲಿ ಸರ್ವೆ ನಂಬರ್ 7,8,9, ಇವು ಕ ನಂಬರ್ ಜಮೀನು. ಪೋಡಿ ಆಗದ ಜಮೀನು. ಪೋಡಿ ಆಗದ ಜಮೀನು ತೆಗೆದುಕೊಳ್ಳೋದಕ್ಕೆ ಅವತ್ತು ಅವಕಾಶ ಇತ್ತು. ಪೋಡಿ ದುರಸ್ತಿ ಮಾಡೋಕೆ ಅದನ್ನು ಸರಿ ಮಾಡಬೇಕಿರೋದು ಸರ್ಕಾರ. ನಾವು ಅರ್ಜಿ ಕೊಟ್ಟರೂ ಸರ್ಕಾರ ಅದನ್ನು ಮಾಡಿಲ್ಲ ಎಂದು ಕಿಡಿಕಾರಿದರು.

ಸರ್ವೆ ನಂಬರ್ 7 ರಲ್ಲಿ 1 ಎಕರೆ ನಾವು ಅನುಭವದಲ್ಲಿ ಇದ್ದೇವೆ. ಉಳಿದ 4 ಎಕರೆ ಪೋಡಿ ದುರಸ್ತಿ ಮಾಡಬೇಕು. ಅದನ್ನ ಸರ್ಕಾರ ಮಾಡಬೇಕು. ರೈತರ ಜಮೀನು ಖರೀದಿ ಮಾಡಿದಾಗ ರೈತರು ಹಾಕಿದ್ದ ಬೌಂಡರಿಯನ್ನ ನಾವು ಹಾಗೇ ಉಳಿಸಿಕೊಂಡಿದ್ದೇವೆ. ಅರ್ಧ ಇಂಚು ಬೇರೆಯದಕ್ಕೆ ಬೇಲಿ ಹಾಕಿಲ್ಲ. ಸಿಎಂ ಆದಾಗ ಎಷ್ಟೋ ಜನರಿಗೆ ಸಾಗುವಳಿ ಚೀಟಿಯನ್ನ ಕೊಡಿಸಿದ್ದಾರೆ. ಎರಡು ಬಾರಿ ಸಿಎಂ ಆಗಿದ್ರು. ತಪ್ಪಿದ್ದರೆ ಆಗ ಸರಿ ಮಾಡಿಸಿಕೊಳ್ಳಬಹುದಿತ್ತು. ಆದರೆ ಅದನ್ನ ಮಾಡಿಲ್ಲ. ನೋಟಿಸ್ ಕೊಡದೇ ತೆರವು ಮಾಡುತ್ತೇನೆ ಎಂದು ಡಿಸಿ ಬಂದರೆ ಅದು ಕಾನೂನುಬಾಹಿರ. ಡಿಸಿ ಅವರು 14 ಎಕರೆ ಜಮೀನು ಒತ್ತುವರಿ ಆಗಿದೆ ಎನ್ನುತ್ತಾರೆ. ಯಾವ 14 ಎಕರೆ ಒತ್ತುವರಿ ಆಗಿದೆ ಎಂದು ನಿಖಿಲ್ ಅವರು ಪ್ರಶ್ನಿಸಿದರು. ಕಾಲ ಹೇಗಿದೆ ಅಂದರೆ ಆರೋಪ ಬಂದ ಕೂಡಲೆ ಅಪರಾಧಿ ಮಾಡುತ್ತಾರೆ. ರೀಲ್ಸ್, ಶಾರ್ಟ್ಸ್ ಕಾಲ ಇದು. ಅಂತಿಮವಾಗಿ ಕುಮಾರಸ್ವಾಮಿ ಅವರ ವ್ಯಕ್ತಿತ್ವಕ್ಕೆ ಕಪ್ಪು ಚುಕ್ಕೆ ತರಬೇಕು, ಮಸಿ ಬಳಿಯಬೇಕು ಅಷ್ಟೇ ತಾನೆ ಅಂತಿಮ. ಇದರ ಹಿಂದೆ ಯಾರ್ಯಾರು ಇದ್ದಾರೆ ಎಂದು ಈಗ ಚರ್ಚೆ ಮಾಡಲ್ಲ. ಎಲ್ಲಾ ದಾಖಲಾತಿ ತೆಗೆಸಿದ್ದೇನೆ. ಸಂಪೂರ್ಣ ಮಾಹಿತಿ ಕೊಡುತ್ತೇನೆ ಎಂದು ತಿಳಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲೆ ಮಾಡಲು ಅಡ್ಡ ಹಾಕಿದ್ದು ಕುಮಾರಸ್ವಾಮಿ ಎಂಬ ಡಿಕೆಶಿ ಹೇಳಿಕೆ ವಿಚಾರಕ್ಕೆ ಮಾತನಾಡಿದ ಅವರು; ಕೈಲಾಗದೇ ಇರೋರು ಕುಣಿಯೋದಕ್ಕೆ ನೆಲ ಡೊಂಕು ಎಂದು ಡಿ ಕೆ ಶಿವಕುಮಾರ್ ವಿರುದ್ಧ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ಕುಮಾರಸ್ವಾಮಿ ಅವರು ಕೇಂದ್ರದ ಮೇಲೆ ಒತ್ತಡ ಹಾಕಿದ್ದಾರೆ ಅನ್ನೋದಕ್ಕೆ ಏನಾದ್ರು ಸಾಕ್ಷಿ ಇದೆಯಾ.? ರಾಮನಗರ ಜಿಲ್ಲೆಯ ಅಸ್ಮಿತೆ ಕಾಪಾಡಬೇಕು ಅನ್ನೋದು ಜಿಲ್ಲೆಯ ಜನರ ಭಯಕೆ. ರಾಮನಗರ ಜಿಲ್ಲೆಯ ಹೆಸರು ಬದಲಾವಣೆ ಮಾಡಿದ್ರೆ ಅದು ಅಭಿವೃದ್ಧಿ ಆಗುತ್ತಾ? ಎಂದು ಕಿಡಿಕಾರಿದರು. ಸ್ಮಾರ್ಟ್ ಮೀಟರ್ ನಲ್ಲಿ ದೊಡ್ಡ ಅಕ್ರಮ ನಡೆಯುತ್ತಿದೆ. 7500 ಸಾವಿರ ಕೋಟಿ ಹಗರಣ ಅದು. ಬ್ಲಾಕ್ ಲೀಸ್ಟ್ ನಲ್ಲಿ ಇರೋರಿಗೆ ಸ್ಮಾರ್ಟ್ ಮೀಟರ್ ಟೆಂಡರ್ ಕೊಟ್ಟಿದದ್ದಾರೆ.1500 ರೂ ಮೀಟರ್ ಗೆ 5500 ರೂಪಾಯಿ ಕೊಟ್ಟ ಪಡೆಯುತ್ತಿದ್ದಾರೆ ಎಂದು ಕಿಡಿಕಾರಿದರು.

ಎಲೆಕ್ಟ್ರಿಕ್ ಪೋಲ್ ಮಾಡೋನಿಗೆ ಮೀಟರ್ ಟೆಂಡರ್ ಕೊಟ್ಟಿದ್ದೀರಾ?ಇಷ್ಟು ದೊಡ್ಡ ಹಗರಣ ನಡೆಯುತ್ತಿದೆ. ಹೆಜ್ಜೆ ಹೆಜ್ಜೆಗೂ ಈ ಸರ್ಕಾರ ಹಗರಣದಲ್ಲಿ ಮುಳುಗಿದೆ ಎಂದು ನಿಖಿಲ್ ಅವರು ವಾಗ್ದಾಳಿ ನಡೆಸಿದರು.

# ನಿರ್ಧಾರ ಮಾಡಿದ್ದು ನಿಜ

ರಾಜೀನಾಮೆ ಕೊಡುತ್ತೇನೆ. ಸಾಕಾಗಿದೆ, ಇನ್ನೂ ಸ್ವಲ್ಪ ಟೆಕ್ನಿಕಲ್ ಸಮಸ್ಯೆ ಇದೆ. ಜನರಿಗೆ ಮೋಸ ಮಾಡೋ ಟ್ರೆಂಡ್ ಬಂದಿದೆ. ಇದೀಗ ವಿಧಾನ ಮಂಡಲಕ್ಕೆ ಬಂದಿದೆ. ರಾಜಕಾರಣ ಬಹಳ ಕಲುಷಿತ ಆಗಿದೆ. ಕಾಲ ಕೆಟ್ಟಿದೆ, ಸದನದ ಗೌರವ ಹೋಗಿ ಬಹಳ ದಿನ ಆಗಿದೆ. ಚುನಾವಣೆಯಲ್ಲಿ ಸೋಲಿಸೋಕೆ ಆಗಿದಿದ್ರೆ ಈ ತರಹ ಟಾರ್ಗೆಟ್ ಮಾಡೋದು ಸರಿಯಲ್ಲ. ಇದೆಲ್ಲ ದುರ್ದೈವ. ಇತ್ತೀಚೆಗೆ ಸದನದಲ್ಲಿ ನಡೆದ ಬೆಳವಣಿಗೆ ನನ್ನ ಮನಸಿಗೆ ಬೇಸರ ತರಿಸಿದೆ. ಈ ಸಭಾಧ್ಯಕ್ಷ ಸ್ಥಾನದಲ್ಲಿ ಮುಂದುವರೆಯುವುದು ಸೂಕ್ತವಲ್ಲ ಎಂಬ ಭಾವನೆ ಬಂದಿದೆ. ಸದನದಲ್ಲಿ ನಡೆದ ಬೆಳವಣಿಗೆ ನಿಯಂತ್ರಿಸುವಲ್ಲಿ ನಾನು ವಿಫಲವಾಗಿದ್ದೇನೆ ಎಂದು ಬೇಸರ ವ್ಯಕ್ತಪಡಿಸಿದ್ದರು. ಮೇಲ್ಮನೆ ಚಿಂತಕರ ಛಾವಡಿ ಎಂದು ಕರೆಯುತ್ತೇವೆ. ಆದರೆ ಸದನದಲ್ಲಿ ಪ್ಲೇಕಾರ್ಡ್ ಹಿಡಿದು ಬಂದ್ರು, ಘೋಷಣೆ ಕೂಗಿದರು. ಗದ್ದಲದಲ್ಲಿ ಕೆಲ ಬಿಲ್‌ಗಳು ಪಾಸ್ ಆಗಿವೆ. ಏನೂ ಚರ್ಚೆಯೇ ಆಗದೆ ಬಿಲ್ ಪಾಸ್ ಆಗುತ್ತಿವೆ. ಮುಸ್ಲಿಂ ಮೀಸಲಾತಿ ವಿಚಾರದ ಬಗ್ಗೆ ಸಣ್ಣದೊಂದು ಚರ್ಚೆ ಆಗಿದ್ದು ಬಿಟ್ಟರೆ, ಯಾವುದೇ ಬಿಲ್ ಬಗ್ಗೆ ಚರ್ಚೆಯೇ ಆಗಲಿಲ್ಲ. ಇನ್ನೂ ನಾನು ಸದನದಲ್ಲಿ ಇದ್ದು ಏನು ಪ್ರಯೋಜನ? ಹುದ್ದೆಗೆ ಘನತೆ ಗೌರವ ಇಲ್ಲದಿದ್ದ ಮೇಲೆ ಅಲ್ಲಿ ಇರಬಾರದು ಎಂದು ತೀರ್ಮಾನಕ್ಕೆ ಬಂದಿದ್ದೇನೆ ಎಂದು ಅತ್ಯಂತ ಭಾವುಕರಾಗಿ ಮಾತನಾಡಿದ್ದರು.

# ನ್ಯಾಯದ ಮೇಲೆ ನಿಲ್ಲಬೇಕು

ಪರಿಕಲ್ಪನೆ'ಯಾದ ಮೀಸಲಾತಿ ವ್ಯವಸ್ಥೆಯನ್ನು ಹಾಳು ಮಾಡುತ್ತಿದೆ. ಮೀಸಲಾತಿಯನ್ನೇ ಓಲೈಕೆ ಅಸ್ತ್ರವನ್ನಾಗಿ ಮಾಡಿಕೊಂಡು ರಾಜ್ಯದ ಜನತೆಯ ದಿಕ್ಕು ತಪ್ಪಿಸುತ್ತಿದೆ. ರಾಷ್ಟ್ರದ ಉದ್ದಗಲಕ್ಕೂ ಕಾಂಗ್ರೆಸ್ ಮೀಸಲು ಅರಾಜಕತೆ ಸೃಷ್ಟಿಸುತ್ತಿದೆ ಎಂದು ಅವರು ನೇರ ಆರೋಪ ಮಾಡಿದ್ದಾರೆ.

ಜೆಡಿಎಸ್ – ಬಿಜೆಪಿ ಪಕ್ಷಗಳು ಈಗಾಗಲೇ ಒಟ್ಟಾಗಿ ಅನೇಕ ಜನಪರ ಹೋರಾಟಗಳಲ್ಲಿ ಭಾಗಿಯಾಗಿವೆ, ಮುಂದೆಯೂ ಹೋರಾಡುತ್ತವೆ. ಈ ಬಗ್ಗೆ ರಾಜಿ ಪ್ರಶ್ನೆಯೇ ಇಲ್ಲ. ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ದುರ್ಬಲವಾಗಿರುವ ಎಲ್ಲಾ ಸಮುದಾಯಗಳಿಗೆ ಸಮಾನ ಅವಕಾಶಗಳು, ಸೌಲಭ್ಯಗಳು ಸಿಗಬೇಕು. ಆದರೆ, ಒಂದು ನಿರ್ದಿಷ್ಟ ಸಮುದಾಯದ ತುಷ್ಟೀಕರಣ, ಬಹು ಸಮುದಾಯಗಳ ತುಚ್ಛೀಕರಣ ನ್ಯಾಯ ಸಮ್ಮತವಲ್ಲ. ಇದು ಸಂವಿಧಾನಕ್ಕೆ ಎಸಗುವ ಅಪಚಾರ ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೀಸಲು ಧರ್ಮಾಧಾರಿತ ಅಲ್ಲ. ಅದು ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ನಿಂತಿದೆ. ನಿಂತಿರಬೇಕು ಎನ್ನುವುದು ಜೆಡಿಎಸ್ ಅಚಲ ನಿಲುವು ಎಂದಿರುವ ಅವರು, ತುಷ್ಟೀಕರಣ ಗಿಖ ತುಚ್ಛೀಕರಣ ನಡೆಯುತ್ತಿದೆ ಎಂದು ರಾಜ್ಯ ಸರ್ಕಾರದ ಕಾಲೆಳೆದಿದ್ದಾರೆ.

# ವಿಧಾನಸಭೆ ಅಧಿವೇಶನ

ನಡೆಯಲಿರುವ ಅಧಿವೇಶನದಲ್ಲಿ ಮುಖ್ಯಮಂತ್ರಿ ರೇಖಾ ಗುಪ್ತ ಅವರು 2025–26ನೇ ಹಣಕಾಸು ವರ್ಷದ ಬಜೆಟ್ ಮಂಡಿಸಲಿದೆ. ಮೊದಲ ಬಾರಿ ಶಾಸಕಿಯಾದ್ರೂ ಸಿಎಂ ಆಗಿರುವ ರೇಖಾ ಗುಪ್ತಾ ಅವರು, ಬಿಜೆಪಿ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದಂತೆ ಮಹಿಳೆಯರಿಗೆ ಮಾಸಿಕ 2,500, ವರ್ಷಕ್ಕೆ 2 ಉಚಿತ ಸಿಲಿಂಡರ್, ಯುವಕರು, ಕಾರ್ಮಿಕರ ಜೀವನ ಮಟ್ಟ ಸುಧಾರಿಸುವ ಯೋಜನೆಗಳಿಗೆ ಅನುದಾನ ಘೋಷಣೆ ಮಾಡುವ ನಿರೀಕ್ಷೆ ಹೆಚ್ಚಾಗಿದೆ. ಇದರೊಂದಿಗೆ ಆಪ್ ಸರ್ಕಾರದ ಉಚಿತ ಯೋಜನೆಗಳನ್ನು ಮುಂದುವರಿಸುವ ಸಾಧ್ಯತೆಗಳೂ ಇವೆ ಎಂದು ಹೇಳಲಾಗುತ್ತಿದೆ. ಜೊತೆಗೆ ಡಿಟಿಸಿ ಕಾರ್ಯವೈಖರಿ ಕುರಿತು ಸಿಎಜಿ ವರದಿಯನ್ನೂ ಬಜೆಟ್ ಅಧಿವೇಶನದಲ್ಲಿ ಮಂಡಿಸಲಾಗುಗುತ್ತದೆ ಎಂದು ಹೇಳಲಾಗಿದೆ.

**ಬಜೆಟ್ ಅಧಿವೇಶನದ ಅವಧಿ ಎಷ್ಟು?:** ಮುಂಬರುವ ಹಣಕಾಸು ವರ್ಷದ ಹಣಕಾಸು ನೀತಿಗಳು ಮತ್ತು ಅಭಿವೃದ್ಧಿ ಮಾರ್ಗಸೂಚಿಯನ್ನು ನಿರ್ಧರಿಸಲು ಈ ಅಧಿವೇಶನ ಅತ್ಯಂತ ಮಹತ್ವದ್ದಾಗಿದೆ. ಹೀಗಾಗಿ ಮಾರ್ಚ್ 24ರಿಂದ ಮಾರ್ಚ್ 28ರ ವರೆಗೆ ಈ ಅಧಿವೇಶನ ನಡೆಯುತ್ತದೆ. ಅಗತ್ಯವಿದ್ದರೆ ಅವಧಿಯನ್ನು ವಿಸ್ತರಣೆ ಮಾಡಬಹುದು ಎಂದು ವಿಧಾನಸಭೆ ಸ್ಪೀಕರ್ ವಿಜೇಂದ್ರ ಗುಪ್ತಾ ಹೇಳಿದ್ದಾರೆ. ಮಾರ್ಚ್ 26ರಂದು ಸದನದಲ್ಲಿ ಬಜೆಟ್ ಮೇಲಿನ ಚರ್ಚೆ ನಡೆಯಲಿದ್ದು, ಮಾರ್ಚ್ 27ರಂದು ಮಂಡಿಸಿದ ಬಿಲ್‌ಗಳಿಗೆ ಅನುಮೋದನೆ ಪಡೆಯಲಾಗುತ್ತದೆ. ಮಾರ್ಚ್ 28ರಂದು ಖಾಸಗಿ ಮಸೂದೆಗಳು ಹಾಗೂ ನಿರ್ಣಯಗಳ ಮೇಲೆ ಚರ್ಚೆ ನಡೆಯಲಿದೆ. ಹೀಗಾಗಿ ಎಲ್ಲಾ ಸದಸ್ಯರು ಸದನದ ಘನತೆ ಕಾಪಾಡುವಂತೆ ಸ್ಪೀಕರ್ ಮನವಿ ಮಾಡಿದ್ದಾರೆ.

**10,000 ಸಲಹೆಗಳು:** ದೆಹಲಿ ಬಜೆಟ್‌ಗೆ ಸಂಬಂಧಿಸಿದಂತೆ ವೃತ್ತಿಪರರು ಸೇರಿದಂತೆ ಸಮಾಜದ ವಿವಿಧ ವರ್ಗಗಳ ಸುಮಾರು 10,000 ಮಂದಿ ಸಲಗೆ ನೀಡಿದ್ದಾರೆ. ಈ ಪೈಕಿ 3,303 ಸಲಹೆಗಳು ಇಮೇಲ್ ಮೂಲಕ, 6,982 ಸಲಹೆಗಳನ್ನು ವಾಟ್ಸಪ್ ಮೂಲಕ ಸ್ವೀಕರಿಸಲಾಗಿದೆ.

# ರಜತ್ ವಿರುದ್ಧ ಎಫ್‌ಐಆರ್

ಸಾರ್ವಜನಿಕ ಸ್ಥಳದಲ್ಲಿ, ಕಾನೂನು ಬಾಹಿರವಾಗಿ ಲಾಂಗ್ ಹಿಡಿದುಕೊಂಡು ರೀಲ್ಸ್ ಮಾಡಿದ್ದಾರೆ. ಸಾರ್ವಜನಿಕರ ಶಾಂತಿ ನೆಮ್ಮದಿಗೆ ಭಂಗವಾಗುವಂತಹ ಕೆಲಸ ಮಾಡಿರುತ್ತಾರೆ ಎಂದು ಆರೋಪಿಸಲಾಗಿದೆ. ಲಾಂಗ್ ಹಿಡಿದುಕೊಂಡು ಇಬ್ಬರು ಜೊತೆಗೆ ನಡೆದುಕೊಂಡು ರೀಲ್ಸ್ ಮಾಡಿದ್ದಾರೆ. ವಿಡಿಯೋವನ್ನು ಬುಜ್ಜಿ ಎಂಬ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಅಪ್ಲೋಡ್ ಮಾಡಿದ್ದಾರೆ. ಸಾರ್ವಜನಿಕ ಶಾಂತಿ ಮತ್ತು ನೆಮ್ಮದಿ ಹಾಳು ಮಾಡುವ ರೀತಿ ದುರ್ವರ್ತನೆ ತೋರಿಸಲಾಗಿದೆ ಎಂದು ಆರೋಪಿಸಲಾಗಿದೆ. ಮಾರಕಾಸ್ತ್ರವಾದ ಹಿಡಿದುಕೊಂಡು ರೀಲ್ಸ್ ಮಾಡಿದ್ದಾರೆ. ಜಾಲತಾಣದಲ್ಲಿ ಅಪ್ಲೋಡ್ ಮಾಡಿ ಸಾರ್ವಜನಿಕ ಶಾಂತಿ ಮತ್ತು ನೆಮ್ಮದಿ ಹಾಳು ಮಾಡಿದ್ದಾರೆ. ಹೀಗಾಗಿ ರಜತ್ ಹಾಗೂ ವಿನಯ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ದೂರು ದಾಖಲಿಸಲಾಗಿದೆ. ಬಸವೇಶ್ವರನಗರ ಠಾಣೆಯ ಸೋಷಿಯಲ್ ಮೀಡಿಯಾ ಮಾನಿಟರಿಂಗ್ ಉಸ್ತುವರಿ ಆಗಿರುವ ಪಿಎಸ್‌ಐ ಪ್ರಕಾಶ್ ಅವರು ತನಿಖೆ ಆರಂಭಿಸಿದ್ದಾರೆ.

ಬಾಯ್ಸ್ ಮತ್ತುಗಲ್ಸ್ ರಿಯಾಲಿಟಿ ಶೋನಲ್ಲಿ ವಿನಯ್ ಗೌಡ, ರಜತ್ ಭಾಗವಹಿಸಿದ್ದರು. ಆ ವೇಳೆ ಅವರಿಬ್ಬರು ಲಾಂಗ್ ಹಿಡಿದುಕೊಂಡು ಆಕ್ಟ್ ಮಾಡಬೇಕಿತ್ತು. ಅದೇ ಟೈಮ್‌ನಲ್ಲಿ ತೆರೆ ಹಿಂದೆ ಇವರಿಬ್ಬರು ರೀಲ್ಸ್ ಮಾಡಿದ್ದಾರೆ. ಈ ರೀಲ್ಸ್ ಸಂಕಷ್ಟಕ್ಕೆ ದೂಡಿದೆ. ವಿನಯ್ ಗೌಡ, ರಜತ್ ಕಿಶನ್ ಅವರು ಉತ್ತಮ ಸ್ನೇಹಿತರು. ದಶಕಗಳಿಂದಲೂ ಇವರಿಬ್ಬರು ಉತ್ತಮ ಸ್ನೇಹ ಸಂಬಂಧ ಹೊಂದಿದ್ದಾರೆ.

# ಕೊಡಲು ಆಗಲ್ಲ

ಹನಿಟ್ರ್ಯಾಪ್ ಬೋಗಸ್ ಎಂದಿದ್ದ ಡಿಕೆಶಿ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಈಗ ಇದರ ಬಗ್ಗೆ ಏನೂ ಮಾತಾಡಲ್ಲ. ರಾಜಣ್ಣ ದಿನಪೂರ್ತಿ ನನ್ನ ಜೊತೆಯೇ ಇದ್ದರು, ಏನೂ ಹೇಳಿಲ್ಲ. ರಾಜಣ್ಣಗೆ ನನ್ನನ್ನೂ ಸೇರಿದಂತೆ ಬಹಳ ಜನ ಆಪ್ತರು ಇದ್ದಾರೆ ಎಂದು ಹೇಳಿದರು.

# ಸೂಕ್ತ ಸಮಯದಲ್ಲಿ ದೂರು

ಅಭಿಪ್ರಾಯವನ್ನು ಅವರು ಹೇಳಿದ್ದಾರೆ. ಸೂಕ್ತ ಸಮಯದಲ್ಲಿ ನಾನು ದೂರು ಕೊಡುತ್ತೇನೆ ಎಂದಷ್ಟೇ ಪ್ರತಿಕ್ರಿಯಿಸಿದರು. ಶಾಸಕ ಮುನಿರತ್ನ ಅವರು ನೇರವಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಹನಿಟ್ರ್ಯಾಪ್‌ನಲ್ಲಿದ್ದಾರೆ ಎಂಬ ಬಗ್ಗೆ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಅದು ಅವರ ಅಭಿಪ್ರಾಯ. ಅದು ನನಗೆ ಗೊತ್ತಿಲ್ಲ ಎಂದ ಅವರು, ಮೊದಲು ಮುನಿರತ್ನರವರನ್ನೆ ಮಂಪರು ಪರೀಕ್ಷೆಗೆ ಒಳಪಡಿಸಬೇಕು. ಏಕೆಂದರೆ ಈ ಮೊದಲು ಅವರ ಜತೆಯಲ್ಲಿ ಬಹಳ ಹತ್ತಿರದಲ್ಲಿ ಇದ್ದವರು ಅವರು. ಹಾಗಾಗಿ ಅವರನ್ನೆ ಮಂಪರು ಪರೀಕ್ಷೆಗೆ ಒಳಪಡಿಸಲಿ ಎಂದರು. ತುರುವೇಕೆರೆಗೆ ಹೋಗುತ್ತಿದ್ದೇನೆ. ಅಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಬಳಿಕ ಬೆಂಗಳೂರಿಗೆ ಹೋಗಿ ಈ ಕುರಿತು ಎಲ್ಲಾ ಮಾತನಾಡುತ್ತೇನೆ ಎಂದು ಅವರು ಹೇಳಿದರು.

# ರಾಜ್ಯಸಭೆಯಲ್ಲಿ ಪ್ರತಿಧ್ವನಿಸಿದ ಹೇಳಿಕೆ

ಎಂದಿದ್ದವರು ಇಂದು ಅವರೇ ಇಲ್ಲಿ ಗಲಾಟೆ ಮಾಡುತ್ತಿದ್ದಾರೆ ಅಂಬೇಡ್ಕರ್ ನೀಡಿರುವ ಮೀಸಲಾತಿ ಬದಲಿಸಲು ಸಾಧ್ಯವಿಲ್ಲ. ಸಂವಿಧಾನ ರಕ್ಷಣೆಗೆ ಕಾಂಗ್ರೆಸ್ ಭಾರತ್ ಜೋಡೋ ಯಾತ್ರೆ ಮಾಡಿತ್ತು. ಬಿಜೆಪಿ ಭಾರತ್ ಥೋಡೋ ಮಾಡುತ್ತಿದೆ ಎಂದು ಕಿಡಿಕಾರಿದರು.ಡಿ.ಕೆ.ಶಿವಕುಮಾರ್ ಸಂವಿಧಾನ ಬದಲಾವಣೆಯ ಮಾತು ಆಡಿಲ್ಲ. ಅವರು ತಿದ್ದುಪಡಿ ತರಬಹುದು ಎಂಬ ಮಾತನ್ನ ಹೇಳಿದ್ದಾರೆ ಎಂದು ಸಮಜಾಯಿಷಿ ನೀಡಲು ಮುಂದಾದಾಗ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ನಡೆದು ಗದ್ದಲ– ಕೋಲಾಹಲ ಉಂಟಾಯಿತು.

ಈ ನಡುವೆ ಮಧ್ಯ ಪ್ರವೇಶಿಸಿದ ಸ್ಪೀಕರ್ ಜಗದೀಪ್ ಧನಕರ್ ಅವರು, ಸುಮ್ಮನೇ ಕೂರುವಂತೆ ಸೂಚಿಸಿದರಾದರೂ, ಗದ್ದಲ ಮುಂದುವರಿದಾಗ ಸದನವನ್ನು ಕೆಲ ಕಾಲ ಮುಂದೂಡಿದರು.

ಈ ವಿಷಯಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಡಿ.ಕೆ.ಶಿವಕುಮಾರ್ ನಾನು ಆ ರೀತಿಯಲ್ಲಿ ಹೇಳಿಲ್ಲ. ನನ್ನ ಹೇಳಿಕೆಯನ್ನು ತಿರುಚಲಾಗಿದೆ ಎಂದಿದ್ದಾರೆ.

# ಏ.14ರಂದು ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆ ಅನಾವರಣ

**ತುಮಕೂರು:** ನಗರದ ಮಹಾನಗರ ಪಾಲಿಕೆ ಆವರಣ ಟೌನ್ ಹಾಲ್ ಐತಿಹಾಸಿಕ ಕಟ್ಟಡದ ಮುಂಭಾಗ ಏಪ್ರಿಲ್ 14ರಂದು ಡಾ: ಬಿ.ಆರ್. ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಅನಾವರಣಗೊಳಿಸಲಾಗುವುದು ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾಃ ಬಾಬು ಜಗಜೀವನರಾಮ್ ಜಯಂತಿ ಕುರಿತು ಅಧಿಕಾರಿ ಹಾಗೂ ದಲಿತ ಮುಖಂಡರೊಂದಿಗೆ ಪೂರ್ವ ಭಾವಿ ಸಭೆ ನಡೆಸಿ ಮಾತನಾಡಿದ ಅವರು ಡಾಃ ಬಿ.ಆರ್. ಅಂಬೇಡ್ಕರ್ ದಿನಾಚರಣೆಯಂದು ಪ್ರತಿಮೆಯನ್ನು ಅನಾವರಣಗೊಳಿಸಲಾಗುವುದು. ಅಂಬೇಡ್ಕರ್ ಪ್ರತಿಮೆ ಸ್ಥಾಪನೆಯಿಂದ ಸುಮಾರು 60 ವರ್ಷಗಳ ದಲಿತ ಸಮುದಾಯದವರ ಬೇಡಿಕೆ ಈಡೇರಿದಂತಾಗುತ್ತದೆ. ಪ್ರತಿಮೆಯು 12 ಅಡಿ ಎತ್ತರ, 1000 ಕೆ.ಜಿ ತೂಕ ಹೊಂದಿದ್ದು, ತಯಾರಿಕೆಗೆ 39 ಲಕ್ಷ ರೂ. ವೆಚ್ಚವಾಗಿದೆ. ಪ್ರತಿಮೆಯನ್ನು ಸಿದ್ಧಾರ್ಥ ಸಂಸ್ಥೆಯಿಂದ ಕೊಡುಗೆಯಾಗಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಚುನವಾಣೆ ನೀತಿ ಸಂಹಿತೆಯಿಂದ ಕಳೆದ ಮೂರ್‍ನಾಲ್ಕು ವರ್ಷಗಳಿಂದ ಡಾಃ ಬಿ.ಆರ್. ಅಂಬೇಡ್ಕರ್ ಹಾಗೂ ಡಾಃ ಬಾಬು ಜಗಜೀವನರಾಮ್ ಅವರ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಲು ಸಾಧ್ಯವಾಗಿಲ್ಲ. ಈ ಬಾರಿ ದಸರಾ ಹಬ್ಬದ ಮಾದರಿಯಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ, ವಿಚಾರಗೋಷ್ಠಿಗಳನ್ನೊಳಗೊಂಡಂತೆ ಜಿಲ್ಲೆಯ ಶಕ್ತಿಯ ಸಂಕೇತವಾಗಿ ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದೆ. ದಸರಾ ಉತ್ಸವದಲ್ಲಿ ಪಾಲ್ಗೊಂಡಂತೆ ಅದೇ ಭಾವನೆ, ಉತ್ಸಾಹ, ಸಂಭ್ರಮದಲ್ಲಿ ಡಾಕ್ಟರ್ ಬಿ.ಆರ್. ಅಂಬೇಡ್ಕರ್ ಪ್ರತಿಮೆ ಉದ್ಘಾಟನೆ ಕಾರ್ಯಕ್ರಮ ಕೂಡ ಜರುಗಬೇಕು. ಇದು ಕೇವಲ ಕಾರ್ಯಕ್ರಮವಲ್ಲ, ಸಮಾಜಕ್ಕೆ ಅಂಬೇಡ್ಕರ್ ಅವರ ಚಿಂತನೆ ಮತ್ತು ಸಂವಿಧಾನಾತ್ಮಕ ಆದರ್ಶಗಳನ್ನು ನೆನಪಿಸುವ ಮಹತ್ವದ ಕ್ಷಣವಾಗಬೇಕು ಎಂದು ತಿಳಿಸಿದರು.



ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆ ಸ್ಥಾಪಿಸಲು ಸಚಿವ ಸಂಪುಟದ ಅನುಮೋದನೆ ಪಡೆದುಕೊಳ್ಳಲಾಗಿದೆ. ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಅಂಬೇಡ್ಕರ್ ಪುತ್ಥಳಿಗಳನ್ನು ಸ್ಥಾಪಿಸಲಾಗಿದೆ. ಆದರೆ ತುಮಕೂರಿನಲ್ಲಿ ಕೈಗೂಡಿರಲಿಲ್ಲ. ಬಾಬಾ ಸಾಹೇಬ್ ಅಂಬೇಡ್ಕರ್ ಪ್ರತಿಮೆ ಹಾಗೂ ಬಾಬು ಜಗಜೀವನ್ ರಾಮ್ ಪ್ರತಿಮೆ ಇಡಲು ಮುಂದಾದಾಗ ಕಾನೂನಾತ್ಮಕವಾಗಿ ಅನೇಕ ಅಡಚಣೆಗಳು ಬಂದಿವೆ. ಆದರೆ ಈಗ ಸಚಿವ ಸಂಪುಟದಿಂದ ಅನುಮೋದನೆ ದೊರೆತಿರುವುದರಿಂದ ಯಾರ ವಿರೋಧವೂ ಬರುವುದಿಲ್ಲವೆಂದು ತಿಳಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಅನಾವರಣ ಕಾರ್ಯಕ್ರಮವು ರಾಜ್ಯದ ಇತಿಹಾಸದಲ್ಲಿ ನೆನಪಿನಲ್ಲಿ ಉಳಿಯುವಂತಹ ಕಾರ್ಯಕ್ರಮವಾಗಬೇಕು. ಅಂಬೇಡ್ಕರ್ ಅವರ ಕುರಿತು ಮುಂದಿನ ಪೀಳಿಗೆಯವರಿಗೂ ಸಂದೇಶಗಳನ್ನು ತಲುಪಿಸಬೇಕು. ಅಂಬೇಡ್ಕರ್ ಪ್ರತಿಮೆ ಬಳಿ ಸಂವಿಧಾನ ಪೀಠಿಕೆಯ ಶಿಲೆಯನ್ನು ಸ್ಥಾಪಿಸಲಾಗುವುದು ಎಂದರು. ನೆನೆಗುದಿಗೆ ಬಿದ್ದಿರುವ ಬಾಬು ಜಗಜೀವನ್ ರಾಮ್ ಅವರ ಭವನ ನಿರ್ಮಾಣದ ಸಮಸ್ಯೆಯನ್ನು ಬಗೆಹರಿಸಲಾಗುವುದು. ಈ ಬಗ್ಗೆ ಆದಷ್ಟು ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು. ಬಾಬು ಜಗಜೀವನ್ ರಾಮ್ ಪ್ರತಿಮೆಯನ್ನೂ ಸಹ ಸಿದ್ಧಾರ್ಥ ಸಂಸ್ಥೆ ವತಿಯಿಂದಲೇ ನಿರ್ಮಿಸಿಕೊಡಲಾಗುವುದೆಂದು ತಿಳಿಸಿದರಲ್ಲದೆ ಮುಂದಿನ ದಿನಗಳಲ್ಲಿ 3 ತಿಂಗಳಿಗೊಮ್ಮೆ ಪರಿಶಿಷ್ಟ ಸಮುದಾಯಗಳೊಂದಿಗೆ ಕುಂದು-ಕೊರತೆ ಸಭೆಯನ್ನು ನಾನೇ ಖುದ್ದಾಗಿ ನಡೆಸುತ್ತೇನೆ ಎಂದು ಹೇಳಿದರು.

ಸಭೆಯಲ್ಲಿ ಮಾತನಾಡಿದ ದಲಿತ ಮುಖಂಡರು ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ನಾಡ ಹಬ್ಬದ ಮಾದರಿಯಲಿ ಆಚರಿಸಬೇಕು. ದಲಿತ ಸಮುದಾಯದ ಕಲಾ ತಂಡಗಳೊಂದಿಗೆ ನಗರದಲ್ಲಿ ಮೆರವಣಿಗೆ ಹೊರಡಿಸಬೇಕು ಎಂದು ಸಲಹೆ ನೀಡಿದರು.

**ಒಳ ಮೀಸಲಾತಿಯನ್ನು ಜಾರಿ ಮಾಡಿಯೇ ತೀರುತ್ತೇವೆ:** ಅಧಿಕೃತವಾದ ಜನಸಂಖ್ಯೆಯ ಆಧಾರದ ಮೇಲೆ ಒಳಮೀಸಲಾತಿ ಜಾರಿ ಮಾಡಬೇಕು. ಆದರೆ 2011ರ ನಂತರ ಜನ ಗಣತಿ ನಡೆದಿಲ್ಲ. ಸದಾಶಿವ ಆಯೋಗದ ವರದಿ ಆಧರಿಸಿ ಒಳಮೀಸಲಾತಿ ಜಾರಿ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲ. ಈ ಬಗ್ಗೆ ಕ್ಯಾಬಿನೆಟ್‌ನಲ್ಲಿ ಹತ್ತಾರು ಬಾರಿ ಚರ್ಚಿಸಲಾಗಿದೆ ಎಂದರಲ್ಲದೆ ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಗೊಳಿಸುವುದು ಅಂತಿಮ ಹಂತಕ್ಕೆ ಬಂದಿದೆ. ಒಳ ಮೀಸಲಾತಿ ಜಾರಿಗೊಳಿಸುವ ಬಗ್ಗೆ ಯಾವುದೇ ರೀತಿಯ ಆತಂಕಪಡುವುದು ಬೇಡ ಎಂದು ತಿಳಿಸಿದರಲ್ಲದೆ ಒಳ ಮೀಸಲಾತಿ ಜಾರಿಗಾಗಿ ನಡೆಯುವ ಪ್ರತಿಭಟನೆ ವೇಳೆ ಯಾರ ಬಗ್ಗೆಯೂ ಲಘುವಾಗಿ ಮಾತನಾಡಬಾರದು ಎಂದು ಮನವಿ ಮುಖಂಡರಲ್ಲಿ ಸಚಿವರು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭಾಕಲ್ಯಾಣ್, ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಭು ಜಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ, ದಲಿತ ಸಂಘಟನೆಯ ವಿವಿಧ ಮುಖಂಡರು ಸಭೆಯಲ್ಲಿ ಹಾಜರಿದ್ದರು.

# ಹಳೆಯ ವಿದ್ಯಾರ್ಥಿಗಳಿಂದ ಮಹಿಳಾ ದಿನಾಚರಣೆ

**ಬೆಂಗಳೂರು:** ಕೇಂದ್ರ ಸರ್ಕಾರದ ವಸತಿ ಶಾಲೆಗಳಾದ ಜವಾಹರ್ ನವೋದಯ ವಿದ್ಯಾಲಯದ ಪೂರ್ವ ಹಳೆಯ ವಿದ್ಯಾರ್ಥಿಗಳು ದೇವರಾಜ್ ಅರಸ್ ಭವನದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಿದರು.

ಮಹಿಳಾ ಸಬಲೀಕರಣ, ಲಿಂಗ ಸಮಾನತೆ ಮತ್ತು ಹಕ್ಕು ಸ್ಥಾಪನೆಯ ವಿಚಾರಗಳ ಕುರಿತು ಚರ್ಚೆ ನಡೆಸಲಾಯಿತು. ಈ ಕಾರ್ಯಕ್ರಮದ ವಿಶೇಷ ಅತಿಥಿಯಾಗಿದ್ದ, ಡಾ. ಸುಮನ್ ಪೆಣ್ಣೆಕರ್ ಹೂವಿನ ಗಿಡಕ್ಕೆ ನೀರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು

ಜೆಎನ್‌ವಿ ಮಂಡ್ಯದ ಮೊದಲ ಬ್ಯಾಚ್ ವಿದ್ಯಾರ್ಥಿನಿ ಶ ಅನುಪಮಾ ಅಶೋಕ್ ಪ್ರಾಸ್ತಾವಿಕವಾಗಿ ಮಾತನಾಡಿ, ಎಲ್ಲಾ ಕ್ಷೇತ್ರಗಳಲ್ಲಿ ಅಡೆತಡೆಗಳನ್ನು ಮುರಿಯುವ ಮತ್ತು ಒಳಗೊಳ್ಳುವಿಕೆಯನ್ನು ಉತ್ತೇಜಿಸುವುದರ ಅಗತ್ಯವನ್ನು ಒತ್ತಿ ಹೇಳಿದರು.

ಕ್ಯಾನ್ಸರ್ ಮತ್ತು ರೊಬೊಟಿಕ್ ಸರ್ಜನ್, ಡಾ. ರಾಜಶೇಖರ್ ಜಕಾ, ವಾಯುಸೇನಾ ಅಧಿಕಾರಿ ಪೂರ್ಣಿಮಾ ಮಾಳಗಿಮನಿ ಉದ್ಯಮಿ ವೀಣಾ ಉಗಾರೆ,ಚಲನಚಿತ್ರ ನಿರ್ದೇಶಕಿ ಸಂಜೋತಾ ಭಂಡಾರಿ,ತಾಹಿರಾ ಒಲಿ ವ್ಯವಸ್ಥಾಪಕ ನಿರ್ದೇಶಕಿ, ಚಂದ್ರಕಲಾ ಬೆಳಗೂರ್ ಕಾರ್ಪೊರೇಟ್ ನಾಯಕಿ ಮತ್ತು ಕಾವೇರಿ ಚಿಕ್ಕಾಡಿ ಸಂವಾದ ಚರ್ಚೆಯಲ್ಲಿ ಭಾಗವಹಿಸಿ ಹಲವು ವಿಚಾರ ಮಂಡಿಸಿದರು.




ಮಹಿಳಾ ಕಲಾವಿದರಿಂದ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ಮತ್ತು ಉದಯೋನ್ಮುಖ ಮಹಿಳಾ ಉದ್ಯಮಿಗಳಿಗಾಗಿ ಸಂವಾದಾತ್ಮಕ ಕಾರ್ಯಾಗಾರಗಳು ಪ್ರೇಕ್ಷಕರ ಗಮನ ಸೆಳೆದವು.

"ವಿಮೆನ್ ಇನ್ ಇನೊವೇಶನ್" ಪ್ರಶಸ್ತಿ ಸಮಾರಂಭದಲ್ಲಿ, ಕ್ರೀಡೆ, ವಿಜ್ಞಾನ ಮತ್ತು ತಂತ್ರಜ್ಞಾನ, ಶಿಕ್ಷಣ, ವೈದ್ಯಕೀಯ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನಾವೀನ್ಯತೆ, ಸಾಮಾಜಿಕ ಸೇವೆ, ಎನ್‌ಜಿಓಗಳನ್ನು ನಡೆಸುವುದು, ಹಿಂದುಳಿದ, ಅಲ್ಪಸಂಖ್ಯಾತ ಮಹಿಳೆಯರ ಉನ್ನತಿಗಾಗಿ ಕಾರ್ಯಕರ್ತರಾಗಿ ಕೆಲಸ ಮಾಡುವವರು ಇತ್ಯಾದಿ ಕ್ಷೇತ್ರಗಳಲ್ಲಿ ಹತ್ತು ಜನ ಅತ್ಯುತ್ತಮ ಮಹಿಳೆಯರನ್ನು ಗುರುತಿಸಿ, ಸನ್ಮಾನಿಸಲಾಯಿತು.

ಬೆಂಗಳೂರು ಗ್ರಾಮಾಂತರ ಪ್ರದೇಶದ ನವೋದಯ ವಿದ್ಯಾಲಯದಿಂದ, ಜೆಇಇ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಿದ ಮೂವರು ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹ ಧನ ನೀಡಿ, ಸನ್ಮಾನಿಸಲಾಯಿತು. ಜೆಎನ್‌ವಿ ಸಮುದಾಯದ ಪ್ರಕಾಶ್ ಜೋಯಿಸ್ ಮತ್ತಿತರರು ಭಾಗವಹಿಸಿದ್ದರು.

# ಮುಸ್ಲಿಂ ಬಾಂದವರಿಗೆ ಇಫ್ತಾರ್ ಕೂಟ

**ಚಿಕ್ಕಬಳ್ಳಾಪುರ:** ಬಿಜೆಪಿ ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾದ ಪಕ್ಷವಲ್ಲ ಎಲ್ಲರನ್ನು ಜೊತೆಗೂಡಿ ಎಲ್ಲರ ಅಬಿವೃದ್ಧಿಯೆ ಪಕ್ಷದ ಮೂಲ ಉದ್ದೇಶವಾಗಿದೆ. ಪ್ರಧಾನಿ ನರೇಂದ್ರ ಮೋದಿ,ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಎಲ್ಲ ಸಮುದಾಯದವರನ್ನು ಒಂದಾಗಿ ಕಾಣುತ್ತಾರೆ,ನಾವು ಕೂಡ ಎಲ್ಲ ಸಮುದಾಯದವರನ್ನು ಜತೆಗೂಡಿ ಒಂದಾಗಿ ಬಾಳಬೇಕಾಗಿದೆ ಮುಂದಿನ ಪೀಳಿಗೆಗೆ ನಾವೆಲ್ಲರೂ ಒಂದೇ ಎಂಬ ಸಂದೇಶ ನೀಡಬೇಕು ಸಹಬಾಳ್ವೆಯಿಂದ ಜೀವನ ಸಾಗಿಸಿ ಸುಂದರವಾದ ಸಮಾಜ ಕಟ್ಟುವ ಕೆಲಸ ಮಾಡಬೇಕಾಗಿದೆ ಎಂದು ಭಗತ್‌ಸಿಂಗ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಹಾಗು ಬಿಜೆಪಿ ಮುಖಂಡ ಸಂದೀಪ್.ಬಿ ರೆಡ್ಡಿ ಹೇಳಿದರು.

ಅವರು ನಗರದ ಮದೀನಾ ಶಾದಿ ಮಹಲ್‌ನಲ್ಲಿ ಆಯೋಜಿಸಿದ್ದ ಇಫ್ತಾರ್ ಕೂಟದಲ್ಲಿ ಮುಸ್ಲಿಂ ಬಾಂಧವರ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಬಿಜೆಪಿ ಮುಸ್ಲಿಮರ ವಿರುದ್ಧ ಇಲ್ಲ, ದೇಶವನ್ನು ಕಟ್ಟಲು ಅಭಿವೃದ್ಧಿಯತ್ತ ಸಾಗಿಸಲು ಎಲ್ಲ ಸಮುದಾಯದವರು ಬೇಕಾಗಿದೆ. ಈ ಒಂದು ನಿಟ್ಟಿನಲ್ಲಿ ಬಿಜೆಪಿ ಎಲ್ಲರನ್ನು ಸಮಾನವಾಗಿ ಕಾಣುವ ನೀತಿ ಅನುಸರಿಸುತ್ತಿದೆ ಕೆಲವರು ಬಿಜೆಪಿಯನ್ನು ಮುಸ್ಲಿಂ ವಿರೋಧಿ ಎಂದು ತೂರಿಸಿದ್ದಾರೆ ಇದು ಸತ್ಯಕ್ಕೆ ದೂರವಾದ ಮಾತು ಎಂದರು.





ಇನ್ನು ಸಾಮಾಜಿಕ ಸೇವೆಯೆ ಬೇರೆ ರಾಜಕಾರಣ ಬೇರೆ ಯಾವುದೇ ರಾಜಕೀಯ ಲಾಭಕ್ಕಾಗಿ ನಾನು ಸಮಾಜಸೇವೆ ಅಥವ ಜನರ ಮೆಚ್ಚುಗೆ ಗಳಿಸಲು ಮುಂದಾಗುವುದಿಲ್ಲ ಹಲವಾರು ವರ್ಷಗಳಿಂದ ಸಾಮಾಜಿಕ ಸೇವಾ ಮಾಡುತ್ತ ಬಂದಿರುವೆ, ರಾಜಕೀಯ ಮಾಡಲ್ಲ ಇನ್ನು ಇಫ್ತಾರ್ ಕೂಟದ ಆಯೋಜನೆ ಇದೆ,ನಾನು ಮೊದಲಲ್ಲ ಪೇರೇಸಂದ್ರ ದಲ್ಲಿ ನಿರಂತರವಾಗಿ ಆಯೋಜಿಸಲಾಗುತ್ತಿದೆ, ಈ ಬಾರಿ ನಗರದ ಶಾದಿ ಮಹಲ್ ನಲ್ಲಿ ಇಫ್ತಾರ್ ಕೂಟ ಏರ್ಪಡಿಸಲಾಗಿದೆ. ಸತತವಾಗಿ ಒಂದು ತಿಂಗಳ ಕಾಲ ಮುಸ್ಲಿಂ ಬಾಂಧವರು ಉಪವಾಸ ಆಚರಿಸುತ್ತಿದ್ದು ದೇಶಕ್ಕೆ ಹಾಗೂ ಎಲ್ಲ ಮನುಕುಲಕ್ಕೆ ಒಳ್ಳೆಯದಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಲಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆನೆಮಡುಗು ಹರೀಶ್, ಸುಹಾಸ್, ರಘು, ಶಶಿ, ತಬಕೀರ್, ಶ್ರೀಕಾಂತ್, ಅಲ್ತಾಫ್, ಯೂನುಸ್, ಸೇರಿದಂತೆ ಭಗತ್‌ಸಿಂಗ್ ಚಾರಿಟಬಲ್ ಟ್ರಸ್ಟ್ ಸದಸ್ಯರುಗಳು ಮತ್ತು ಇತರರು ಉಪಸ್ಥಿತರಿದ್ದರು.

# ಫಲಾನುಭವಿಗಳಿಗೆ ಹಸುಗಳ ವಿತರಣೆ



**ಹನೂರು:** ಅಲೆಮಾರಿ ಹಾಗೂ ಅರೆ ಅಲೆಮಾರಿ ನಿಗಮದ ವತಿಯಿಂದ 2022-23ನೇ ಸಾಲಿನ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಆಯ್ಕೆಯಾದ ಆದಿವಾಸಿ ಬುಡಕಟ್ಟು ಸೋಲಿಗ ಸಮುದಾಯದ ಆಯ್ದ ಫಲಾನುಭವಿಗಳಿಗೆ ಹಸುಗಳನ್ನು ಶಾಸಕ ಎಂ.ಆರ್ ಮಂಜುನಾಥ್ ಅವರು ವಿತರಣೆ ಮಾಡಿದರು.

ಪಟ್ಟಣದ ಲೋಕೋಪಯೋಗಿ ಅತಿಥಿ ಗೃಹದ ಆವರಣದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಪಂಗಡಗಳ ಅಲೆಮಾರಿ ಹಾಗೂ ಅಲೆಮಾರಿ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಸಮುದಾಯಗಳ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಹಸುಗಳನ್ನು ವಿತರಣೆ ಮಾಡಿದರು.

ಇದೇವೇಳೆ ಶಾಸಕ ಮಂಜುನಾಥ್ ಅವರು ಮಾತನಾಡಿ ಸರ್ಕಾರದಿಂದ ಹಿಂದೂಗಳ ಸಮುದಾಯ ಅಭಿವೃದ್ಧಿಗೆ ಹಲವಾರು ಯೋಜನೆಗಳನ್ನು ರೂಪಿಸಿ. ಬಡ ಕುಟುಂಬಗಳಿಗೆ ಸ್ವಯಂ ಉದ್ಯೋಗ ಸೃಷ್ಟಿಸಿ ಆರ್ಥಿಕ ನೆರವನ್ನು ಕಟ್ಟುಕೊಳ್ಳಲು ಇಂತಹ ಯೋಜನೆಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ಹಸುಗಳನ್ನು ನೀಡಲಾಗಿದೆ ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಮಮ್ತಾಜ್ ಬೇಗಂ, ಸಹಾಯಕ ನಿರ್ದೇಶಕ ಪಶುಸಂಗೋಪನೆ ಇಲಾಖೆ ಸಿದ್ದರಾಜು, ಸಮಾಜ ಕಲ್ಯಾಣ ಇಲಾಖಾಧಿಕಾರಿ ಕೇಶವಮೂರ್ತಿ, ಅಲೆಮಾರಿ ನಿಗಮದ ಅಧಿಕಾರಿ ಈಶ್ವರ್, ಹಾಸ್ಟೆಲ್ ವಾರ್ಡನ್ ಮಧು, ಮುಖಂಡರುಗಳಾದ ಆದಿವಾಸಿ ಮುಖಂಡ ಗಾಣಿಗಮಂಗಲ ರಾಜಪ್ಪ , ಜಿ.ಮಹದೇವಸ್ವಾಮಿ, ಜಡೆಸ್ವಾಮಿ ದೊಡ್ಡಿ ರಂಗೇಗೌಡ, ಹಾವಿನ ಮೂಲೆ ಮಹದೇವಯ್ಯ ಸೇರಿದಂತೆ ಇನ್ನಿತರರು ಇದ್ದರು.

# ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಗಳ ಗೆಲುವು

**ದೇವನಹಳ್ಳಿ:** ಕಳೆದ ತಿಂಗಳು ಬೊಮ್ಮವಾರ ವಿ.ಎ.ಎಸ್.ಎಸ್.ಎನ್ ನಿರ್ದೇಶಕರ ಚುನಾವಣೆ ನಡೆದಿದ್ದು ಹೈಕೋರ್ಟ್ ತಡೆಯಾಜ್ಞೆ ಇದ್ದುದ್ದರಿಂದ ಮತ ಎಣಿಕೆ ಮಾಡಿರಲಿಲ್ಲ ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದಂತೆ ಶುಕ್ರವಾರ ಮತ ಎಣಿಕೆ ನಡೆಸಿ ಫಲಿತಾಂಶ ಪ್ರಕಟಿಸುವಂತೆ ಆದೇಶಿಸಿರುತ್ತಾರೆ ಮೂರು ಮತಕ್ಷೇತ್ರಗಳಾದ ಅರ್ಹ ಮತದಾರರ ಮತಗಟ್ಟೆ ರಿಟ್ ಪಿಟೀಷನ್ 1636 ಹಾಗೂ ರಿಟಿ ಪಿಟೀಷನ್ 1872 ಎಲ್ಲವನ್ನು ಕ್ರೂಡೀಕರಿಸಿ ಫಲಿತಾಂಶವನ್ನು ಪ್ರಕಟಿಸಿದ್ದೇವೆ ಎಂದು ಚುನಾವಣಾಧಿಕಾರಿ ಆರ್.ಚೇತನ ತಿಳಿಸಿದ್ದಾರೆ.

ಸಾಲಗಾರರ ಕ್ಷೇತ್ರ ಸಾಮಾನ್ಯ ಮೀಸಲುಸ್ಥಾನ ರಾಮೂರ್ತಿ.ಎನ್-331 ಮತ, ಶಿವಣ್ಣ.ಆರ್.-307, ರಾಜಣ್ಣ.ಪಿ-296, ಮುನಿಯಪ್ಪ-281, ಲೋಕೇಶ್.ಕೆ- 278, ಲಕ್ಷ್ಮೀ- 347, ಶಕುಂತಲ-333, ಹಿಂದುಳಿದ ವರ್ಗಗಳ ಪ್ರವರ್ಗ-ಎ ಮೀಸಲು ಸ್ಥಾನ ರಮೇಶ್.ವಿ-409, ಹಿಂದುಳಿದ ಪ್ರವರ್ಗ ಬಿ.ಮೀಸಲು ಸ್ಥಾನ ರವಿ.ಟಿ- 403, ಪರಿಶಿಷ್ಠ ಜಾತಿ ಮೀಸಲು ಸ್ಥಾನ ಸೀಗಳಪ್ಪ-320, ಪರಿಶಿಷ್ಠ ಪಂಗಡ ಮೀಸಲು ಸ್ಥಾನ ಮಂಜುನಾಥ್-356, ಸಾಲಗಾರರಲ್ಲದ ಕ್ಷೇತ್ರ ನವೀನ್‌ಕುಮಾರ್.ಬಿ.ಆರ್-141 ಮತಗಳನ್ನುಗಳಿಸಿ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ನೂತನ ನಿರ್ದೇಶಕ ಹೊಸಳ್ಳಿ ಟಿ. ರವಿ ಮಾತನಾಡಿ ನಿರ್ದೇಶಕರ ಸ್ಥಾನಕ್ಕೆ ಜ.27 ರಂದು ಚುನಾವಣೆ ನಡೆದಿತ್ತು. ಚಾಲೆಂಜ್ ಮತ ವನ್ನು ಹೈಕೋರ್ಟ್‌ನಲ್ಲಿ ದಾವೆ ಹೂಡಿದ್ದರು. ಎಲ್ಲಾ ಸದಸ್ಯರು ಜೆಡಿಎಸ್ ಮತ್ತು ಬಿಜೆಪಿ ಅಭ್ಯರ್ಥಿಗಳನ್ನು ಬೆಂಬಲಿಸಿದ್ದಾರೆ. ಈ ಗೆಲುವು ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರಿಗೆ ಸಲ್ಲುತ್ತದೆ. ಎರಡು ಪಕ್ಷದ ಮುಖಂಡರ ಶ್ರಮದಿಂದ ನಾವೆಲ್ಲರು ಜಯಶೀಲರಾಗಿದ್ದೇವೆ ಎಂದರು.

ಬಿಜೆಪಿ ದೇವನಹಳ್ಳಿ ಮಂಡಲ ಮಾಜಿ ಅಧ್ಯಕ್ಷ ಸುಂದರೇಶ್ (ಸುನಿಲ್) ಮಾತನಾಡಿ ಬೊಮ್ಮವಾರ ವಿವಿದೋದ್ದೇಶ ಪ್ರಾಥಮಿಕ ಕೃಷಿ ಸಹಕಾರ ಸಂಘದ ಚುನಾವಣೆಯಲ್ಲಿ 14 ಗ್ರಾಮಗಳ ಬಿಜೆಪಿ ಮತ್ತು ಜೆಡಿಎಸ್ ಎಲ್ಲಾ ಮುಖಂಡರ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಎಲ್ಲರ ಸಹಕಾರದಿಂದ ಎರಡು ಪಕ್ಷದ ಅಭ್ಯರ್ಥಿಗಳು ಜಯಸಾಧಿಸಿದ್ದಾರೆ. ಕಳೆದ 20 ವರ್ಷದಿಂದ ಎರಡು ಪಕ್ಷಗಳ ಹೊಂದಾಣಿಕೆಯಲ್ಲಿ ಸಂಘವನ್ನು ಉತ್ತಮವಾಗಿ ನಡೆಸಿಕೊಂಡು ಹೋಗುತ್ತಿದ್ದೇವೆ ನೂತನ ಸದಸ್ಯರು ಸಂಘವನ್ನು ಮತ್ತಷ್ಟು ಅಭಿವೃದ್ಧಿ ಪತದತ್ತ ಕೊಂಡೊಯ್ಯುತ್ತಾರೆ ಎಂದು ಹೇಳದರು.



# ಅಖಿಲ ಕರ್ನಾಟಕ ಸನ್ನದ್ದು ರಾಜ್ಯ ಲೆಕ್ಕಿಗರ ಸಂಘದ 37ನೇ ವಾರ್ಷಿಕ ಸಮ್ಮೇಳನ



**ಬೆಂಗಳೂರು:** ಕರ್ನಾಟಕ ರಾಜ್ಯ ಸನ್ನದು ರಾಜ್ಯ ಲೆಕ್ಕಿಗರ ಸಂಘದ 37ನೇ ವಾರ್ಷಿಕ ಸಮ್ಮೇಳನ ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಅದ್ದೂರಿಯಾಗಿ ನೆರವೇರಿತು.

ಖ್ಯಾತ ಚಲನಚಿತ್ರ ನಿರ್ದೇಶಕ ಟಿ.ಎಸ್. ನಾಗಾಭರಣ,ಹಿರಿಯ ನಿವೃತ್ತ ಐಎಎಸ್ ಅಧಿಕಾರಿ,ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರದ ಅಧ್ಯಕ್ಷ ರಾಕೇಶ್ ಸಿಂಗ್ ,ಪ್ರೋ ನಿಗಮ್ ಎಸ್ ನುಗ್ಗೆಹಳ್ಳಿ,ಸಂಘದ ಅಧ್ಯಕ್ಷ ವಿಜಯ್ ಕುಮಾರ್ ಪಟೇಲ್ ಮತ್ತಿತರರು ಭಾಗವಹಿಸಿದ್ದರು.

ಪ್ರಮುಖವಾಗಿ ಈ ಸಮಾವೇಶದಲ್ಲಿ "ಅಕೌಂಟ್ ಎಐ ಎಬಿಲಿಟಿ" ಎಂಬ ವಿಷಯವನ್ನು ಅಂದರೆ ಅರ್ಟಿಫಿಷಿಯಲ್ ಇಂಟಲಿಜೆನ್ಸ್ ಅನ್ನು ಲೆಕ್ಕ ಪರಿಶೋಧನೆಯಲ್ಲಿ ಬಳಸಬಹುದು ಎಂಬ ವಿಷಯವನ್ನು ಆದಾರವಾಗಿಟ್ಟುಕೊಂಡು ವಿವಿಧ ತಜ್ಞರು ವಿಷಯ ಮಂಡಿಸಿದರು.

# ಅತ್ಯಾಧುನಿಕ ಕ್ರೀಡಾ ಸೌಲಭ್ಯಗಳೊಂದಿಗೆ ಕ್ರೀಡಾಂಗಣ ಅಭಿವೃದ್ಧಿ ಪಡಿಸಲು ಕ್ರಮ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲಾ ಸರ್.ಎಂ.ವಿ ಕ್ರೀಡಾಂಗಣವನ್ನು ಸುಮಾರು 70 ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಕ್ರೀಡಾ ವ್ಯವಸ್ಥೆಗಳೊಂದಿಗೆ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಈಗಾಗಲೇ ನೀಲಿನಕ್ಷೆಯನ್ನೂ ಸಿದ್ಧಪಡಿಸಿ ಸಂಪನ್ಮೂಲ ಕ್ರೋಢೀಕರಣದತ್ತ ಚಿಂತನೆ ನಡೆಸಲಾಗುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ. ಸುಧಾಕರ್ ಅವರು ತಿಳಿಸಿದರು.

ಅವರು ಭಾನುವಾರ ಬೆಳಗ್ಗೆ ಜಿಲ್ಲಾ ಕೇಂದ್ರದಲ್ಲಿನ ಸರ್.ಎಂ.ವಿ ಕ್ರೀಡಾಂಗಣಕ್ಕೆ ಯುವಜನ ಸೇವೆ ಮತ್ತು ಯುವ ಸಬಲೀಕರಣ ಇಲಾಖೆ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲಾ ಕ್ರೀಡಾಂಗಣವನ್ನು ಅತ್ಯಾಧುನಿಕ ಕ್ರೀಡಾ ಸೌಲಭ್ಯಗಳೊಂದಿಗೆ ಸುಮಾರು 70 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ವಿವಿಧ ಮೂಲಗಳಿಂದ ಸಂಪನ್ಮೂಲ ಕ್ರೋಢೀಕರಣ ಸಾಧ್ಯತೆಗಳತ್ತ ಚಿಂತನೆ ನಡೆಸಲಾಗುತ್ತಿದೆ. ಸರ್ಕಾರಿ ಮತ್ತು ಸರ್ಕಾರೇತರ ಸಂಸ್ಥೆಗಳ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಬೇಕೇ ಅಥವಾ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ನಂತಹ ಸಂಸ್ಥೆಗಳಿಗೇ ಜವಾಬ್ದಾರಿ ನೀಡಿ ಅಭಿವೃದ್ಧಿಪಡಿಸಬೇಕೇ, ಇಲ್ಲವೇ ಸರ್ಕಾರಿ ಅನುದಾನದಲ್ಲೇ ಅಭಿವೃದ್ಧಿಪಡಿಸಬೇಕೇ ಎಂಬುದರ ಬಗ್ಗೆ ಎಲ್ಲ ದೃಷ್ಟಿಕೋನಗಳಲ್ಲಿ ಚರ್ಚೆ ನಡೆಸಲಾಗುತ್ತಿದೆ. ಸಿಂಥೆಟಿಕ್ ಟ್ರಾಕ್ ಸೇರಿದಂತೆ ಕ್ರೀಡಾಂಗಣದಲ್ಲಿ ವಿವಿಧ ಸೌಲಭ್ಯಗಳನ್ನು ಒದಗಿಸಿ ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು. ಸದ್ಯದಲ್ಲೇ ಕ್ರೀಡಾ ವಸತಿ ನಿಲಯವನ್ನು ಉದ್ಘಾಟಿಸಲಾಗುವುದು ಎಂದರು.



ಈ ಸಂದರ್ಭದಲ್ಲಿ ಯುವಜನ ಸೇವೆ ಮತ್ತು ಯುವ ಸಬಲೀಕರಣ ಇಲಾಖೆ ಆಯುಕ್ತ ಚೇತನ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್, ಉಪವಿಭಾಗಾಧಿಕಾರಿ ಅಶ್ವಿನ್,ತಹಸೀಲ್ದಾರ್ ಅನಿಲ್,ಯುವಜನ ಸೇವೆ ಮತ್ತು ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಜಗದೀಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಇದ್ದರು.

# ಕುಡಿಯುವ ನೀರಿನ ಘಟಕಕ್ಕೆ ಭೂಮಿಪೂಜೆ

**ಹನೂರು:** ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಅವರಣದಲ್ಲಿ 4 ಲಕ್ಷದ 80 ಸಾವಿರ ರೂ. ವೆಚ್ಚದ ಅನುದಾನದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಅಭಿವೃದ್ಧಿ ಕಾಮಗಾರಿಗೆ ಕ್ಷೇತ್ರದ ಶಾಸಕ ಎಂಆರ್ ಮಂಜುನಾಥ್ ಅವರು ಭೂಮಿ ಪೂಜೆ ನೇರವೇರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಶಾಸಕ ಮಂಜುನಾಥ್ ಮಾತನಾಡಿ ಆರ್.ಎಂ.ಸಿ ಆವರಣದಲ್ಲಿ ಇನ್ನು ಹಲವಾರು ಅಭಿವೃದ್ಧಿ ಕಾಮಗಾರಿಗಳು ಆಗಬೇಕಿದೆ ಇದೀಗ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಅನುದಾನ ಬಿಡುಗಡೆಯಾಗಿದೆ. ಇನ್ನು ಶೌಚಾಲಯ, ಕಟ್ಟಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಆದ ಬಳಿಕ ಕೆಲಸ ಪ್ರಾರಂಭ ಮಾಡಲಾಗುವುದು, ಜೊತೆಗೆ ಇಲ್ಲಿ ಗೋಡನ್ ಗಳನ್ನು ನಿರ್ಮಾಣ ಮಾಡಿರುವ ಮಳಿಗೆದಾರರು ಇಲ್ಲೇ ಬಂದು ತಮ್ಮ ವ್ಯಾಪಾರ ವಹಿವಾಟುಗಳನ್ನು ನಡೆಸಿದರೆ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಮಳಿಗೆ ನಿರ್ಮಾಣ ಮಾಡಿರುವವರು ಇಲ್ಲೇ ಬಂದು ವ್ಯಾಪಾರ ವಹಿವಾಟು ಮಾಡಿ ಇಲ್ಲದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಅಧ್ಯಕ್ಷೆ ಮುಂತಾಜ್ ಬಾನು, ಉಪಾಧ್ಯಕ್ಷ ಆನಂದ್, ಸದಸ್ಯರುಗಳಾದ ಮಹೇಶ್ ನಾಯಕ, ಮಂಜೇಶ್, ಪ್ರಸನ್ನ, ಮುಖಂಡರುಗಳಾದ ಕೇಬಲ್ ರಾಜು, ವಿಜಯ್ ಕುಮಾರ್,, ನಿಂಗರಾಜು, ಗೋವಿಂದ, ವೆಂಕಟೇಶ್, ಹಾಗೂ ಇನ್ನಿತರರು ಇದ್ದರು.



# ‘ಗಾಲ್ಫ್ ಫಾರ್ ಗುಡ್’ ಪಂದ್ಯಾವಳಿ: ಅಕ್ಷಯಪಾತ್ರ ಫೌಂಡೇಷನ್‌ಗೆ ನೆರವು

**ದೇವನಹಳ್ಳಿ:** ನಿಯೋಕ್ರೆಡ್‌ನ ಸಿಎಸ್‌ಆರ್ ಯೋಜನೆಯಾದ ದಿ ಎಂಪ್ಯಾಕ್ಟ್ ಪ್ರಾಜೆಕ್ಟ್ ನ ಬೆಂಬಲದಿಂದ ನಡೆದಿರುವ ‘ಗಾಲ್ಫ್ ಫಾರ್ ಗುಡ್’ ಚಾರಿಟಿ ಗಾಲ್ಫ್ ಪಂದ್ಯಾವಳಿಯು ಬೆಂಗಳೂರಿನ ಪ್ರೆಸ್ಟೀಜ್ ಗಾಲ್ಫ್ ಶೈರ್‌ಕ್ಲಬ್‌ನಲ್ಲಿ ಮಾ.21ರಂದು ಯಶಸ್ವಿಯಾಗಿ ನಡೆದಿದೆ.

ಈ ಪಂದ್ಯಾವಳಿಯಲ್ಲಿ ಒಟ್ಟು 3,20,122 ಊಟಗಳಿಗೆ ಆಗುವಷ್ಟು ಹಣ ಸಂಗ್ರಹಿಸಲಾಗಿದ್ದು, ಈ ಮೊತ್ತವನ್ನು ಕರ್ನಾಟಕದ ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಶಾಲೆಗಳ 1,400 ಮಕ್ಕಳಿಗೆ ಬಿಸಿಯೂಟ ಒದಗಿಸಿ ಅವರಿಗೆ ಶೈಕ್ಷಣಿಕವಾಗಿ ನೆರವಾಗುವ ಉದ್ದೇಶದಿಂದ ಅಕ್ಷಯ ಪಾತ್ರ ಫೌಂಡೇಶನ್‌ಗೆ ದೇಣಿಗೆ ನೀಡಲಾಗಿದೆ.

ಸರ್ಕಾರಿ ಶಾಲೆಗಳ ಮಕ್ಕಳ ಹಸಿವನ್ನು ನೀಗಿಸಿ ಅವರ ಶಿಕ್ಷಣಕ್ಕೆ ನೆರವಾಗುವ ಉದ್ದೇಶದ ಈ ಪಂದ್ಯಾವಳಿಯಲ್ಲಿ ಸಿಸ್ಕೋದ ಮಾಜಿ ಅಧ್ಯಕ್ಷ ಹಾಗೂ ಸ್ಮಾರ್ಟಿನ್ ಸ್ಪೇಸಸ್‌ನ ಸಂಸ್ಥಾಪಕ ಮತ್ತು ಸಿಇಓ ದಿನೇಶ್ ಮಲ್ಕಾನಿ, ಮೈರಾವ್ ಗ್ರೂಪ್ ಆಫ್ ಕಂಪನೀಸ್‌ನ ಎಂಡಿ ಹಾಗೂ ಗ್ರೀನ್ ವೇಸ್ ಗ್ರೂಪ್ ಆಫ್ ಕಂಪನೀಸ್ ನ ಗ್ರೂಪ್ ಸಿಇಓ ವೈಭವ್ ಗುಪ್ತಾ, ಎಂಬೆಸಿ ಗ್ರೂಪ್ ನ ವಿಪಿ ಗೋಪಿನಾಥ್ ಅಂಬಾಡಿತೋಡಿ, ವಿ ಗಾರ್ಡ್ ಇಂಡಸ್ಟ್ರೀಸ್ ಲಿಮಿಟೆಡ್‌ನ ನಿರ್ದೇಶಕ ಈಶ್ವರ್ ಸುಬ್ರಮಣಿಯನ್ ಮತ್ತು ಸೈಫ್ ಮೆಖ್ರಿ; ನೆಲ್ಸನ್ ಡಯಾಸ್ ಸೇರಿದಂತೆ ಉದ್ಯಮ ನಾಯಕರು, ಸಮಾಜಸೇವಕರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಮಾರ್ಟಿನ್ ಸ್ಪೇಸಸ್ ನ ಸಂಸ್ಥಾಪಕ ಮತ್ತು ಸಿಇಓ ಹಾಗೂ ಸಿಸ್ಕೊದ ಮಾಜಿ ಅಧ್ಯಕ್ಷ ದಿನೇಶ್ ಮಲ್ಕಾನಿ, "ಗಾಲ್ಫ್ ಫಾರ್ ಗುಡ್ ಒಂದು ಪಂದ್ಯಾವಳಿ ಮಾತ್ರವೇ ಅಲ್ಲ, ಒಂದು ಉತ್ತಮ ಉದ್ದೇಶವನ್ನು ಹೊಂದಿರುವ ಮಹತ್ವದ ಚಳುವಳಿ ಎಂದು ಭಾವಿಸಬಹುದಾಗಿದೆ. ಅಕ್ಷಯ ಪಾತ್ರ ಫೌಂಡೇಶನ್ ನ ದೀರ್ಘಕಾಲದ ಬೆಂಬಲಿಗನಾಗಿ ನಾನು ಲಕ್ಷಾಂತರ ಮಕ್ಕಳಿಗೆ ನೆರವು ಒದಗಿಸುವ ಉದ್ದೇಶದಿಂದ ಸಮಾಜದ ಮುಖಂಡರು ಮತ್ತು ಸಮಾಜಸೇವಕರನ್ನು ಒಂದೆಡೆ ಸೇರಿಸಲು ಅವಕಾಶ ದೊರೆತಿರುವುದಕ್ಕಾಗಿ ಸಂತೋಷ ಪಡುತ್ತೇನೆ" ಎಂದರು.

ನಿಯೋಕ್ರೆಡ್ ನ ಸಹ-ಸಂಸ್ಥಾಪಕ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ತರುಣ್ ನಜಾರೆ ಮಾತನಾಡಿ, "ಬದಲಾವಣೆ ತರುವ ಮನಸ್ಸುಳ್ಳವರು ಮತ್ತು ಬದಲಾವಣೆ ತರುವವರ ಮಧ್ಯೆ ಇರುವ ಅಂತರವನ್ನು ಕಡಿಮೆ ಮಾಡಲು ಎಂಪ್ಯಾಕ್ಟ್ ಪ್ರಾಜೆಕ್ಟ್ ಅನ್ನು ರಚಿಸಲಾಗಿದೆ. ‘ಗಾಲ್ಫ್ ಫಾರ್ ಗುಡ್’ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲರೂ ಒಂದು ಮಹತ್ತರ ಉದ್ದೇಶದ ಭಾಗವಾಗಿದ್ದಾರೆ. ಈ ಮೂಲಕ ನಾವು ಯಾವುದೇ ಮಗು ಹಸಿವನ್ನು ನೀಗಿಸಿಕೊಂಡು ಉತ್ತಮ ಶಿಕ್ಷಣ ಪಡೆಯಲು ದಾರಿ ಮಾಡಿಕೊಟ್ಟಿದ್ದೇವೆ " ಎಂದರು.

ಅಕ್ಷಯ ಪಾತ್ರ ಫೌಂಡೇಶನ್‌ನ ಸಿಇಓ ಶ್ರೀಧರ್ ವೆಂಕಟ್ ಅವರು ಮಾತನಾಡಿ, "ಗಾಲ್ಫ್ ಫಾರ್ ಗುಡ್ ಪಂದ್ಯಾವಳಿಗೆ ಸಾಮೂಹಿಕ ಶಕ್ತಿಗೆ ಅತ್ಯುತ್ತಮ ಉದಾಹರಣೆಯಾಗಿದೆ. ಪ್ರತಿಯೊಂದು ಮಗುವೂ ಹಸಿವು ಮುಕ್ತ ಶಿಕ್ಷಣ ಪಡೆಯುವ ಉದ್ದೇಶಕ್ಕೆ ಈ ಪಂದ್ಯಾವಳಿಯು ದೊಡ್ಡ ಕೊಡುಗೆ ನೀಡಿದೆ. ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ ಎಲ್ಲರಿಗೂ ನಾವು ಕೃತಜ್ಞರಾಗಿದ್ದೇವೆ. ಈ ಪಂದ್ಯಾವಳಿ ಸಾಧ್ಯವಾಗಿಸಿದ್ದಕ್ಕೆ ನಿಯೋಕ್ರೆಡ್ ನ ‘ದಿ ಎಂಪ್ಯಾಕ್ಟ್ ಪ್ರಾಜೆಕ್ಟ್’ ಗೆ ಧನ್ಯವಾದಗಳು. ಲೊಕೇಷನ್ ಪಾರ್ಟ್ನರ್ ಆದ ಪ್ರೆಸ್ಟೀಜ್ ಗಾಲ್ಫ್ ಶೈರ್ ಕ್ಲಬ್, ಮುದ್ರಣ ಪಾಲುದಾರರಾದ ಡೆಕ್ಕನ್ ಹೆರಾಲ್ಡ್, ರೇಡಿಯೊ ಪಾಲುದಾರರಾದ ರೇಡಿಯೊ ಸಿಟಿ, ಮತ್ತು ಸಪೋರ್ಟ್ ಪಾರ್ಟ್ನರ್ ಆದ ಟಿಐಇ ಬೆಂಗಳೂರು ಈ ಎಲ್ಲಾ ಸಂಸ್ಥೆಗಳಿಗೂ ನಾವು ಧನ್ಯವಾದ ಸಲ್ಲಿಸುತ್ತೇವೆ. ಪಂದ್ಯಾವಳಿಯ ಪ್ರಶಸ್ತಿಗಳನ್ನು ಕೊಡುಗೆ ನೀಡಿದ ಆಲ್ ಮೌಜ್‌ಗೆ ವಿಶೇಷ ಧನ್ಯವಾದಗಳು" ಎಂದರು.

ಅಕ್ಷಯ ಪಾತ್ರ ಪ್ರಸ್ತುತ ಭಾರತದ 16 ರಾಜ್ಯಗಳು ಮತ್ತು 3 ಕೇಂದ್ರಾಡಳಿತ ಪ್ರದೇಶಗಳ 78 ಸ್ಥಳಗಳಲ್ಲಿ ಪ್ರತಿದಿನ 2.25 ಮಿಲಿಯನ್ ಮಕ್ಕಳಿಗೆ ಬಿಸಿಯೂಟ ಒದಗಿಸುತ್ತಿದೆ ಎಂಬುದನ್ನು ಇಲ್ಲಿ ನೆನಪಿಸಿಕೊಳ್ಳಬಹುದು.




# ವಿಕಲಚೇತನರ ಆತ್ಮಸ್ಥೈರ್ಯಕ್ಕೆ ಸಮಾಜದ ಬೆಂಬಲ ಅಗತ್ಯ: ಸಚಿವ ಡಾ. ಜಿ. ಪರಮೇಶ್ವರ್



**ತುಮಕೂರು:** ವಿಕಲಚೇತನರ ಆತ್ಮಸ್ಥೈರ್ಯಕ್ಕೆ ಸಮಾಜದ ಬೆಂಬಲ ಅಗತ್ಯ. ಅವರನ್ನು ಕಡೆಗಣಿಸದೆ, ನಿಂದಿಸದೆ ಆತ್ಮಗೌರವದಿಂದ ಬದುಕಲು ಅವಕಾಶ ನೀಡಬೇಕು ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು.

ಮಹಾತ್ಮ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಹಾಗೂ ವಿಕಲಚೇತನರ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಎಡಿಐಪಿ ಯೋಜನೆಯಡಿ ಜಿಲ್ಲೆಯ ಕುಣಿಗಲ್, ಶಿರಾ, ಪಾವಗಡ ತಾಲೂಕಿನ ವಿಕಲಚೇತನರಿಗೆ ವಿವಿಧ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಮ್ಮ ದೇಶದ ಜನಸಂಖ್ಯೆಯಲ್ಲಿ ಶೇ.5ರಷ್ಟು ವಿಶೇಷ ಚೇತನರಿದ್ದು, ಸಾಮಾನ್ಯ ಜನರಿಗಿಂತ ಹೆಚ್ಚು ಪ್ರತಿಭೆ, ಬುದ್ಧಿವಂತಿಕೆ ಹೊಂದಿದ್ದಾರೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ವಿಕಲಚೇತನರು ಅಂತರಾಷ್ಟ್ರೀಯ ಮಟ್ಟದಲ್ಲಿ ಕ್ರೀಡೆ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡು ಸಾಧನೆ ಮಾಡಿದ್ದಾರೆ. ಸ್ವಾವಲಂಬಿ ಬದುಕಿಗಾಗಿ ಅವರ ಉದ್ಯೋಗ ಕ್ಷೇತ್ರಗಳೂ ಬದಲಾಗುತ್ತಾ, ಹೊಸ ಅವಕಾಶಗಳೂ ದೊರೆಯುತ್ತಿವೆ. ಪ್ರಸ್ತುತ ದಿನಗಳಲ್ಲಿ ವಿಕಲಚೇತನರು ಆಧುನಿಕ ತಂತ್ರಜ್ಞಾನದ ಶಿಕ್ಷಣ ಪಡೆದು ಕಂಪ್ಯೂಟರ್ ಆಪರೇಟರ್, ಡೇಟಾ ಎಂಟ್ರಿ ಆಪರೇಟರ್ ನೌಕರಿ ಸೇರಿದಂತೆ ಸರ್ಕಾರದ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುವ ಮೂಲಕ ತಮ್ಮ ಜೀವನ ರೂಪಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ಮಾತನಾಡಿ ವಿಕಲಚೇತನರಿಗಾಗಿ ಎಲ್ಲ ಇಲಾಖೆಗಳ ಅನುದಾನದಲ್ಲಿಶೇ.3ರಷ್ಟು ಮೀಸಲಾತಿ ನೀಡಲಾಗುತ್ತದೆ. ಈ ಅನುದಾನವನ್ನು ಬಳಸಿಕೊಂಡು ವಿಲಚೇತನರಿಗೆ ಸರ್ಕಾರಿ ಸೌಲಭ್ಯಗಳು ಸಿಗುವಂತೆ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ವಿಶೇಷ ಯೋಜನೆಯಡಿ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಯುಡಿಐಡಿ ಗುರುತಿನ ಚೀಟಿ ಹೊಂದಿರಬೇಕು. ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ವಿಶೇಷ ಶಿಬಿರಗಳನ್ನು ನಡೆಸಿ ವಿಶೇಷ ಚೇತನರಿಗೆ ಗುರುತಿನ ಚೀಟಿ ನೀಡಲಾಗುತ್ತಿದ್ದು, ಜಿಲ್ಲೆಯಲ್ಲಿ ಈಗಾಗಲೇ ಶೇ.99ರಷ್ಟು ಯುಡಿಐಡಿ ಕಾರ್ಡುಗಳನ್ನು ನೀಡಲಾಗಿದೆ ಎಂದರು.

ವಿವಿಧ ವಸತಿ ಯೋಜನೆಯಡಿ ಈವರೆಗೆ ಜಿಲ್ಲೆಯಲ್ಲಿ 10,000 ನಿವೇಶನಗಳನ್ನು ಗುರುತಿಸಲಾಗಿದ್ದು, ಇದರಲ್ಲಿ ವಿಶೇಷಚೇತನರಿಗಾಗಿ ಶೇಕಡಾ 3ರಷ್ಟು ಮೀಸಲಾತಿ ನೀಡಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಲ್ಲದೆ ವಿಶೇಷಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಹತೆಗನುಗುಣವಾಗಿ ಲ್ಯಾಪ್‌ಟಾಪ್‌ಗಳನ್ನು ನೀಡಲು ಸಿದ್ಧತೆಗಳು ನಡೆಯುತ್ತಿವೆ ಎಂದು ತಿಳಿಸಿದರು.

ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ್ ಮಾತನಾಡಿ. ವಿಕಲಚೇತನರಿಗೂ ಸಮಾನ ಅವಕಾಶಗಳು ದೊರೆಯಬೇಕು. ವಿಕಲಚೇತನರಲ್ಲಿಯೂ ಬಹಳ ಪ್ರತಿಭಾವಂತವರಿದ್ದು, ಉತ್ತೇಜನ ನೀಡುವ ಕಾರ್ಯವನ್ನು ಸರ್ಕಾರದಿಂದ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭಾಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಹೆಚ್.ಎ.ಎಲ್ ಪ್ರತಿನಿಧಿ ಪ್ರಧಾನ ವ್ಯವಸ್ಥಾಪಕ ಕೃಷ್ಣಪ್ಪ, ವಿಕಲ ಚೇತನ ಕಲ್ಯಾಣಾಧಿಕಾರಿ ಚಿದಾನಂದಮೂರ್ತಿ, ಮತ್ತಿತರ ಅಧಿಕಾರಿಗಳು ಇದ್ದರು.

ಈ ಸಂದರ್ಭದಲ್ಲಿ ಸುಮಾರು 600 ಫಲಾನುಭವಿಗಳಿಗೆ ಬ್ಯಾಟರಿ ಚಾಲಿತ ಮೊಪೆಡ್, ಕೈ ಚಾಲಿತ ಸೈಕಲ್, ಕ್ರಚಸ್(ಊರುಗೋಲು), ವಾಕರ್, ಬ್ರೈಲ್ ಕಿಟ್, ಸ್ಮಾರ್ಟ್ ಫೋನ್, ವ್ಹೀಲ್ ಚೇರ್, ಎಂ.ಆರ್. ಕಿಟ್, ಮತ್ತಿತರ ಸಲಕರಣೆ ಹಾಗೂ ಪಾಲಿಕೆ ವ್ಯಾಪ್ತಿಯ 3 ವಾರ್ಡು ಮತ್ತು 38 ಗ್ರಾಮ ಪಂಚಾಯತಿಗಳಿಗೆ ಕ್ಷಯರೋಗ ಮುಕ್ತವೆಂದು ಘೋಷಿಸಿ ಸಾಂಕೇತಿಕವಾಗಿ ಪ್ರಮಾಣಪತ್ರಗಳನ್ನು ಸಚಿವರು ವಿತರಿಸಿದರು.

# ಯುಗಾದಿ ಹಬ್ಬದ ಪ್ರಯುಕ್ತ ಮಹಿಳೆಯರಿಗೆ ಸೀರೆ ಉಡುಗೊರೆ

**ಕೊರಟಗೆರೆ:** ತಾಲ್ಲೂಕಿನ ಹಂಚಿಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ದೊಡ್ಡ ಮಲ್ಲಯ್ಯನಪಾಳ್ಯ ಗ್ರಾಮದ ಶಿವಣ್ಣ ಎನ್ನುವ ರೈತ ತಾನು ಹುಟ್ಟಿ ಬೆಳೆದ ಗ್ರಾಮದ ಬಡ ಮಹಿಳೆಯರಿಗೆ ಗಣಪತಿ ದೇವಸ್ಥಾನದ 25ನೇ ವರ್ಷದ ವಾರ್ಷಿಕೋತ್ಸವ ಹಾಗೂ ಬರುವ ಯುಗಾದಿ ಹಬ್ಬಕ್ಕೆ ಸೀರೆಗಳನ್ನು ಉಡುಗೊರೆಯಾಗಿ ನೀಡಿದ ದೊಡ್ಡ ಮಲ್ಲಯ್ಯನ ಪಾಳ್ಯದ ನಿವಾಸಿ ಶಿವಣ್ಣ ಹಾಗೂ ಕುಟುಂಬಸ್ಥರು. 25 ವರ್ಷಗಳ ಹಿಂದೆ ಗಣಪತಿ ದೇವಸ್ಥಾನ ನಿರ್ಮಾಣ ಮಾಡುವಾಗ ಸುತ್ತಮುತ್ತ ಗ್ರಾಮಗಳ ಬಡವರಿಗೆ ಏನಾದರೂ ಸಹಾಯ ಮಾಡಬೇಕು ಎಂದು ದೇವರ ಬಳಿ ಕೇಳಿಕೊಂಡಿದ್ದೆವು.

ಅದರಂತೆಯೇ ಇದೀಗ ನಮ್ಮ ಗ್ರಾಮದ ಗಣಪತಿ ದೇವಸ್ಥಾನಕ್ಕೆ ವಿಶೇಷ ಪೂಜೆ ಸಲ್ಲಿಸಿ ಪೂಜೆಗೆ ಬಂದ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆಯನ್ನು ಕಲ್ಪಿಸಿ ಬಡ ಮಹಿಳೆಯರಿಗೆ ನಮ್ಮ ಕೈಲಾದಷ್ಟು ಸುಮಾರು 150 ಮಹಿಳೆಯರಿಗೆ ಹೊಸ ಸೀರೆಗಳನ್ನ ಉಡುಗೊರೆಯಾಗಿ ನೀಡಿದ್ದೇವೆ.ಭಗವಂತನ ಅನುಗ್ರಹದಿಂದ ಮುಂದಿನ ಬಾರಿ ಮತ್ತಷ್ಟು ಸಹಾಯ ಮಾಡುವ ಆಸೆ ನನಗಿದೆ ಎಂದು ತಿಳಿಸಿದರು..

ಶಿವಣ್ಣನವರ ಪುತ್ರಿ ಸುಮಾ ಮಾತನಾಡಿ, ನಮ್ಮ ತಂದೆಯವರ ಆಶಯದಂತೆ 25 ವರ್ಷಗಳ ಹಿಂದೆ ನಮ್ಮ ಗ್ರಾಮದಲ್ಲಿ ಗಣಪತಿ ದೇವಸ್ಥಾನ ನಿರ್ಮಾಣ ಮಾಡಿದ್ದೆವು ಇದೀಗ ಗಣಪತಿ ದೇವಸ್ಥಾನಕ್ಕೆ 25 ವರ್ಷಗಳು ತುಂಬಿದ್ದು ಅದರ ವಾರ್ಷಿಕೋತ್ಸವದ ಅಂಗವಾಗಿ ನಮ್ಮ ಗ್ರಾಮದ ಬಡ ಮಹಿಳೆಯರಿಗೆ ಯುಗಾದಿ ಹಬ್ಬಕ್ಕೆಂದು ಸಿರಿಗಳನ್ನ ಕೊಡಬೇಕು ಎಂದು ನಮ್ಮ ತಂದೆಯವರು ಅಂದುಕೊಂಡಿದ್ದರು ಅದರಂತೆ ಇಂದು ಅವರಿಗೆ ಊಟದ ವ್ಯವಸ್ಥೆಯನ್ನು ಕಲ್ಪಿಸಿ ಸೀರೆಗಳನ್ನು ಉಡುಗೊರೆಯಾಗಿ ನೀಡಿದ್ದೇವೆ ಮುಂದಿನ ದಿನಗಳಲ್ಲಿ ನಮ್ಮ ತಂದೆಯವರ ಜೊತೆ ನಾವು ಕೂಡ ಇಂತಹ ಸೇವೆಗಳಲ್ಲಿ ತೊಡಗಿಸಿಕೊಳ್ಳುತ್ತೇವೆ ಎಂದು ತಿಳಿಸಿದರು..

ಇದೇ ಸಂದರ್ಭದಲ್ಲಿ ಗ್ರಾಮದ ಮುಖಂಡರು ಹಿರಿಯರು ಮಹಿಳೆಯರು ಆಚರಿದ್ದರು..



# ಮಳೆ ಗಾಳಿಗೆ ಹಾರಿದ ತಗಡಿನ ಶೀಟುಗಳು





**ಶಿಡ್ಲಘಟ್ಟ:** ತಾಲ್ಲೂಕಿನ ಹಲವು ಕಡೆ ಮಳೆ ಬಿತ್ತು ಎರಡು ಮೂರು ದಿನಗಳಿಂದಲೂ ಮೋಡ ಕವಿದ ವಾತಾವರಣ ಇತ್ತಾದರೂ ಬಿಸಿಲಿನ ಧಗೆಯೂ ಹೆಚ್ಚಾಗಿತ್ತು. ಮಳೆ ಬೀಳಬಹುದಾದ ವಾತಾವರಣ ನಿರ್ಮಾಣವಾಗಿದ್ದು ತಾಲ್ಲೂಕಿನ ಬಹುತೇಕ ಕಡೆ ಬೇಸಿಗೆಯ ಮೊದಲ ಮಳೆಯ ಹನಿಗಳ ಸಿಂಚನವಾಯಿತು.

ಕೆಲವೊಂದು ಕಡೆ ಬಿರುಸಿನ ಮಳೆಯಾಗಿದ್ದರೆ ಇನ್ನೊಂದಷ್ಟು ಕಡೆ ಸುಮ್ಮನೆ ಅಲ್ಲಲ್ಲಿ ಭೂಮಿ ಮೇಲಿನ ಧೂಳು ತೇವವಾಗುವಷ್ಟು ಮಾತ್ರವೇ ಮಳೆ ಬಿದ್ದಿದೆ ಇದರಿಂದ ಮಳೆ ಹನಿಗಳು ಬಿದ್ದ ಸಂತಸ ಒಂದು ಕಡೆಯಾದರೂ ಸಾಕು ಸಾಕಾಗದ ಮಳೆಯಿಂದ ಇನ್ನಷ್ಟು ಧಗೆ ಹೆಚ್ಚುವ ಆತಂಕವೂ ಹೆಚ್ಚಾಗಿದೆ.

ಬೋದಗೂರು ಗ್ರಾಮದಲ್ಲಿ ಬಚ್ಚಮ್ಮ ಎನ್ನುವವರಿಗೆ ಸೇರಿದ ರೇಷ್ಮೆ ಹುಳು ಸಾಕಣೆ ಮನೆಯ ಚಾವಣಿಯ ತಗಡಿನ ಶೀಟುಗಳು ಹಾರಿ ಹೋಗಿವೆ. ಎರಡು ವಿದ್ಯುತ್ ಕಂಬಗಳು ನೆಲಕ್ಕುರುಳಿವೆ ಒಂದು ಮರ ಬುಡ ಸಮೇತ ಉರುಳಿ ರಸ್ತೆಗೆ ಬಿದ್ದಿದೆ.

ಕೆಲವೊಂದು ಕಡೆ ಬಿರುಗಾಳಿ ಸಮೇತ ಸಣ್ಣ ಪ್ರಮಾಣದ ಮಳೆ ಬಿದ್ದಿದ್ದು ಬೆಳೆ ಹಾನಿ, ಮನೆ ಚಾವಣಿ ಹಾರಿದ್ದು, ಮರಗಳು ಉರುಳಿ ಬಿದ್ದ ಘಟನೆಗಳು ನಡೆದಿದೆ.

# ಸರ್ಕಾರಿ ಶಾಲೆಗೆ ಶತಮಾನೋತ್ಸವದ ಸಂಭ್ರಮ

**ದೇವನಹಳ್ಳಿ:** ಸರಕಾರಿ ಕೊರಚರ ಪಾಳ್ಯ ಶಾಲೆಗೆ ಶತಮಾನೋತ್ಸವದ ಸಂಭ್ರಮ ಹಾಗಾಗಿ ವಿದ್ಯಾಭ್ಯಾಸ ಮಾಡಿದ ಎಲ್ಲಾ ವಿದ್ಯಾರ್ಥಿಗಳನ್ನು ಒಗ್ಗೂಡಿಸಿ ಶಾಲಾ ವಾರ್ಷಿಕೋತ್ಸವವನ್ನು ಹಬ್ಬದಂತೆ ಸಂಭ್ರಮಿಸಬೇಕು ಎಂದು ಮಾಜಿ ಶಾಸಕ ಜಿ.ಚಂದ್ರಣ್ಣ ತಿಳಿಸಿದರು.

ದೇವನಹಳ್ಳಿ ಪಟ್ಟಣದ ಸರಕಾರಿ ಕೊರಚರ ಪಾಳ್ಯ ಶಾಲೆಯ ಶತಮಾನೋತ್ಸವ ಆಚರಣೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು. ಈ ಶಾಲೆಯಲ್ಲಿ 100 ವರ್ಷಗಳಿಂದ ಈ ಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳ ಪಟ್ಟಿಯನ್ನು ಶಾಲೆಯ ಶಿಕ್ಷಕರು ಪಟ್ಟಿ ಮಾಡಿದ್ದಾರೆ ಎಲ್ಲರಿಗೂ ಆಹ್ವಾನ ನೀಡಿ ಹಾಗೂ ಎಲ್ಲರು ಹಳೆ ವಿದ್ಯಾರ್ಥಿಗಳ ಸಂಘದಲ್ಲಿ ಸದಸ್ಯತ್ವ ಪಡೆದಿರುವವರು ನಿಮ್ಮ ಅಕ್ಕಪಕ್ಕದ ವಿದ್ಯಾರ್ಥಿಗಳನ್ನು ಗುರುತಿಸಿ ಕಾರ್ಯಕ್ರಮಕ್ಕೆ ಕರೆತರಬೇಕು. ಶಾಲೆಗೆ ತನ್ನದೆ ಆದ ಇತಿಹಾಸವಿದೆ ಈ ಶಾಲೆಯಲ್ಲಿ ಅಭ್ಯಾಸ ಮಾಡಿದ ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ಕಾರ್ಯಕ್ರಮ ಯಶಸ್ವಿಗೆ ಹಳೆಯ ವಿದ್ಯಾರ್ಥಿಗಳಿಗೆ ಪ್ರತಿಯೊಬ್ಬರಿಗೂ ಜವಬ್ದಾರಿ ನೀಡಿ ಕಾರ್ಯಕ್ರಮವನ್ನು ಯಾಶಸ್ವಿಮಾಡೋಣ ಎಂದರು.



ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಸಿ.ಜಗನ್ನಾಥ್ ಮಾತನಾಡಿ ಶಾಲಾ ಶತಮಾನೋತ್ಸವ ಆಚರಣೆ ನಡೆಸುವ ಕುರಿತಾಗಿ ಅನೇಕ ಸಭೆಗಳನ್ನು ಮಾಡಿದ್ದೇವೆ ಈ ಸಭೆ ಅಚಿತಿಮ ಸಭೆಯಾಗಿದ್ದು ಶತಮಾನೋತ್ಸವ ಸಂಭ್ರಮದ ರೂಪುರೇಷೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ಕಾರ್ಯಕಮದ ರೂಪುರೇಷೆಗಳನ್ನು ಸಿದ್ಧಪಡಿಸಿದ್ದೇವೆ. ಅನೇಕ ಹಳೆಯ ವಿದ್ಯಾರ್ಥಿಗಳು ಕಾರ್ಯಕಮಕ್ಕೆ ಸಹಕಾರ ನೀಡುತ್ತಿದ್ದಾರೆ ಎಂದರು.

ಕೊರಚರ ಪಾಳ್ಯ ಶಾಲೆಯ ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಪಿ.ಗಂಗಾಧರಪ್ಪ ಮಾತನಾಡಿ ಶಾಲಾ ವಾರ್ಷಿಕೋತ್ಸವ ಆಚರಣೆ ರೂಪುರೇಷೆಗಳನ್ನು ಸಿದ್ದಪಡಿಸಿ ಪ್ರತಿಯೊಬ್ಬರಿಇಗೂ ಜಬಾಬ್ದಾರಿ ವಹಿಸಲಾಗಿದೆ. ಅನೇಕರು ಸ್ವಯಂ ಪ್ರೇರಿತವಾಗಿ ಸಭೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಅವರ ಕೈಲಾದ ಸಹಾಯವನ್ನು ಮಾಡಿದ್ದಾರೆ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ,ಎಲ್ಲರೂ ಒಗ್ಗೂಡಿ ಜವಬ್ದಾರಿಯಿಂದ ಕೆಲಸ ಮಾಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣ ಎಂದರು.

ಇದೆ ವೇಳೆ ಹಳೆ ವಿದ್ಯಾರ್ಥಿ ಹಾಗೂ ನಿವೃತ್ತ ಮುಖ್ಯಶಿಕ್ಷಕ ಶ್ರೀರಾಮಯ್ಯ, ಕೊರಚರ ಪಾಳ್ಯ ಶಾಲೆಯ ಮುಖ್ಯಶಿಕ್ಷಕ ಪುಟ್ಟಸ್ವಾಮಿ, ಪುರಸಭೆ ಅಧ್ಯಕ್ಷ ಡಿ.ಎಂ. ಮುನಿಕೃಷ್ಣ, ಉಪಾಧ್ಯಕ್ಷ ಜಿ.ಎ.ರವಿಂದ್ರ, ಸದಸ್ಯರಾದ ಎಸ್.ನಾಗೇಶ್, ಗೋಪಿ, ಮಾಜಿ ಸದಸ್ಯ ಗೋಪಿ, ದೇವನಹಳ್ಳಿ ಕ್ರೀಡಾಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ವಿಜಯ್‌ಕುಮಾರ್, ಹಳೆ ವಿದ್ಯಾರ್ಥಿಗಳಾದ ವೆಂಕಟೇಶ್, ಎಸ್.ಆರ್.ರವಿಕುಮಾರ್, ಮುನಿರಾಜು, ಮದನ್‌ಗೋಪಾಲ್, ಎಸ್.ವಿರೂಪಾಕ್ಷಯ್ಯ, ಮಲ್ಲಾರಿ ಕುಮಾರ್, ಮುತ್ತುರಾಜ್, ಶಾಮಣ್ಣ, ಶಾಲೆಯ ಸಹಶಿಕ್ಷಕರು ಹಳೆಯ ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಇದ್ದರು.


# ಆಹಾರ ನೀರಿಗಾಗಿ ಪರಿತಪಿಸುತ್ತಿರುವ ಜನ-ಜಾನುವಾರುಗಳು

**ವರದಿ: ಮುಬಷೀರ್ ಅಹಮದ್**

**ಚಿಕ್ಕಬಳ್ಳಾಪುರ:** ಬಾಗೇಪಲ್ಲಿ ತಾಲ್ಲೂಕಿನಲ್ಲಿ ಬೇಸಿಗೆ ಆರಂಭಕ್ಕೂ ಮುನ್ನವೇ ಅಧಿಕ ತಾಪಮಾನದಿಂದ ಜನ, ಜಾನುವಾರುಗಳು ಆಹಾರ-ನೀರಿಗಾಗಿ ಪರಿತಪಿಸುತ್ತಿವೆ.

ತಾಲ್ಲೂಕು ಬಯಲು ಸೀಮೆಯ ರಣ ಬಿಸಿಲಿಗೆ ಜಾನುವಾರುಗಳು ಮಂಕಾಗುತ್ತಿದ್ದು, ಹಸಿರು ಮೇವಿನ ಕೊರತೆ ಎಲ್ಲೆಡೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಹಾಲು ಪೂರೈಕೆಯು ಕುಂಠಿತಗೊಂಡಿದೆ. ಎಲ್ಲೆಡೆ ನೀರಿನ ಅಭಾವ ಸೃಷ್ಟಿಯಾಗಿದ್ದು, ಕಾಲುವೆಗಳ ಮೂಲ ಇಲ್ಲದ ತಾಲ್ಲೂಕು ಜಾನುವಾರುಗಳು ನೀರಿಗಾಗಿ ಪರದಾಡುತ್ತಿವೆ. ಅರಣ್ಯ ಪ್ರದೇಶದಲ್ಲಿ ಹೆಚ್ಚಾಗುತ್ತಿರುವ ಕಾಡ್ಗಚ್ಚಿನಿಂದಾಗಿ ಜಾನುವಾರುಗಳು ಹಸಿರು ಮೇವಿಗಾಗಿ ಪರದಾಡುತ್ತಿವೆ.





ಹಸಿರು ಮೇವಿನಲ್ಲಿನ ವಿಟಮಿನ್ ಕೊರತೆಯಿಂದಾಗಿ ಜಾನುವಾರು ಗಳು ಕುಳಿತಲ್ಲೇ ನೆಲ ಕಚ್ಚುತ್ತಿವೆ. ಬರ ಹೊಡೆತಕ್ಕೆ ರೈತರು ತತ್ತರಿಸಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೂ ಕೈ ಹಿಡಿಯುತ್ತಿದ್ದ ಹೈನುಗಾರಿಕೆಗೂ ಬರದ ಬಿಸಿ ತಟ್ಟಿದೆ. ಜಾನುವಾರುಗಳಿಗೆ ನೀರು, ಮೇವು ಒದಗಿಸುವುದು .

ರೈತರಿಗೆ ಸವಾಲಾಗಿ ಪರಿಣಮಿಸಿದೆ. ಮಳೆ ಅಭಾವದಿಂದ ಬಯಲು ಪ್ರದೇಶದಲ್ಲಿ ಹಸಿರು ಮಾಯವಾಗಿದೆ. ಗಿಡ,ಮರ, ಹುಲ್ಲು ಒಣಗಿ ಗುಡ್ಡಗಾಡು ಪ್ರದೇಶ ಬಣಗುಡುತ್ತಿದೆ. ಬೆಟ್ಟಗಳಲ್ಲಿ ನೀರು ಆಹಾರ ನೆರಳಿನ ಆಶ್ರಯಕ್ಕಾಗಿ ಜಾನುವಾರು ಪರದಾಡುವಂತಾಗಿದೆ.

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಗತ್ಯ ಇರುವ ಕಡೆ ಜಾನುವಾರು ಕುಡಿಯುವ ನೀರಿಗಾಗಿ ತೊಟ್ಟಿಗಳು ನಿರ್ಮಾಣ ಮಾಡಬೇಕು ಹಾಗೂ ಕೆಲವು ಪ್ರದೇಶಗಳಲ್ಲಿ ಈ ಹಿಂದೆ ಈ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಾಣ ಮಾಡಿರುವ ತೊಟ್ಟಿಗಳು ನಿರ್ವಹಣೆ ಮಾಡುವವರು ಇಲ್ಲವಾಗಿದ್ದಾರೆ.ತಾಲ್ಲೂಕಿನ ಬಹುತೇಕ ಕೆರೆ,ಕುಂಟೆ ಬರಿದಾಗಿವೆ.

ತಾಲ್ಲೂಕಿನಾದ್ಯಂತ ಜಾನುವಾರುಗಳಿಗೆ ನೀರಿನ ಅಭಾವ ಒಂದೆಡೆಯಾದರೆ ಮೇವು ಒದಗಿಸುವ ರೈತರಿಗೆ ಸವಾಲು ಎದುರಾಗಿದೆ. ಮೇವು ಕೇಂದ್ರ ಆರಂಭಕ್ಕೆ ಸಂಬಂಧಿಸಿದಂತೆ ಸರ್ಕಾರಿ ಕಚೇರಿಗಳಿಗೆ ರೈತರು ಅಲೆದಾಡುತ್ತಿದ್ದಾರೆ. ಆದರೆ, ಈ ಕುರಿತು ಕಂದಾಯ ಇಲಾಖೆ,ಪಶು ಪಾಲನಾ ಇಲಾಖೆ ಗಮನಹರಿಸುತ್ತಿಲ್ಲ. ಅನಿವಾರ್ಯವಾಗಿ ರೈತರು ನೆರೆಯ ಆಂಧ್ರಪ್ರದೇಶದಿಂದ ದುಬಾರಿ ಬೆಲೆಗೆ ಮೇವು ಖರೀದಿಸುತ್ತಿದ್ದಾರೆ.

ಕುಡಿಯುವ ನೀರು ಮತ್ತು ಮೇವಿಗೆ ತೀವ್ರ ಬರ ಆವರಿಸಿದೆ. ಸುಳ್ಳು ಹೇಳುತ್ತಾ ಕಾಲಹರಣ ಮಾಡದೇ ಅಧಿಕಾರಿಗಳು ಕೂಡಲೇ ಗೋಶಾಲೆ ಹಾಗೂ ಮೇವು ಕೇಂದ್ರ ಸ್ಥಾಪನೆಗೆ ಒತ್ತು ನೀಡಬೇಕು. ಇಲ್ಲದಿದ್ದರೆ ಜಾನುವಾರು ಸಾಕಣೆ ಮಾಡಲಾಗದೆ ಕಸಾಯಿಖಾನೆಗೆ ಮಾರಾಟ ಮಾಡುವ ಪರಿಸ್ಥಿತಿ ಬರಲಿದೆ.

ರೈತ ಮುಖಂಡ ಗೂಳೂರು ಸುಂದರಾಮಿ ರೆಡ್ಡಿ ದಿನೇದಿನೆ ಹೆಚ್ಚುತ್ತಿರುವ ರಣ ಬಿಸಿಲು ಜನರನ್ನು ಕಂಗೆಡಿಸುತ್ತಿದ್ದು, ಬಿಸಿಲ ಕಾವು ಏರುತ್ತಿದೆ. ಈಗಾಗಲೇ ಬಿಸಿಲ ಹೊಡೆತಕ್ಕೆ ಕಂಗಾಲಾಗಿರುವ ಜನ ಮನೆಯಿಂದ ಹೊರಬರಲು ಒಂದು ಕ್ಷಣ ಯೋಚಿಸುವಂತಾಗಿದೆ.

ಬಿಸಿಲಿನ ಕಾಟದ ಜತೆಗೆ ಉಷ್ಣಗಾಳಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟುಮಾಡುತ್ತಿದೆ. ವೃದ್ಧರು, ಮಕ್ಕಳು ಮನೆಯಲ್ಲಿ ಇರಲು ಆಗದೆ ಹೊರಬರಲು ಆಗದ ತ್ರಿಶಂಕು ಸ್ಥಿತಿಯಲ್ಲಿ ಕಾಲ ಕಳೆಯುವಂತಾಗಿದೆ.

ಮಧ್ಯಾಹ್ನದ ಸಂದರ್ಭದಲ್ಲಿ ಜನ ಸಂಚಾರ ವಿರಳವಾಗಿರುತ್ತದೆ. ಜನರು ಕಂಪನಿಯ ಕೂಲ್ ಡ್ರಿಂಕ್ಸ್‌ಗಳಿಗೆ ಹೆಚ್ಚು ಮೊರೆಹೋಗದೆ, ಆರೋಗ್ಯ ಕಾಪಾಡಿಕೊಳ್ಳುವ ದೃಷ್ಟಿಯಿಂದ ಎಳನೀರು, ಕಬ್ಬಿನ ಹಾಲು, ಮಜ್ಜಿಗೆ,ಲಸ್ಸಿ,ನಿಂಬೆ ಪಾನಕ, ಜೀರಾ ಸೋಡಾ,ಕಲ್ಲಂಗಡಿ, ಕರಬೂಜ, ದ್ರಾಕ್ಷಿ ಮತ್ತಿತರ ಹಣ್ಣುಗಳಿಂದ ತಯಾರಾದ ತಂಪು ಪಾನೀಯಗಳನ್ನು ಕುಡಿದು ದಣಿವು ನೀಗಿಸಿಕೊಳ್ಳುತ್ತಿದ್ದಾರೆ.

# ರಾಮಾಂಜಿಗೆ ಅಕ್ಕ ರಾಜ್ಯ ಪ್ರಶಸ್ತಿ



ಶಿಡ್ಲಘಟ್ಟ : ಅಕ್ಕನ ಮನೆ ಪ್ರತಿಷ್ಠಾನವು ಪ್ರತಿ ವರ್ಷ ನೀಡುವ ಉತ್ತಮ ಕನ್ನಡ ಭಾಷಾ ಬೋಧಕ ಶಿಕ್ಷಕರಿಗೆ ನೀಡುವ "ಅಕ್ಕ ರಾಜ್ಯ ಪ್ರಶಸ್ತಿ"ಯನ್ನು ನಗರದ ಡಾಲ್ಫಿನ್ ಶಾಲೆಯ ಕನ್ನಡ ಶಿಕ್ಷಕ ಎನ್.ರಾಮಾಂಜಿಗೆ ನೀಡಿ ಸತ್ಕರಿಸಲಾಗಿದೆ.

ಬೆಂಗಳೂರಿನ ಕನ್ನಡ ಭವನದ ನಯನ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎನ್.ರಾಮಾಂಜಿನಪ್ಪಗೆ ಅಕ್ಕ ರಾಜ್ಯ ಪ್ರಶಸ್ತಿಯನ್ನು ಅಥಣಿಯ ಮೋಟಗಿ ಮಠದ ಪ್ರಭುಚನ್ನಬಸವ ಮಹಾಸ್ವಾಮಿಗಳು ನೀಡಿದ್ದಾರೆ.

ಎನ್.ರಾಮಾಂಜಿನಪ್ಪ ಕಳೆದ ಹಲವು ವರ್ಷಗಳಿಂದಲೂ ಕನ್ನಡ ಭಾಷಾ ಬೋಧಕ ಶಿಕ್ಷಕರಾಗಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಕಾರ್ಯಕ್ರಮದಲ್ಲಿ ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ, ಅಕ್ಕನ ಮನೆ ಪ್ರತಿಷ್ಠಾನದ ಹೇಮಲತ ಮತ್ತಿತರರು ಭಾಗವಹಿಸಿದ್ದರು.

# ಶೀಘ್ರದಲ್ಲಿಯೇ ಹಕ್ಕುಪತ್ರ ವಿತರಣೆ: ನಾಗರಾಜ್



**ಚಿಕ್ಕಬಳ್ಳಾಪುರ:** ಅಂತೂ ಇಂತೂ ಸ್ಲಂ ನಿವಾಸಿಗಳು ತಮ್ಮ ನಿವಾಸಗಳ ಹಕ್ಕುದಾರರಾಗುವ ಕಾಲ ಕೂಡಿ ಬಂದಿದೆ. ರಾಜ್ಯ ಸರ್ಕಾರ ಎಲ್ಲ ಸ್ಲಂ ನಿವಾಸಿಗಳಿಗೆ ಅವರು ವಾಸಿಸುತ್ತಿರುವ ಮನೆಗಳಿಗೆ ಹಕ್ಕುಪತ್ರ ನೀಡುವ ಜೊತೆಗೆ ಎ ಖಾತೆ ಮಾಡಿಕೊಡಲು ಅನುಮತಿ ನೀಡಿದ್ದು, ಈ ವಿಚಾರ ಈಗಾಗಲೇ ಪ್ರಗತಿಯಲ್ಲಿದೆ. ಶೀಘ್ರದಲ್ಲಿಯೇ ಎಲ್ಲ ಸ್ಲಂ ನಿವಾಸಿಗಳಿಗೆ ಹಕ್ಕುಪತ್ರ ವಿತರಿಸಿ ಎ ಖಾತೆ ಮಾಡಿಕೊಡಲಾಗುವುದು ಎಂದು ನಗರಸಭೆ ಉಪಾಧ್ಯಕ್ಷ ನಾಗರಾಜ್. ಜೆ ಹೇಳಿದರು.

ನಗರದ ವಿವಿಧ ಸ್ಲಂ ಪ್ರದೇಶಗಳಿಗೆ ಭೇಟಿ ನೀಡಿದ ವೇಳೆ ಮಾತನಾಡಿದ ಅವರು, ಈ ಸಾಲಿನಲ್ಲಿ ಸ್ಲಂ ಬೋರ್ಡಿನಿಂದ ಒಟ್ಟು 760 ಮನೆಗಳು ಮಂಜೂರಾಗಿದ್ದು, ಇದರಲ್ಲಿ 285 ಮನೆಗಳ ನಿರ್ಮಾಣಕ್ಕೆ ಈಗಾಗಲೇ ಚಾಲನೆ ನೀಡಲಾಗಿದೆ. ಇದರಲ್ಲಿ ಈಗಾಗಲೇ 100 ಮನೆಗಳ ನಿರ್ಮಾಣ ಪೂರ್ಣಗೊಂಡಿದ್ದು, ಉಳಿದ 185 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಫಲಾನುಭವಿಗಳು ಮೊದಲು ಡಿಡಿ ತೆಗೆದರೆ ನಂತರ ಸ್ಲಂ ಬೋರ್ಡಿನಿಂದ ಮನೆ ನಿರ್ಮಿಸಿಕೊಡಲಾಗುವುದು ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ನಗರದಲ್ಲಿ 9ಕ್ಕೂ ಹೆಚ್ಚು ಕೊಳಚೆ ಪ್ರದೇಶಗಳಿರುವ ಕಾರಣ ಈ ಎಲ್ಲ ಪ್ರದೇಶಗಳಲ್ಲಿ ನಿವೇಶನ ಹೊಂದಿರುವ ಸ್ಲಂ ನಿವಾಸಿಗಳಿಗೆ ಮನೆ ನಿರ್ಮಿಸಿಕೊಡಬೇಕು ಎಂಬ ಆಶಯವಿದ್ದು, ಈ ನಿಟ್ಟಿನಲ್ಲಿ ನಗರಸಭೆ ಶ್ರಮಿಸುತ್ತಿದೆ. ಪ್ರಸ್ತುತ ನಿರ್ಮಾಣವಾಗಿರುವ ಎಲ್ಲ 100 ಮನೆಗಳಿಗೆ ಹಕ್ಕುಪತ್ರ ವಿತರಿಸಿ ಎ ಖಾತೆ ಮಾಡಿಕೊಡಲಾಗುವುದು. ಇನ್ನು ನಿರ್ಮಾಣ ಹಂತದಲ್ಲಿರುವ 185 ಮನೆಗಳನ್ನು ಆದಷ್ಟು ಶೀಘ್ರದಲ್ಲಿಯೇ ಪೂರ್ಣಗೊಳಿಸಿ ಅವುಗಳಿಗೂ ಅದೇ ರೀತಿಯಲ್ಲಿ ಹಕ್ಕುಪತ್ರ ವಿತರಿಸಲಾಗುವುದು ಎಂದು ಹೇಳಿದರು.

ಇನ್ನು ಈ ಹಿಂದೆ ಡಾ.ಕೆ. ಸುಧಾಕರ್ ಅವರು ಶಾಸಕರಾಗಿದ್ದ ವೇಳೆ 260 ಮನೆಗಳನ್ನು ಸ್ಲಂ ಬೋರ್ಡಿನಿಂದ ಮಂಜೂರು ಮಾಡಿಸಿದ್ದರು. ಈ ಎಲ್ಲ 260 ಮನೆಗಳ ನಿರ್ಮಾಣ ಪೂರ್ಣಗೊಂಡಿದೆ. ನಂತರ 760 ಮನೆಗಳನ್ನು ಮಂಜೂರು ಮಾಡಿಸಿದ್ದಾರೆ. ಅದರಲ್ಲಿ 285 ಮನೆಗಳ ನಿರ್ಮಾಣ ಪ್ರಗತಿಯಲ್ಲಿದೆ. ಅಲ್ಲದೆ ನಗರದಲ್ಲಿರುವ ಎಲ್ಲ ಸ್ಲಂಗಳ ಫಲಾನುಭವಿಗಳ ಸರ್ವೇ ಮಾಡಿಸಿ, ಆ ವರದಿಯನ್ನು ನಗರಸಭೆಗೆ ಸಲ್ಲಿಸಲಾಗಿದ್ದು, ಪ್ರಸ್ತುತ ವರದಿ ಸಿದ್ಧವಾಗಿದೆ ಎಂದರು.

ಪ್ರಸ್ತುತ ರಾಜ್ಯ ಸರ್ಕಾರ ಸ್ಲಂ ನಿವಾಸಿಗಳ ಬಗ್ಗೆ ಗಮನ ಹರಿಸಿ, ಉಳಿದ 500ಕ್ಕೂ ಹೆಚ್ಚು ಮನೆಗಳ ನಿರ್ಮಾಣಕ್ಕೆ ಅಗತ್ಯವಿರುವ ಅನುದಾನವನ್ನು ಮಂಜೂರು ಮಾಡಬೇಕಿದೆ. ಸರ್ಕಾರ ಕೂಡಲೇ ಸ್ಲಂ ಬೋರ್ಡಿನಿಂದ ಅನುದಾನ ಮಂಜೂರು ಮಾಡಿದರೆ ನಗರದಲ್ಲಿ ಇನ್ನೂ 500ಕ್ಕೂ ಹೆಚ್ಚು ಬಡ ಸ್ಲಂ ನಿವಾಸಿಗಳು ಸ್ವಂತ ಸೂರು ಹೊಂದಲು ಸಹಕಾರಿಯಾಗಲಿದೆ. ಹಾಗಾಗಿ ರಾಜ್ಯ ಸರ್ಕಾರ ಈ ನಿಟ್ಟಿನಲ್ಲಿ ಗಮನ ಹರಿಸಿ, ಅನುದಾನ ಮಂಜೂರು ಮಾಡಬೇಕೆಂದು ಕೋರಿದ್ದಾರೆ.

ಇನ್ನು ನಗರದ ಎಲ್ಲ 9 ಸ್ಲಂಗಳಲ್ಲಿಯೂ ಈಗಾಗಲೇ ಮನೆಗಳು ನಿರ್ಮಾಣವಾಗಿರುವ, ಪ್ರಸ್ತುತ ನಿರ್ಮಾಣವಾಗುತ್ತಿರುವ ಮತ್ತು ಖಾಲಿ ಇರುವ ನಿವೇಶನಗಳಿಗೂ ನಗರಸಭೆಯಿಂದ ಸರ್ವೇ ಮಾಡಿ, ಎಲ್ಲ ಸ್ಲಂ ನಿವಾಸಿಗಳಿಗೂ ಅವರ ಜಾಗ ಗುರ್ತಿಸಿ, ಹಕ್ಕುಪತ್ರ ವಿತರಿಸುವ ಜೊತೆಗೆ ಎಲ್ಲ ನಿವಾಸಿಗಳಿಗೂ ಎ ಖಾತೆ ಮಾಡಿಸಿಕೊಡಲು ನಗರಸಭೆ ಶ್ರಮಿಸಲಿದೆ ಎಂದು ಈ ಮೂಲಕ ಹೇಳಲು ಇಚ್ಚಿಸುತ್ತೇನೆ. ಹಾಗಾಗಿ ಇಂದು ನಗರದ ಹಲವು ಕೊಳಚೆ ಪ್ರದೇಶಗಳಿಗೆ ಭೇಟಿ ನೀಡಿ, ನಿರ್ಮಾಣ ಹಂತದಲ್ಲಿರುವ ಮತ್ತು ಈಗಾಗಲೇ ನಿರ್ಮಾಣಗೊಂಡಿರುವ ಮನೆಗಳನ್ನು ವೀಕ್ಷಣೆ ಮಾಡಲಾಯಿತು ಎಂದ ಅವರು ಸ್ಲಂನಲ್ಲಿ ವಾಸಿವಿರುವ ಎಲ್ಲರೂ ಬಡವರೇ ಆಗಿದ್ದು, ಅವರಿಗೆ ಸ್ವಂತ ಸೂರು ಕಲ್ಪಿಸುವ ಜೊತೆಗೆ, ಆ ಮನೆಗೆ ಸಂಬಂಧಿಸಿದ ದಾಖಲೆಗಳನ್ನು ನೀಡಿ, ಅವರನ್ನು ಮನೆ ಮಾಲೀಕರನ್ನಾಗಿ ಮಾಡುವ ಅವಕಾಶ ಪ್ರಸ್ತುತ ಸಿಕ್ಕಿರುವ ಕಾರಣ ನಗರದ ಎಲ್ಲ ಕೊಳಚೆ ಪ್ರದೇಶಗಳನಿವಾಸಿಗಳನ್ನೂ ಅವರ ಆಸ್ತಿಗಳಿಗೆ ಅವರನ್ನೇ ಮಾಲೀಕರನ್ನಾಗಿ ಮಾಡಲು ನಗರಸಭೆಯಿಂದ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಉಪಾಧ್ಯಕ್ಷ ನಾಗರಾಜ್.ಜೆ ಹೇಳಿದ್ದಾರೆ.

# ಬಂಜಾರ ಸಮುದಾಯದ ಅಭಿವೃದ್ಧಿಗೆ ಸರ್ಕಾರ ವಿಶೇಷ ಗಮನಹರಿಸಬೇಕು: ಲಕ್ಷ್ಮಣ ನಾಯ್ಕ



**ಕೊರಟಗೆರೆ:** ಸರ್ಕಾರ ಒಳ ಮೀಸಲಾತಿ ಅನುಷ್ಠಾನವನ್ನು ಸಮರ್ಪಕವಾಗಿ ಜಾತಿಗಣತಿಯನ್ನು ಮಾಡುವ ಮೂಲಕ ಸರಿಯಾದ ಕ್ರಮದಲ್ಲಿ ಮಾಡಬೇಕು. ಕೊಲಂಬೋ ಸಮುದಾಯಕ್ಕೆ ಅನ್ಯಾಯವಾಗದಂತೆ ಕ್ರಮ ವಹಿಸಬೇಕು ಎಂದು ತಾಲ್ಲೂಕು ಬಂಜಾರ ಸೇವಾ ಸಂಘದ ತಾಲ್ಲೂಕು ಅಧ್ಯಕ್ಷ ಲಕ್ಷ್ಮಣ ನಾಯ್ಕ ಒತ್ತಾಯಿಸಿದರು.

ಭಾನುವಾರ ಕೊರಟಗೆರೆಯ ಪ್ರವಾಸಿ ಮಂದಿರದಲ್ಲಿ ತಾಲ್ಲೂಕು ಬಂಜಾರ (ಲಂಬಾಣಿ) ಸೇವಾ ಸಂಘದ ಸರ್ವಸದಸ್ಯರ ವಾರ್ಷಿಕ ಮಹಾಸಭೆ ಜರುಗಿತು. ಸಭೆಯಲ್ಲಿ ವಿವಿಧ ಬಂಜಾರ ಸಮುದಾಯದ ಸಮಸ್ಯೆಗಳು, ಅಭಿವೃದ್ಧಿಯ ಪ್ರಗತಿ ಹಾಗೂ ಸರ್ಕಾರದ ನಿರ್ಲಕ್ಷ್ಯತೆಯನ್ನು ಕುರಿತು ಚರ್ಚಿಸಲಾಯಿತು.

ತಾಲೂಕಿನಲ್ಲಿ 23 ಬಂಜಾರ ತಾಂಡಗಳಿದ್ದು, ಇನ್ನೂ ಸೂಕ್ತ ಅಭಿವೃದ್ಧಿಯನ್ನು ಕಂಡಿಲ್ಲ. ಮೂಲಭೂತ ಸೌಕರ್ಯಗಳ ಕೊರತೆಯಿಂದ ಸಮುದಾಯದ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ತಾಂಡಗಳಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್, ಆರೋಗ್ಯ ಹಾಗೂ ಶಿಕ್ಷಣದ ಮೂಲ ಸೌಕರ್ಯಗಳನ್ನು ಸರ್ಕಾರ ಒದಗಿಸಬೇಕು ಎಂದು ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ವಿ ಎನ್ ಮೂರ್ತಿ ಮಾತನಾಡಿ ತಾಲೂಕಿನಲ್ಲಿ 8 ಸೇವಾಲಾಲ್ ಸಮುದಾಯ ಭವನಗಳಿದ್ದು, ಅವುಗಳ ಕಾಮಗಾರಿಗಳು ಅಪೂರ್ಣವಾಗಿದೆ,ಸರ್ಕಾರ ಶೀಘ್ರವಾಗಿ ಈ ಭವನಗಳನ್ನು ಪೂರ್ಣಗೊಳಿಸಿ ಸಮುದಾಯದ ಜನರಿಗೆ ಬಳಸುವ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಸಂಘದ ಖಜಾಂಚಿ ವಿಜಯಶಂಕರ್ ಬಂಜಾರ ಸಮುದಾಯದ ಅಭಿವೃದ್ಧಿಗೆ ಸರ್ಕಾರದಿಂದ ಇನ್ನಷ್ಟು ಅನುದಾನ ಒದಗಿಸಬೇಕು.

ಮೀಸಲಾತಿಯ ಸೌಲಭ್ಯ, ಉಚಿತ ಶಿಕ್ಷಣ, ಉದ್ಯೋಗ ಸೌಲಭ್ಯ, ಆರ್ಥಿಕ ಬೆಂಬಲ, ಹಾಗೂ ಸ್ವ-ಉದ್ಯೋಗ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಿದರು.

ಬಂಜಾರ ಸಮುದಾಯದ ಒಟ್ಟು ಹಿತಾಸಕ್ತಿಗಾಗಿ ಸರ್ಕಾರ ಸ್ಪಂದಿಸಬೇಕು. ಎಲ್ಲಾ ತಾಂಡಗಳಿಗೆ ಸಮಾನ ಅಭಿವೃದ್ಧಿ ನೀಡುವ ದೃಷ್ಟಿಯಿಂದ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ತಕ್ಷಣ ಕ್ರಮ ತೆಗೆದುಕೊಳ್ಳಬೇಕು ಎಂಬುದಾಗಿ ಬಂಜಾರ ಸೇವಾ ಸಂಘದ ಮುಖಂಡರು ಒತ್ತಾಯಿಸಿದರು.

ಸಂಘದ ಗೌರವಾಧ್ಯಕ್ಷರಾಗಿ ಮೀಸೆ ಲಕ್ಷ್ಮ ನಾಯ್ಕ, ಕಾರ್ಯಾಧ್ಯಕ್ಷರಾಗಿ ನಾಗ ನಾಯ್ಕ, ಅಧ್ಯಕ್ಷರಾಗಿ ಲಕ್ಷ್ಮಣ್ ನಾಯ್ಕ, ಉಪಾಧ್ಯಕ್ಷರಾಗಿ ಹರೀಶ್ ಬಾಬು, ಪ್ರಧಾನ ಕಾರ್ಯದರ್ಶಿಯಾಗಿ ವಿ.ಎನ್ ಮೂರ್ತಿ, ಸಹ ಕಾರ್ಯದರ್ಶಿಯಾಗಿ ಸಿದ್ದೇಶ್, ಖಜಾಂಚಿಯಾಗಿ ವಿಜಯಶಂಕರ್, ತಾಲೂಕು ಸಂಘಟನಾ ಕಾರ್ಯದರ್ಶಿಯಾಗಿ ಲಕ್ಷ್ಮಣ ನಾಯಕ, ತಾಲೂಕು ಸಂಚಾಲಕರಾಗಿ ಲಕ್ಷ್ಮಣ ನಾಯಕ, ಕಸಬಾ ಹೋಬಳಿ ಸಂಘಟನಾ ಕಾರ್ಯದರ್ಶಿಯಾಗಿ ಪುಟ್ಟರಾಜು, ಲಕ್ಷ್ಮಣ ನಾಯ್ಕ, ಯುವ ಸಂಗಡನ ಕಾರ್ಯದರ್ಶಿಯಾಗಿ ಬಾಬು ನಾಯ್ಕ, ಕಸಬಾ ಹೋಬಳಿ ಸಂಚಾಲಕರಾಗಿ ಕೃಷ್ಣನಾಯಕ, ಹೊಳವನಹಳ್ಳಿ ಹೋಬಳಿ ಕಾರ್ಯ ಸಂಚಾಲಕರಾಗಿ ರಂಜಿತ್ ಕುಮಾರ್, ನಿರ್ದೇಶಕರಾಗಿ ಆನಂದ್, ಕೃಷ್ಣ ನಾಯ್ಕ, ಮಾನಸಿಂಗ್ ನಾಯಕ, ಉಮೇಶ್ ಪಿ ಆರ್, ಸೇರಿದಂತೆ ಇತರರು ಇದ್ದರು.

# ನಾಗೇಂದ್ರಗೆ ಸಚಿವ ಸ್ಥಾನ ನೀಡುವಂತೆ ಮನವಿ



**ಬಳ್ಳಾರಿ:** ಗ್ರಾಮೀಣ ಮತ್ತು ಜಿಲ್ಲೆಯ ಭಾಗದಲ್ಲಿ ಜನರ ಪ್ರೀತಿಗೆ ಪಾತ್ರರಾದ ಸರ್ವಧರ್ಮದ ಪ್ರೇಮಿ, ಅಭಿವೃದ್ಧಿಯ ಹರಿಕಾರ ಜನಗಳ ನೋವಿಗೆ ತಕ್ಷಣವೇ ಸ್ಪಂದಿಸುವಂತ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ.ನಾಗೇಂದ್ರರಿಗೆ ತಕ್ಷಣವೇ ಸಚಿವ ಸ್ಥಾನ ಕೊಡಬೇಕೆಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕನ್ನಡ ಹಿತ ರಕ್ಷಣಾ ವೇದಿಕೆ ಸಂಘಟನೆಯ ಗ್ರಾಮಾಂತರ ಅಧ್ಯಕ್ಷರಾದ ಲಕ್ಷ್ಮೀ ರೆಡ್ಡಿ ಅವರು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಪಕ್ಷದ ರಾಜ್ಯದ ನಾಯಕರಿಗೆ ಮನವಿ ಮಾಡಿದ್ದಾರೆ.

ಬಳ್ಳಾರಿ ಜಿಲ್ಲೆ ಹಾಗೂ ಗ್ರಾಮಂತರ ಭಾಗಗಳಿಗೆ ಅಭಿವೃದ್ಧಿ ಕೆಲಸಗಳನ್ನು ಮಾಡಲು ಮತ್ತು ಜಿಲ್ಲೆ ಜನರ ಜೊತೆಯಲ್ಲಿ ಬೆರೆತು ಮುಂಬರುವ ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಅಲ್ಲದೆ ಪಕ್ಷಕ್ಕಾಗಿ ದುಡಿದ ಮುಖಂಡರ ಬೇಡಿಕೆಗಳು ಹಾಗೂ ಕಾರ್ಯಕರ್ತರ ಬೇಡಿಕೆಗಳು ಪರಿಹರಿಸಿಕೊಳ್ಳಲು ಗ್ರಾಮಾಂತರ ಶಾಸಕ ಹಾಗೂ ಮಾಜಿ ಸಚಿವರಾದ ಬಿ.ನಾಗೇಂದ್ರವರಿಗೆ ತಕ್ಷಣವೆ ಸಚಿವ ಸ್ಥಾನ ಕೊಟ್ಟು ಅಭಿಮಾನಿಗಳು ಹಾಗೂ ಕಾರ್ಯಕರ್ತರು ಮತ್ತು ಮುಖಂಡರ ಭೇಟಿಗೆ ಅವಕಾಶ ಮಾಡಿಕೊಡಬೇಕೆಂದು ಬಳ್ಳಾರಿ ಮಾಧ್ಯಮದ ಮೂಲಕ ಮನವಿ ಮಾಡಿಕೊಂಡಿದ್ದಾರೆ.

ಶಾಸಕ ಬಿ.ನಾಗೇಂದ್ರವರ ಅಭಿಮಾನಿಗಳಾಗಿ ಕಾರ್ಯಕರ್ತರು ಮುಖಂಡರುಗಳು ಕಳೆದ ವರ್ಷ ನಡೆದ ವಿಧಾನಸಭಾ ಚುನಾವಣೆ ಹಾಗೂ ಲೋಕಸಭಾ ಚುನಾವಣೆಯಲ್ಲಿ ಬಳ್ಳಾರಿ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಭರ್ಜರಿ ಗೆಲುವನ್ನು ತಂದುಕೊಟ್ಟಿದ್ದರು.

ಲೋಕಸಭಾ ಚುನಾವಣೆ, ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅದು ಬಳ್ಳಾರಿ ಜಿಲ್ಲೆಯಲ್ಲಿ ಕಣ್ಣಿಗೆ ಬಟ್ಟೆಕಟ್ಟಿಕೊಂಡು ಕೈಗೆ ಗೆಲುವು ತಂದಿರುವುದು ಶಾಸಕ ಬಿ.ನಾಗೇಂದ್ರರ ಶ್ರಮ ಹಾಗೂ ಅವರ ಅಭಿಮಾನಿಗಳು ಬೆಂಬಲಿಗರು ಮುಖಂಡರು ಕಾರ್ಯಕರ್ತರು ಪಟ್ಟಂತಹ ಶ್ರಮ ಎಂದು ಸಂಗೊಳ್ಳಿ ರಾಯಣ್ಣ ಕನ್ನಡ ಹಿತರಕ್ಷಣಾ ವೇದಿಕೆ ಸಂಘಟನೆಯ ಗ್ರಾಮಾಂತರ ಅಧ್ಯಕ್ಷರಾದ ಲಕ್ಷ್ಮೀ ರೆಡ್ಡಿ ಅವರು ಅವರು ತಿಳಿಸಿದರು.

ತಕ್ಷಣವೇ ಶಾಸಕ ಬಿ ನಾಗೇಂದ್ರ ಅವರಿಗೆ ಸಚಿವ ಸ್ಥಾನ ಕೊಟ್ಟರೆ ಬಳ್ಳಾರಿ ಜಿಲ್ಲೆ ಮತ್ತು ಗ್ರಾಮಾಂತರ ಕ್ಷೇತ್ರದ ಅಭಿವೃದ್ಧಿಗೆ ಅನುಕೂಲ ಆಗುತ್ತದೆ ಎಂದು ಮುಖ್ಯಮಂತ್ರಿಗಳಿಗೆ ಮತ್ತು ಉಪಮುಖ್ಯಮಂತ್ರಿಗಳಿಗೆ ಪತ್ರಿಕೆ ಮೂಲಕ ಮನವಿ ಮಾಡಿಕೊಂಡರು.

# ಆಶ್ರಮವಾಸಿ ಮಕ್ಕಳ ಜತೆ ನ್ಯಾಯಾಧೀಶರಿಂದ ಅರಿವಿನ ಸಂವಾದ



**ಬೆಂಗಳೂರು:** ಬಾಲ್ಯಾವಸ್ಥೆಯಿಂದಲೇ ಪ್ರಜ್ಞಾಪೂರಕವಾಗಿ ಅನ್ಯಾಯಗಳನ್ನು ಖಂಡಿಸುವ ಮತ್ತು ಪ್ರತಿರೋಧಿಸುವ ಮನೋಭಾವ ಹೊಂದುವಂತಹ ಅರಿವು ಮೂಡಿಸುವ ಜರೂರತ್ತು ಇದೆ ಎಂದು ಬೆಂಗಳೂರಿನ ಸಿಟಿ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಮೋಹನ್ ಸದಾಶಿವ ಪೋಲೆ ತಮ್ಮ ಅಭಿಮತ ವ್ಯಕ್ತಪಡಿಸಿದರು.

ಬೆಂಗಳೂರಿನ ಬಸವೇಶ್ವರ ನಗರದ ಸುಖಾಂಕ್ಷ ಚಾರಿಟಬಲ್ ಟ್ರಸ್ಟ್ ( ರಿ ) ಹೆಣ್ಣು ಮಕ್ಕಳ ಕಸನಾಲಯದಲ್ಲಿ ಭಾನುವಾರ ಬೆಳಗ್ಗೆ ರಂಗ ಕಳಸ ಕಲಾವಿದರ ಸಂಸ್ಥೆ ಕನ್ನಡ ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ರಂಗ ನಿರ್ದೇಶಕ ದತ್ತು ದೇಸಾಯಿ ನಿರ್ದೇಶನದಲ್ಲಿ ವಿಶ್ವರಂಗಭೂಮಿ ದಿನಾಚರಣೆ ಪ್ರಯುಕ್ತ ಆಶ್ರಮವಾಸಿ ಮಕ್ಕಳು ನಟಿಸಿ ಪ್ರದರ್ಶಿಸಿದ " ಎ ಲೋನ್ ಜೀವನ " ನಾಟಕದ ಬಳಿಕ ತಮ್ಮ ಅಭಿಮತ ವ್ಯಕ್ತಪಡಿಸಿದರು.

ಪೋಸ್ಕೋ ಕಾಯಿದೆ ಕುರಿತು ಮಕ್ಕಳ ಜತೆ ಸಂವಾದಿಸಿ ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಹಾಗೂ ಕ್ರೀಡಾ ಮನೋಭಾವನೆ ಗಳನ್ನು ಬೆಳಸಿಕೊಂಡ ವಿಧ್ಯಾರ್ಥಿಗಳು ಎಂತಹ ಸಂದಿಗ್ಧತೆಗಳು ಎದುರುಗೊಂಡರು ಅವನ್ನು ಮೀರಲು ಸಹಕಾರಿಯಾಗಲಿದೆ ಎಂದರು.

ಜಿಲ್ಲಾ ನ್ಯಾಯಾದೀಶರಾದ ಸತೀಶ್ ಎಸ್ ಬಾಳಿ ಅವರು ಶಿಕ್ಷಣ ಎಂಬುದು ಬದುಕಿನ ಪ್ರತಿ ಭಾಗದಲ್ಲೂ ಕರಾರುವಕ್ಕಾದರೆ ಬದುಕು ಸುಗಮವಾಗುತ್ತದೆ. ನ್ಯಾಯ ನಿಷ್ಠೆ ಪ್ರಾಮಾಣಿಕತೆ ರೂಢಿಸಿಕೊಳ್ಳಲು ಮಕ್ಕಳಿಗೆ ಕರೆ ನೀಡಿದರು.

ಕೀಳರಿಮೆ ತೊರೆದು ನಮ್ಮೊಳಗಿನ ಆತ್ಮ ಸ್ಥೈರ್ಯವನ್ನು ಸದೃಢವಾಗಿಟ್ಟುಕೊಂಡಾಗ ಎಲ್ಲಾ ಕಲಿಕೆಗಳು ಸುಲಭವಾಗಲಿವೆ ಎಂದು ನ್ಯಾಯಾಧೀಶೆ ಪರ್ವಿನ್ ಬಂಕಾಪುರ ಅಭಿಪ್ರಾಯಿಸಿದರು.

ತಂತ್ರಜ್ಞಾನಗಳನ್ನು ಬಳಸಿಕೊಂಡು ಸಾಗುವ ಜತೆಗೆ ಅದರ ಅಪಾಯಗಳ ಆಕರ್ಷಣೆಗಳ ದುರ್ಬಳಕೆಗಳಿಂದ ಅಂತರ ಕಾಯುವ ಅಗತ್ಯವಿದ್ದು, ಏಕಾಗ್ರತೆ ಗುರಿಯಕಡೆ ಸಾಗಲಿ ಎಂದು ನ್ಯಾಯಾಧೀಶರಾದ ಪ್ರಶಾಂತ್ ಮಕ್ಕಳಿಗೆ ಕಿವಿ ಮಾತು ಹೇಳಿದರು.

ಸಮಾರಂಭದ ಉಧ್ಘಾಟನೆಯನ್ನು ಕಂಸಾಳೆ ನುಡಿಸುವ ಮುಖೇನ ಕಲಾವಿದ ಪುರುಷೋತ್ತಮ್, ವಕೀಲೆ ಜಯಶ್ರೀ, ಸುಖಾಂಕ್ಷ ಸಂಸ್ಥಾಪಕಿ ಯಶೋದ ಜಿ, ಕಾರ್ಯದರ್ಶಿ ಜ್ಞಾನೇಂದ್ರ, ರಂಗ ಕಳಸ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆನಂದ ಡಿ ಕಳಸ ನೆರವೇರಿಸಿದರು.

ಆಶ್ರಮವಾಸಿ ಮಕ್ಕಳು ಹಾಗೂ ಆಶ್ರಮದ ದಾನಿಗಳು ನಾಟಕ ಪ್ರದರ್ಶನವನ್ನು ಸಾಕ್ಷೀಕರಿಸಿದರು.

# ಕೆಂಗಲ್ ಹನುಮಂತಯ್ಯ ಸದ್ಭಾವನಾ ಪ್ರಶಸ್ತಿಗೆ ರಫಿ ಆಯ್ಕೆ

**ಬಳ್ಳಾರಿ:** 'ಶ್ರೀ ಕೆಂಗಲ್ ಹನುಮಂತಯ್ಯ ಸದ್ಭಾವನಾ ರಾಷ್ಟ್ರ ಪ್ರಶಸ್ತಿ'ಗೆ ಬಳ್ಳಾರಿಯ ಚಿತ್ರ ಕಲಾವಿದ ಎ. ಮೊಹಮ್ಮದ್ ರಫಿ ಆಯ್ಕೆಯಾಗಿದ್ದಾರೆ. ಬೆಂಗಳೂರಿನ 'ಸರ್ವೇ ಜನಾಃ ಕಲೆ ಮತ್ತು ಸಾಂಸ್ಕೃತಿ (ಟ್ರಸ್ಟ್)' ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಡೆಯುವ 8ನೇ



ಸಾಂಸ್ಕೃತಿಕ ಮಹೋತ್ಸವ ಅಂಗವಾಗಿ ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ, ಪ್ರಶಸ್ತಿ ನೀಡಲಾಗುತ್ತಿದೆ. ಚಿತ್ರಕಲಾ ಕ್ಷೇತ್ರದ ಸಾಧನೆಗಾಗಿ ರಫಿ ಅವರಿಗೆ ಪ್ರಶಸ್ತಿ ಲಭಿಸಿದೆ. ಮೊಟ್ಟೆಯಮೇಲೆ ರಾಮಾಯಣ ಚಿತ್ರ ಬಿಡಿಸಿದ ಖ್ಯಾತಿ ರಫಿ ಅವರಿಗೆ ಇದೆ. ಜಲವರ್ಣ , ತೈಲವರ್ಣ, ಆಯಕ್ರಾಲಿಕ್ ಸೇರಿದಂತೆ ರಫಿ ಅವರ ಹಲವಾರು ಕಲಾಕೃತಿಗಳು ದೇಶ ಮತ್ತು ವಿದೇಶಗಳಲ್ಲಿ ಪ್ರದರ್ಶನ ಕಂಡಿವೆ. ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿರುವ ನಯನ ಸಭಾಂಗಣದಲ್ಲಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ಸಂಘಟಕರು ಮತ್ತು ಸಂಸ್ಥಾಪಕ ಅಧ್ಯಕ್ಷರು ತಿಳಿಸಿದ್ದಾರೆ.

# ಸರ್ಕಾರದ ವಿರುದ್ಧ ಬಿಜೆಪಿ ಭಿತ್ತಿಪತ್ರ ಹಿಡಿದು ಆಕ್ರೋಶ

**ಮೈಸೂರು:** ಹನಿಟ್ರ್ಯಾಪ್ ವಿಚಾರ ಮತ್ತು 18 ಬಿಜೆಪಿ ಶಾಸಕರ ಅಮಾನತು ಖಂಡಿಸಿ ಮೈಸೂರಿನಲ್ಲಿ ಜಿಲ್ಲಾ, ನಗರ ಬಿಜೆಪಿ ಘಟಕದ ವತಿಯಿಂದ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಯಿತು.

ನಗರದ ರಾಮಸ್ವಾಮಿ ವೃತ್ತದ ಬಳಿ ಮೈಸೂರು ಜಿಲ್ಲಾ ನಗರ ಬಿಜೆಪಿ ಮುಖಂಡರು ಕಾರ್ಯಕರ್ತರು ಜಮಾಯಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಕಿಡಿಕಾರಿದರು.

ಹನಿಟ್ರ್ಯಾಪ್ ವಿಚಾರ, 18 ಬಿಜೆಪಿ ಶಾಸಕರನ್ನ ಅಮಾನತು ಮಾಡಿದ ಸ್ಪೀಕರ್ ನಡೆಗೆ ಖಂಡನೆ ವ್ಯಕ್ತಪಡಿಸಿದರು. ಹಾಗೆಯೇ ಮುಸ್ಲಿಮ್ ಮೀಸಲಾತಿಗೆ ವಿರೋಧಿಸಿ 'ಹಲಾಲ್ ಸರ್ಕಾರ' ಎಂದು ಭಿತ್ತಿಪತ್ರ ಹಿಡಿದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಕೆಆರ್ ಕ್ಷೇತ್ರದ ಶಾಸಕ ಶ್ರೀವತ್ಸ ಸೇರಿ ನೂರಾರು ಬಿಜೆಪಿ ಮುಖಂಡರು ಕಾರ್ಯಕರ್ತರು ಭಾಗಿಯಾಗಿದ್ದರು.

# ಒಳ ಮೀಸಲಾತಿ ಜಾರಿ; ಬಲಗೈ ಜಾತಿ ಸಂಬಂಧಿತರಿಂದ ಮನವಿ ಸಲ್ಲಿಕೆ



**ಬೆಂಗಳೂರು:** ಒಳ ಮೀಸಲಾತಿ ಪರಿಶೀಲನಾ ಸಮಿತಿಯ ನ್ಯಾಯಮೂರ್ತಿ ಎಚ್. ಎನ್.ನಾಗಮೋಹನ್ ದಾಸ್ ಆಯೋಗಕ್ಕೆ ಮನವಿ ಪತ್ರ ಸಲ್ಲಿಕೆ,ಒಳ ಮೀಸಲಾತಿ ಕುರಿತ ರಾಜ್ಯ ಮಟ್ಟದ ವಿಚಾರ ಸಂಕಿರಣ ಕರ್ನಾಟಕ ರಾಜ್ಯ ಬಲಗೈ ಹೊಲೆಯ ಸಂಬಂಧಿತ ಜಾತಿಗಳ ಒಳ ಮೀಸಲಾತಿ ಹೋರಾಟ ಸಮಿತಿವತಿಯಿಂದ ಅಂಬೇಡ್ಕರ್ ಭವನದಲ್ಲಿ ನಡೆಯಿತು.

ನ್ಯಾಯಮೂರ್ತಿ ನಾಗಮೋಹನ್ ದಾಸ್ ಬಲಗೈ ಸಂಬಂಧಿತ ಸಮುದಾಯಗಳ ಮುಖಂಡರಿಂದ ಮನವಿ ಪತ್ರ ಸ್ವೀಕರಿಸಿದರು.

ವಿಚಾರ ಸಂಕಿರಣದಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಮುಖಂಡ ಡಿ.ಜಿ.ಸಾಗರ್, ಒಳ ಮೀಸಲಾತಿ ಜಾರಿ ಹೋರಾಟಗಳು ಬಹಳ ಸಂಯಮದಿಂದ ನಡೆಯಬೇಕು, ಸರ್ಕಾರದ ಪ್ರತಿನಿಧಿಗಳು,ಸಚಿವರನ್ನು ನಿಂದಿಸುವುದು ಸರಿಯಲ್ಲ,ಒಳ ಮೀಸಲಾತಿ ಜಾರಿ ಬರುವವರೆಗೂ ಬ್ಯಾಕ್ ಲ್ಯಾಗ್ ಹುದ್ದೆಗಳನ್ನು ಭರ್ತಿ ಮಾಡಬಾರದು ಎಂದು ಹೇಳುವುದು ಸರಿಯಲ್ಲ, ನ್ಯಾಯಾಲಯದ ತೀರ್ಪಿನಂತೆ ರಾಜ್ಯ ಸರ್ಕಾರ ಭರ್ತಿ ಮಾಡಲು ಮುಂದಾಗಿದೆ ಎಂದರು.

ಸಭೆಯಲ್ಲಿ ಎಸ್.ಸಿ.ಎಸ್.ಟಿ.ನೌಕರರ ಸಮನ್ವಯ ಸಮಿತಿ ಅಧ್ಯಕ್ಷ ಶಿವಶಂಕರ್, ಅಪ್ಪಗೆರೆ ಸೋಮಶೇಖರ್, ಡಿ.ಚಂದ್ರಶೇಖರಯ್ಯ,ನವೀನ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

# ವಿಶ್ವದಲ್ಲಿ ಶಾಂತಿ, ಸಂಘರ್ಷ ರಹಿತ ಸಮಾಜ ನಿರ್ಮಾಣವಾಗಬೇಕು




**ಬೆಂಗಳೂರು:** ಎರಡು ದಿನಗಳ ದಕ್ಷಿಣ ಏಷ್ಯಾ ರಾಷ್ಟ್ರಗಳ ಶಾಂತಿ ಸಮ್ಮೇಳನ ಡಾ.ಬಾಬು ಜಗಜೀವನ್ ರಾಮ್ ಸಭಾಂಗಣದಲ್ಲಿ ನಡೆಯಿತು.

ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್ .ಮಂಜುನಾಥ್ ಅಂತರಾಷ್ಟ್ರೀಯ ಶಾಂತಿ ಸಮ್ಮೇಳನಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ವಿಶ್ವದಲ್ಲಿ ಕೆಲವೆಡೆ ಹಿಂಸಾತ್ಮಕ, ದ್ವೇಷಕಾರಕ ಚಟುವಟಿಕೆಗಳು ಸಾಮನ್ಯಾವಾಗಿದ್ದು ಅವುಗಳ ನಿರ್ಮೂಲನೆಗಾಗಿ ಇಂತಹ ಅಂತರಾಷ್ಟ್ರೀಯ ಶಾಂತಿ ಸಮ್ಮೇಳನಗಳು ನಡೆಯಬೇಕು ಎಂದು ಹೇಳಿದರು.

ಮಂಡ್ಯದ ಶ್ರೀರಂಗಪಟ್ಟಣ ಚಂದನ ವನ ಆಶ್ರಮದ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮಿ, ಶಿಕ್ಷಣ ತಜ್ಞೆ ಐಶ್ವರ್ಯ ಹೆಗಡೆ, ಗ್ರಾಮಿ ಪ್ರಶಸ್ತಿ ವಿಜೇತೆ ಪದ್ಮಶ್ರೀ ರಿಕಿ ಕೇಜ್, ಸಮಾವೇಶದರೂವಾರಿ ರೋಟರಿ ಡಿಸ್ಟ್ರಿಕ್ಟ್ 3192ನ ರೋಟರಿಯನ್ ಮಹದೇವ ಪ್ರಸಾದ್ ಮತ್ತಿತರರು ಭಾಗವಹಿಸಿದ್ದರು.

ಶ್ರೀಲಂಕಾ, ಮಾಲ್ಡೀವ್ಸ್, ನೇಪಾಳ, ಭೂತಾನ್, ಬಾಂಗ್ಲಾ ಸೇರಿ ಎಂಟು ದೇಶಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ರೋಟರಿಯನ್ ಮಹದೇವ ಪ್ರಸಾದ್ ಮಾತನಾಡಿ, ಜಾಗತಿಕವಾಗಿ ಶಾಂತಿ ಸ್ಥಾಪಿಸುವ- ಸಂಘರ್ಷ ರಹಿತ ಸಮಾಜ ಉದ್ದೇಶದಿಂದ ಇಂತಹ ಸಮ್ಮೇಳನ ಆಯೋಜಿಸಲಾಗಿದೆ ಎಂದು ಹೇಳಿದರು.

# ಅಪಘಾತ; ಹಲವು ರೈಲುಗಳು ರದ್ದು

**ಅಹಮದಾಬಾದ್:** ಅಹಮದಾಬಾದ್ ಬುಲೆಟ್ ರೈಲು ಯೋಜನೆಯ ಸ್ಥಳದಲ್ಲಿ ನಿರ್ಮಾಣಕ್ಕೆ ಬಳಸಲಾದ ಸೆಗ್ಮೆಂಟಲ್ ಲಾಂಚಿಂಗ್ ಗ್ಯಾಂಟ್ರಿ ಆಕಸ್ಮಿಕವಾಗಿ ಸ್ಕಿಡ್ ಆಗಿ ಪಕ್ಕದ ರೈಲು ಮಾರ್ಗದ ಮೇಲೆ ಪರಿಣಾಮ ಬೀರಿದ್ದು, ಹಲವಾರು ರೈಲುಗಳ ಸಂಚಾರಕ್ಕೆ ಅಡ್ಡಿಯುಂಟಾಗಿದೆ.

ವತ್ವಾದಲ್ಲಿ ಕಳೆದ ರಾತ್ರಿ 11 ಗಂಟೆ ಸುಮಾರಿಗೆ ನಡೆದ ಈ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಅಥವಾ ನಿರ್ಮಿಸಿದ ರಚನೆಗೆ ಯಾವುದೇ ಹಾನಿ ಉಂಟಾಗಿಲ್ಲ ಎಂದು ರಾಷ್ಟ್ರೀಯ ಹೈಸ್ಪೀಡ್ ರೈಲು ನಿಗಮ ತಿಳಿಸಿದೆ. ಆದಾಗ್ಯೂ, ಘಟನೆಯು ರೈಲು ಸಂಚಾರದ ಮೇಲೆ ಪರಿಣಾಮ ಬೀರಿತು, ಕನಿಷ್ಠ 25 ರೈಲುಗಳನ್ನು ರದ್ದುಗೊಳಿಸಲಾಯಿತು, ಆರು ಮಾರ್ಗಗಳನ್ನು ಬೇರೆ ಕಡೆ ತಿರುಗಿಸಲಾಗಿದೆ ಎಂದು ಅಹಮದಾಬಾದ್ ರೈಲ್ವೆ ವಿಭಾಗದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಂಚಾರಕ್ಕೆ ಅನುಕೂಲವಾಗುವಂತೆ ರೈಲು ಮಾರ್ಗದ ಮೇಲೆ ಬಿದ್ದರು ಇಂಜಿನ್ ಹೆವಿ ಡ್ಯೂಟಿ ಕ್ರೇನ್‌ಗಳ ಸಹಾಯದಿಂದ ಪುನಃಸ್ಥಾಪನೆಗೆ ಪ್ರಯತ್ನಗಳು ನಡೆಯುತ್ತಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಹಮದಾಬಾದ್ ಬಳಿಯ ವತ್ವಾದಲ್ಲಿ ವಯಡಕ್ಟ್ ನಿರ್ಮಾಣಕ್ಕಾಗಿ ಬಳಸಲಾದ ಸೆಂಟಲ್ ಲಾಂಚಿಂಗ್ ಗ್ಯಾಂಟ್ರಿಯೊಂದು ಕಾಂಕ್ರೀಟ್ ಗರ್ಡರ್ ಉಡಾವಣೆಯನ್ನು ಪೂರ್ಣಗೊಳಿಸಿದ ನಂತರ ಹಿಂತೆಗೆದುಕೊಳ್ಳುತ್ತಿದ್ದಾಗ ಅದು ಆಕಸ್ಮಿಕವಾಗಿ ತನ್ನ ಜಾರಿತು ಸುತ್ತಮುತ್ತಲಿನ ಹಳಿಯ ಮೇಲೆ ರೈಲು ಸಂಜಾರ ನಿಲ್ಲಿಸಲಾಯಿತು.

ಹಿರಿಯ ಅಧಿಕಾರಿಗಳು ಈಗಾಗಲೇ ಸ್ಥಳದಲ್ಲಿ ಪೊಲೀಸ್ ಮತ್ತು ಅಗ್ನಿಶಾಮಕ ಸೇವೆಗಳ ಅಧಿಕಾರಿಗಳು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಯಾವುದೇ ಸಾವುನೋವುಗಳು ವರದಿಯಾಗಿಲ್ಲ. ನಿರ್ಮಿಸಿದ ರಚನೆಗೆ ಯಾವುದೇ ಹಾನಿಯಾಗಿಲ್ಲ ಎಂದು ಅದು ಹೇಳಿದೆ.




ನಗರದ ಚಿಕ್ಕಬಾಣಾವರದಲ್ಲಿರುವ ಅನ್ನಪೂರ್ಣೇಶ್ವರಿ ಮಾತಾ ಟ್ರಸ್ಟ್‌ನ ಬಿಲ್ವ ವೃಕ್ಷ ವೃದ್ಧಾಶ್ರಮದಲ್ಲಿ ಆಯೋಜಿಸಲಾಗಿದ್ದ ಅಂತರ್‌ರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಮಹಿಳಾ ಸಾಧಕಿಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಕಾರ್ಯದರ್ಶಿ ನೇತ್ರಾವತಿ, ಹಿರಿಯ ಜ್ಯೋತಿಷಿ ಕೃಷ್ಣಪ್ಪ, ಗಂಗಾಬಿಕೆ, ವಿಶಾಲಾಕ್ಷಮ್ಮ, ಸುಲೋಚನ, ಭಾಗ್ಯ, ಲಲಿತಮ್ಮ ಸ್ವಾಧ್ವಿ ಉನ್ಮೇಶಭಾರತೀ, ಮಂಜುಳಾ ಮತ್ತಿತರರು ಭಾಗವಹಿಸಿದ್ದರು.



# ವೃತ್ತಿ ಬದುಕಲ್ಲಿ ಸಾಕಷ್ಟು ಏಳು-ಬೀಳು

ಬಾಲಿವುಡ್ ನಟಿ ಕಂಗನಾ ರಣಾವತ್ ಅವರಿಗೆ ದೊಡ್ಡ ಮಟ್ಟದ ಖ್ಯಾತಿ ಸಿಕ್ಕಿದೆ. ಅವರಿಗೆ ಮಾರ್ಚ್ 23 ಜನ್ಮದಿನ. ಅವರು ಈಗ ಕೇವಲ ನಟಿ ಅಲ್ಲ.

ಹಿಮಾಚಲ ಪ್ರದೇಶದ ಮಂಡಿಯ ಸಂಸದೆ ಕೂಡ ಹೌದು. ಕಂಗನಾ ರಣಾವತ್ ಅವರ ನೆಟ್ ವರ್ತ್ ಎಷ್ಟು? ಇಷ್ಟು ವರ್ಷಗಳ ಕಾಲ ಚಿತ್ರರಂಗದಲ್ಲಿ ಕಳೆದ ಅವರ ಒಟ್ಟೂ ಆಸ್ತಿ ಎಷ್ಟು? ಆ ಬಗ್ಗೆ ಈ ಸ್ಟೋರಿಯಲ್ಲಿ ಮಾಹಿತಿ ಇದೆ. ಅದನ್ನು ತಿಳಿದುಕೊಳ್ಳೋಣ.

ಕಂಗನಾ ಚಿತ್ರರಂಗಕ್ಕೆ ಬಂದು 20 ವರ್ಷಗಳು ಕಳೆಯುತ್ತಾ ಬಂದಿವೆ. ಅವರು 2006ರಲ್ಲಿ ರಿಲೀಸ್ ಆದ 'ಗ್ಯಾಂಗ್‌ಸ್ಟರ್' ಚಿತ್ರದಲ್ಲಿ ಮೊದಲ ಬಾರಿಗೆ ಕಾಣಿಸಿಕೊಂಡರು. ಈ ಚಿತ್ರ ಸೂಪರ್ ಹಿಟ್ ಆಯಿತು. ಈ ಸಿನಿಮಾದಲ್ಲಿ ಸಿಮ್ರನ್ ಹೆಸರಿನ ಪಾತ್ರವನ್ನು ಅವರು ಮಾಡಿದರು. ಆ ಬಳಿಕ 'ಫ್ಯಾಷನ್' ಸಿನಿಮಾ ಮಾಡಿ ಅವರು ಮತ್ತಷ್ಟು ಗಮನ ಸೆಳೆದರು.

ನಂತರ ಕಂಗನಾ ಅವರು ಸಾಲು ಸಾಲು ಚಿತ್ರಗಳನ್ನು ಮಾಡಿದರು. ದಿನ ಕಳೆದಂತೆ ಅವರ ಆಲೋಚನೆ ಬದಲಾಯಿತು. ಚಿತ್ರರಂಗದಲ್ಲಿ ನೆಪೋಟಿಸಂ ಇದೆ, ನನ್ನನ್ನು ತುಳಿಯುತ್ತಿದ್ದಾರೆ ಎಂದೆಲ್ಲ ಹೇಳುತ್ತಾ ಬಂದರು. ಕಂಗನಾ 19 ವರ್ಷಗಳ ವೃತ್ತಿ ಜೀವನದಿಂದ ಸಾಕಷ್ಟು ಗಳಿಸಿದ್ದಾರೆ. ಅವರ ಆಸ್ತಿ 91 ಕೋಟಿ ರೂಪಾಯಿ ಅಷ್ಟಿದೆ.

ಅವರು 2022–23ನೇ ಅವಧಿಯಲ್ಲಿ ಕೇವಲ 4 ಕೋಟಿ ರೂಪಾಯಿ ಗಳಿಕೆ ಮಾಡಿದ್ದಾರೆ. 2021–22ರಲ್ಲಿ 12 ಕೋಟಿ ರೂಪಾಯಿ, 2020–21ರಲ್ಲಿ 12 ಕೋಟಿ ರೂಪಾಯಿ, 2019–20ರಲ್ಲಿ ಅವರು 10 ಕೋಟಿ ರೂಪಾಯಿ ಗಳಿಕೆ ಮಾಡಿದ್ದಾರೆ. ಅವರ ಇನ್‌ಕಮ್ ಇತ್ತೀಚಿಗಿನ ವರ್ಷಗಳಲ್ಲಿ ಕಡಿಮೆ ಆಗಿದೆ.

ಕಂಗನಾ ಅವರಿಗೆ ಕಾರುಗಳ ಬಗ್ಗೆ ಹೆಚ್ಚು ಆಸಕ್ತಿ ಇಲ್ಲ. ಹೀಗಾಗಿ, ಅವರು ಕೇವಲ ಓಡಾಟಕ್ಕೆ ಮಾತ್ರ ಐಷಾರಾಮಿ ಕಾರನ್ನು ಬಳಕೆ ಮಾಡಿಕೊಳ್ಳುತ್ತಾರೆ. ಕಂಗನಾ ಅವರು ಸಂಸದೆ ಆಗಿರುವುದರಿಂದ ಜನ ಸಾಮಾನ್ಯರಿಗೂ ರೀಚ್ ಆಗುತ್ತಾ ಇದ್ದಾರೆ.

ತಾವು ರಾಜಕೀಯದಲ್ಲಿ ಗೆಲುವು ಕಂಡರೆ ಸಿನಿಮಾದಿಂದ ದೂರವೇ ಇರೋದಾಗಿ ಅವರು ಹೇಳಿದ್ದರು. ಹೀಗಿರುವಾಗಲೇ ಅವರು ಹೊಸ ಸಿನಿಮಾ ಮಾಡಿಲ್ಲ. ಇದು ಸಾಕಷ್ಟು ಅನುಮಾನ ಮೂಡಿಸಿದೆ. ಅವರು ಸಿನಿಮಾದಿಂದ ದೂರವೇ ಆದರೆ ಎಂಬ ಪ್ರಶ್ನೆ ಹುಟ್ಟುಹಾಕಿದೆ. ಅಲ್ಲದೆ, ಅವರ ವಿವಾಹದ ಬಗ್ಗೆಯೂ ಅಧಿಕೃತ ಘೋಷಣೆ ಆಗಿಲ್ಲ.



# 120ಕ್ಕೂ ಹೆಚ್ಚು ಚಿತ್ರಮಂದಿರದಲ್ಲಿ 'ರಾಬಿನ್‌ಹುಡ್'

ಕನ್ನಡತಿ ಶ್ರೀಲೀಲಾ ನಟಿಸಿರುವ ಮತ್ತೊಂದು ತೆಲುಗು ಸಿನಿಮಾ ಬಿಡುಗಡೆ ಆಗುತ್ತಿದೆ. ಶ್ರೀಲೀಲಾ ನಟನೆಯ ಎಂಟು ತೆಲುಗು ಸಿನಿಮಾಗಳು ಈ ವರೆಗೆ ಬಿಡುಗಡೆ ಆಗಿದ್ದು, ಇದು ಒಂಬತ್ತನೇ ಸಿನಿಮಾ ಆಗಿದೆ. 'ರಾಬಿನ್‌ಹುಡ್' ಹೆಸರಿನ ಈ ಸಿನಿಮಾವನ್ನು 'ಪುಷ್ಪ' ಸಿನಿಮಾ ಸರಣಿಗೆ ಬಂಡವಾಳ ತೊಡಗಿಸಿದ್ದ ಮೈತ್ರಿ ಮೂವಿ ಮೇಕರ್ಸ್‌ನವರು ನಿರ್ಮಾಣ ಮಾಡಿದ್ದಾರೆ. ಸಿನಿಮಾದ ಹಾಡುಗಳು, ಟ್ರೈಲರ್, ಟೀಸರ್ ಈಗಾಗಲೇ ಬಿಡುಗಡೆ ಆಗಿದ್ದು, ಗಮನ ಸೆಳೆದಿದೆ. ಕರ್ನಾಟಕದಲ್ಲಿಯೂ ಈ ಸಿನಿಮಾ ಅದ್ದೂರಿಯಾಗಿ ಬಿಡುಗಡೆ ಆಗುತ್ತಿದ್ದು, ಕನ್ನಡದಲ್ಲಿ ವಿಕೆ ಫಿಲಮ್ಸ್ ಈ ಸಿನಿಮಾದ ವಿತರಣೆ ಮಾಡುತ್ತಿದೆ. 'ಜಯಂ'ಸಿನಿಮಾ ಖ್ಯಾತಿಯ ನಿತಿನ್ ಮುಖ್ಯ ಪಾತ್ರದಲ್ಲಿ 'ರಾಬಿನ್ ಹುಡ್' ಸಿನಿಮಾ ಮಾರ್ಚ್ 28ರಂದು ಅದ್ದೂರಿಯಾಗಿ ಬಿಡುಗಡೆ ಆಗುತ್ತಿದೆ. ಸಿನಿಮಾದ ಪ್ರಚಾರ ಕಾರ್ಯ ಬಲು ಜೋರಾಗಿ ನಡೆಯುತ್ತಿದೆ. ಈ ತೆಲುಗು ಸಿನಿಮಾವನ್ನು ಕರ್ನಾಟಕದಲ್ಲಿ ವಿಕೆ ಫಿಲಂಸ್ ವಿತರಣೆಯ ಜವಾಬ್ದಾರಿ ಹೊತ್ತಿದೆ.

ಸಿನಿಮಾದ ನಟರನ್ನು ಕರ್ನಾಟಕಕ್ಕೂ ಕರೆತಂದು ಪ್ರಚಾರ ಮಾಡುವ ಸಾಧ್ಯತೆ ಇದೆ. ವೆಂಕಿ ಕುಡುಮುಲ 'ರಾಬಿನ್ ಹುಡ್' ಸಿನಿಮಾ ನಿರ್ದೇಶನ ಮಾಡಿದ್ದಾರೆ. ಇನ್ನುಳಿದಂತೆ ರಾಜೇಂದ್ರ ಪ್ರಸಾದ್, ವೆನ್ನೆಲಾ ಕಿಶೋರ್ ಮತ್ತು ಬ್ರಹ್ಮಾಜಿ ಸೇರಿದಂತೆ ಘಟಾನುಘಟಿ ಪೋಷಕ ಪಾತ್ರಧಾರಿಗಳು ಚಿತ್ರದಲ್ಲಿದ್ದಾರೆ. ಜಿವಿ ಪ್ರಕಾಶ್ ಕುಮಾರ್ ಚಿತ್ರಕ್ಕೆ ಸಂಗೀತ ಸಂಯೋಜಿಸಿದ್ದಾರೆ. ಸಾಯಿ ಶ್ರೀರಾಮ್ ಛಾಯಾಗ್ರಹಣ ಮತ್ತು ಪ್ರವೀಣ್ ಪುಡಿ ಅವರ ಸಂಕಲನ ಚಿತ್ರಕ್ಕಿದೆ. ಕರ್ನಾಟಕದಲ್ಲಿ ಸುಮಾರು 120ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಈ ಸಿನಿಮಾವನ್ನು ಬಿಡುಗಡೆ ಮಾಡುತ್ತಿದೆ ವಿಕೆ ಫಿಲಮ್ಸ್. ಬಜೆಟ್‌ನಲ್ಲಿ ಏಕರೂಪ ಟಿಕೆಟ್ ಘೋಷಣೆ ಮಾಡಿದ ಬಳಿಕ ಬಿಡುಗಡೆ ಆಗುತ್ತಿರುವ ಮೊದಲ ದೊಡ್ಡ ಬಜೆಟ್ ತೆಲುಗು ಸಿನಿಮಾ ಇದಾಗಿದೆ. ಈ ಸಿನಿಮಾಕ್ಕೆ ಕರ್ನಾಟಕದಲ್ಲಿ ಟಿಕೆಟ್ ದರ ಎಷ್ಟಿರಲಿದೆ ಎಂಬುದು ಕುತೂಹಲ ಕೆರಳಿಸಿದೆ.

'ರಾಬಿನ್‌ಹುಡ್' ಸಿನಿಮಾದ 'ಅದಿದಾ ಸರ್ಪ್ರೈಸು' ಐಟಂ ಹಾಡು ಇತ್ತೀಚೆಗೆ ಸಖತ್ ಸದ್ದು ಮಾಡುತ್ತಿದೆ. ಕೇತಿಕಾ ಶರ್ಮಾ ಈ ಐಟಂ ಹಾಡಿಗೆ ಸಖತ್ ಹಾಟ್ ಆಗಿ ಹೆಜ್ಜೆ ಹಾಕಿದ್ದಾರೆ. ಆದರೆ ತೆಲಂಗಾಣ ಮಹಿಳಾ ಆಯೋಗ ಸೇರಿದಂತೆ ಹಲವು ಮಹಿಳಾಪರ ಹೋರಾಟಗಾರರು ಹಾಡಿಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಹಾಡಿನಲ್ಲಿ ಅಶ್ಲೀಲ ಸಾಹಿತ್ಯ ಮತ್ತು ಅಶ್ಲೀಲ ನೃತ್ಯ ಪ್ರದರ್ಶಿಸಲಾಗಿದೆ ಎಂದು ಆರೋಪಿಸಲಾಗಿದೆ. ಹಾಡನ್ನು ಸಿನಿಮಾದಿಂದ ತೆಗೆಯುವಂತೆ ಸಹ ಒತ್ತಾಯಗಳು ಕೇಳಿ ಬಂದಿವೆ. ಆದರೆ ಚಿತ್ರತಂಡ ಈ ಆರೋಪಗಳಿಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

# ತನ್ನದೇ ಹೆಸರಲ್ಲಿದ್ದ ದಾಖಲೆ ಉಡೀಸ್!




ಐಪಿಎಲ್‌ನ ಎರಡನೇ ಪಂದ್ಯದಲ್ಲಿಂದು ರಾಜಸ್ಥಾನ್ ರಾಯಲ್ಸ್ ಮತ್ತು ಸನ್ ರೈಸರ್ಸ್ ಹೈದರಾಬದ್ ತಂಡಗಳು ಮುಖಾಮುಖಿ ಆಗಿವೆ. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿರುವ ಹೈದರಾಬಾದ್ ತಂಡ, ಮತ್ತೊಮ್ಮೆ ಸ್ಫೋಟಕ ಪ್ರದರ್ಶನ ನೀಡಿ ಐಪಿಎಲ್ ನಲ್ಲಿ ಎರಡನೇ ಅತ್ಯಧಿಕ ಸ್ಕೋರ್ ದಾಖಲಿಸಿದೆ.

ಆರಂಭಿಕರಾಗಿ ಬಂದ ಟ್ರಾವಿಸ್ ಹೆಡ್ ಮತ್ತು ಅಭಿಶೇಕ್ ಶರ್ಮಾ ತಂಡಕ್ಕೆ ಸ್ಫೋಟಕ ಬ್ಯಾಟಿಂಗ್ ಮೂಲಕ ಅಬ್ಬರಿಸಿದರು. ಅಭಿಶೇಕ್ 11 ಎಸೆತಗಳಲ್ಲಿ 24 ರನ್ ಚಚ್ಚಿ ನಿರ್ಗಮಿಸಿದರೆ, ಹೆಡ್ 31 ಎಸೆತದಲ್ಲಿ 67 ರನ್ ಬಾರಿಸಿದರು.

ಆದರೆ ಅಭಿಶೇಕ್ ಶರ್ಮಾ ನಿರ್ಗಮನದ ನಂತರ ಬ್ಯಾಟಿಂಗ್‌ಗೆ ಬಂದ ಇಶಾನ್ ಕಿಶನ್ ಆರಂಭದಿಂದಲೇ ವಿಧ್ವಂಸಕ ಪ್ರದರ್ಶನ ನೀಡಿದರು. ಇವರು ಕೇವಲ 47 ಎಸೆತಗಳಲ್ಲಿ ಅಜೇಯರಾಗಿ ಶತಕ ಸಮೇತ 106 ರನ್ ಬಾರಿಸಿದರು. ಉಳಿದಂತೆ ನಿತೀಶ್ ರೆಡ್ಡಿ (30), ಕ್ಲಾಸೇನ್ (34) ಕೂಡ ಭರ್ಜರಿ ಪ್ರದರ್ಶನ ನೀಡಿ ತಂಡದ ಸ್ಕೋರ್ ಅನ್ನು 286ಕ್ಕೆ ಕೊಂಡೊಯ್ಯುವಲ್ಲಿ ಯಶಸ್ವಿ ಆದರು.

ಇದರೊಂದಿಗೆ ಹೈದರಾಬಾದ್ ತಂಡ ಐಪಿಎಲ್‌ನಲ್ಲಿ ಎರಡನೇ ಅತ್ಯಧಿಕ ಸ್ಕೋರ್ ದಾಖಲಿಸಿ ತನ್ನದೇ ಹೆಸರಲ್ಲಿದ್ದ ಹಳೆಯ ದಾಖಲೆಯನ್ನು ಮುರಿದು ಹಾಕಿದೆ. ಐಪಿಎಲ್‌ನಲ್ಲಿ ಅತ್ಯಧಿಕ ಸ್ಕೋರ್ ಹೊಂದಿರುವ ದಾಖಲೆಯೂ ಹೈದರಾಬಾದ್ ಹೆಸರಲ್ಲಿದೆ. ಕಳೆದ ವರ್ಷ 287ರನ್ ಬಾರಿಸಿತ್ತು. ಇದು ಈವರೆಗಿನ ಐಪಿಎಲ್‌ನಲ್ಲಿ ದಾಖಲಾದ ಅತ್ಯಧಿಕ ಸ್ಕೋರ್ ಆಗಿದೆ.

# ಅನ್‌ಸೋಲ್ಡ್ ಆಗಿದ್ದ ಡೇಂಜರಸ್ ಬೌಲರ್ ರೀ ಎಂಟ್ರಿ!

ಐಪಿಎಲ್ 18ನೇ ಆವೃತ್ತಿ ಅದ್ದೂರಿಯಾಗಿ ಪ್ರಾರಂಭವಾಗಿದೆ. ಮೊದಲ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಕೆಕೆಆರ್ ತಂಡವನ್ನು ಮಣಿಸಿರುವ ಆರ್‌ಸಿಬಿ ಗೆಲುವಿನೊಂದಿಗೆ ಟೂರ್ನಿಯಲ್ಲಿ ಶುಭಾರಂಭ ಮಾಡಿದೆ.

ಡಬಲ್ ಹೆಡ್ಡರ್ ಪಂದ್ಯ ನಡೆಯುತ್ತಿದ್ದು, ಮೊದಲ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿ ಆಗಿವೆ. ಎರಡನೇ ಪಂದ್ಯದಲ್ಲಿ ಚೆನ್ನೈ ಮತ್ತು ಮುಂಬೈ ತಂಡಗಳು ಸೆಣಸಲಿವೆ.ಏತನ್ಮಧ್ಯೆ, ಲಕ್ನೋ ಸೂಪರ್ ಜೈಂಟ್ಸ್ ತಂಡಕ್ಕೆ ಎದುರಾಗಿದ್ದ ದೊಡ್ಡ ಆತಂಕ ದೂರವಾಗಿದೆ. ಹೌದು, ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಆರಂಭಿಕ ಪಂದ್ಯಕ್ಕೂ ಮುನ್ನವೇ ಎಲ್‌ಎಸ್‌ಜಿ ತಂಡಕ್ಕೆ ಭಾರೀ ಆಘಾತವಾಗಿತ್ತು. ಇದೀಗ ಅವರ ಸ್ಥಾನಕ್ಕೆ ಬದಲಿ ಆಟಗಾರನಾಗಿ ಡೇಂಜರಸ್ ಪ್ಲೇಯರ್ ತಂಡ ಸೇರಿಕೊಂಡಿದ್ದಾರೆ.

ಐಪಿಎಲ್ 18ನೇ ಋತುವಿಗಾಗಿ ಮೊಹ್ಸಿನ್ ಖಾನ್ ಅವರ ಸ್ಥಾನಕ್ಕೆ ಬದಲಿ ಆಟಗಾರನಾಗಿ ಲಕ್ನೋ ತಂಡ ವೇಗದ ಬೌಲರ್ ಶಾರ್ದೂಲ್ ಠಾಕೂರ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿದೆ. ಈ ಬಗ್ಗೆ ಐಪಿಎಲ್ ಆಡಳಿತ ಮಂಡಳಿ ಪ್ರಕಟಿಸಿದೆ. ಎಡಗೈ ವೇಗದ ಬೌಲರ್ ಮೊಹ್ಸಿನ್ ಖಾನ್ ಗಾಯಕ್ಕೆ ತುತ್ತಾಗಿ ಟಾಟಾ ಇಂಡಿಯನ್ ಪ್ರೀಮಿಯರ್ ಲೀಗ್ 18ನೇ ಆವೃತ್ತಿಯಿಂದ ಹೊರಬಿದ್ದಿದ್ದಾರೆ. ಅವರ ಸ್ಥಾನಕ್ಕೆ ಶಾರ್ದೂಲ್ ಠಾಕೂರ್ ಹೆಸರಿಸಲಾಗಿದೆ ಎಂದು ತಿಳಿಸಿದೆ. ಅನುಭವಿ ಬೌಲರ್ ಆಗಿರುವ ಶಾರ್ದೂಲ್ ಠಾಕೂರ್ ಅವರನ್ನು 2 ಕೋಟಿ ರೂ.ಗೆ ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಈ ಬೌಲರ್ ಮೂರು ಸ್ವರೂಪಗಳಲ್ಲಿ ಭಾರತವನ್ನು ಪ್ರತಿನಿಧಿಸಿದ್ದಾರೆ. ಅಲ್ಲದೆ ಐಪಿಎಲ್ ನಲ್ಲೂ 95 ಪಂದ್ಯಗಳನ್ನು ಆಡಿದ್ದಾರೆ. ಈ ಅವಧಿಯಲ್ಲಿ 94 ವಿಕೆಟ್ ಪಡೆದಿದ್ದಾರೆ. 36 ರನ್‌ಗೆ 4 ವಿಕೆಟ್ ಪಡೆದಿರುವ ಬೆಸ್ಟ್ ಸ್ಪೆಲ್ ಆಗಿದೆ. ಕಳೆದ ವರ್ಷ ನಡೆದಿದ್ದ ಐಪಿಎಲ್ ಮೆಗಾ ಹರಾಜಿನಲ್ಲಿ ಶಾರ್ದೂಲ್ ಅನ್‌ಸೋಲ್ಡ್ ಆಗಿದ್ದರು.

ಎಲ್‌ಎಸ್‌ಜಿ ತಂಡ ಮಾರ್ಚ್ 24ರ ಸೋಮವಾರ ವಿಶಾಖಪಟ್ಟಣದಲ್ಲಿ ದೆಹಲಿ ಕ್ಯಾಪಿಟಲ್ಸ್ ವಿರುದ್ಧ ಐಪಿಎಲ್ ಅಭಿಯಾನವನ್ನು ಪ್ರಾರಂಭಿಸಲಿದೆ.




# ಹನಿ ಕಾನ್ಸರ್ಟ್‌ನಲ್ಲಿ ನಟ ಯಶ್ ಭಾಗಿ

ಶನಿವಾರದಂದು ಖ್ಯಾತ ರ್ಯಾಪರ್, ಗಾಯಕ ಹನಿಸಿಂಗ್ ಅವರ ಲೈವ್ ಕಾನ್ಸರ್ಟ್ ಬಲು ಅದ್ದೂರಿಯಾಗಿ ಬೆಂಗಳೂರಿನಲ್ಲಿ ನಡೆಯಿತು. ಕಾನ್ಸರ್ಟ್‌ನಲ್ಲಿ ಅತಿಥಿಯಾಗಿ ನಟ ಯಶ್ ಭಾಗವಹಿಸಿದ್ದರು.

ಹನಿ ಸಿಂಗ್ ಅವರ ಲೈವ್ ಕಾನ್ಸರ್ಟ್‌ನಲ್ಲಿ ಶೋ ಸ್ಟಾಪರ್ ರೀತಿ ಅದ್ದೂರಿ ಎಂಟ್ರಿ ಕೊಟ್ಟ ನಟ ಯಶ್ ವೇದಿಕೆ ಮೇಲೆ ಕನ್ನಡದಲ್ಲಿಯೇ ಮಾತನಾಡಿ, ಗಾಯಕ ಹನಿ ಸಿಂಗ್ ಅವರಿಗೆ ಸ್ವಾಗತ ಕೋರಿದರು.

'ಎಲ್ಲರಿಗೂ ನಮಸ್ಕಾರ, ಮೊದಲು ಇವರಿಗೆ ಸ್ವಾಗತ ಕೋರೋಣ, ನಿಮಗೆ ಬೆಂಗಳೂರಿಗೆ ಸ್ವಾಗತ' ಎಂದು ಹನಿಸಿಂಗ್ ಅವರಿಗೆ ಸ್ವಾಗತ ಕೋರಿದರು. ಬಳಿಕ ಹನಿ ಸಿಂಗ್ ಅವರಿಗೆ, 'ನೀವು ಕನ್ನಡದಲ್ಲಿಯೂ ಹಾಡು ಹಾಡಬೇಕು' ಎಂದು ಒತ್ತಾಯಿಸಿದರು. ಅದಕ್ಕೆ ಹನಿ ಸಿಂಗ್, 'ಮುಂದಿನ ದಿನಗಳಲ್ಲಿ ಕನ್ನಡದಲ್ಲಿಯೂ ಹಾಡು ಹಾಡುವುದಾಗಿ' ಹೇಳಿದರು.

ನಟ ಯಶ್, ಅವರು ಹನಿ ಸಿಂಗ್ ಕಾನ್ಸರ್ಟ್‌ಗೆ ಬಂದಿದ್ದು ಅಲ್ಲಿ ನೆರೆದಿದ್ದವರಿಗೆ ಅಚ್ಚರಿ ಮೂಡಿಸಿತು. ಯಶ್, ಹನಿ ಸಿಂಗ್ ಕಾನ್ಸರ್ಟ್‌ನಲ್ಲಿ ಭಾಗಿ ಆಗುತ್ತಾರೆ ಎಂಬ ಯಾವುದೇ ಮುನ್ಸೂಚನೆ ಇರಲಿಲ್ಲ.

ಈಗ ಯಶ್, ಅವರು ಹನಿಸಿಂಗ್ ಅವರ ಕಾನ್ಸರ್ಟ್‌ಗೆ ನ ವೇದಿಕೆಗೆ ಬಂದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿವೆ. ಹಿಂದಿ ಹಾಡುಗಳ ಕಾನ್ಸರ್ಟ್‌ನಲ್ಲಿ ಕನ್ನಡದಲ್ಲಿ ಮಾತನಾಡಿದ್ದು ಮಾತ್ರವಲ್ಲದೆ, ಗಾಯಕನನ್ನು ಕನ್ನಡದ ಹಾಡುಗಳನ್ನು ಹಾಡಿ ಎಂದು ಒತ್ತಾಯಿಸಿರುವ ಬಗ್ಗೆ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಹನಿ ಸಿಂಗ್ ಸಹ ತಮ್ಮ ಇನ್‌ಸ್ಟಾಗ್ರಾಂನಲ್ಲಿ ಯಶ್ ಅವರ ಚಿತ್ರ, ವಿಡಿಯೋಗಳನ್ನು ಹಂಚಿಕೊಂಡಿದ್ದು, 'ನನ್ನ ಬೆಂಗಳೂರು ಕಾನ್ಸರ್ಟ್‌ಗೆ ಬಂದು ಹರಸಿದ್ದಕ್ಕೆ ನನ್ನ ಸಹೋದರ ಯಶ್‌ಗೆ ಧನ್ಯವಾದ' ಎಂದು ಬರೆದುಕೊಂಡಿದ್ದಾರೆ. ಈ ಹಿಂದೆ ದಿಲ್ಜೀತ್ ದೊಸ್ಸಾಂಜ್ ಬೆಂಗಳೂರಿನಲ್ಲಿ ಲೈವ್ ಕಾನ್ಸರ್ಟ್ ಮಾಡಿದಾಗ ದೀಪಿಕಾ ಪಡುಕೋಣೆಯನ್ನು ಸರ್ಪ್ರೈಸ್ ಅತಿಥಿಯಾಗಿ ಕರೆಸಿದ್ದರು.



Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**